VOLUME: 16 | 03 MAY 2026 | ಭಾನುವಾರ | RS: 2 | PAGE: 06 ISSUE: 87 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಬಹುಭಾಷಾ ನಟಿ ಅನುಪಮ ಪರಮೇಶ್ವರನ್ ಅವರು ತಮಿಳಿನ ಬಿಗ್ ಬಜೆಟ್ ಸಿನಿಮಾ ಒಂದರಲ್ಲಿ ನಾಯಕಿಯಾಗಿ ಕಾಣಿಸಿಕೊಳ್ಳಲಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಕ್ರೈಂ ಥ್ರಿಲ್ಲರ್ ಇದಾಗಿದ್ದು ಈ ಬಗ್ಗೆ ಯಾವುದೇ ಸರಿಯಾದ ಮಾಹಿತಿಗಳು ಲಭಿಸಿಲ್ಲ. ಅವರ ಆಪ್ತ ವಲಯದಲ್ಲಿ ತಮಿಳು ಸಿನಿಮಾದಲ್ಲಿ ಅಭಿನಯಿಸಲು ಒಪ್ಪಿರುವ ಬಗ್ಗೆ ಮಾತುಗಳೇ ಕೇಳಿಬರುತ್ತಿವೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಏಪ್ರಿಲ್ 30ರಂದು 993 ರೂ. ಹೆಚ್ಚಳದ ಬಳಿಕ ಬೆಂಗಳೂರು ನಗರದಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆ ಮೇ 1ರಿಂದ 3,152 ರೂ.ಗೆ ಏರಿದೆ. ಇದು ಬೆಂಗಳೂರಿನಲ್ಲಿ ಇದುವರೆಗಿನ ಅತ್ಯಧಿಕ ದರವಾಗಿದೆ. ಮಾರ್ಚ್ 1 ರಂದು 1,844 ರೂ.ಗಳಿದ್ದ ಸಿಲಿಂಡರ್ ಬೆಲೆ, ಏಪ್ರಿಲ್ 1ರಂದು 2,162ಕ್ಕೆ ಏರಿತು. ಈಗ ಪ್ರತಿ ಸಿಲಿಂಡರ್‌ಗೆ 1,308 ರೂ.ಗಳಷ್ಟು ಹೆಚ್ಚಿನ ಹಣ ಪಾವತಿಸಬೇಕಿದೆ. ಈ ಮೂಲಕ ಕೇವಲ 60 ದಿನಗಳಲ್ಲಿ ಶೇಕಡಾ 70ಕ್ಕಿಂತ ಹೆಚ್ಚಿನ ಏರಿಕೆ ಕಂಡುಬಂದಿದೆ. ಇದರಿಂದಾಗಿ ಬೆಲೆ ಏರಿಕೆಯಾಗಿದ್ದಲ್ಲದೆ, 150 ರೂ. ರಿಯಾಯಿತಿಯನ್ನೂ ಹಿಂಪಡೆಯಲಾಗಿದೆ.

# ಗ್ಯಾಸ್ ಬೆಲೆ ಏರಿಕೆ: ತಿನಿಸುಗಳ ದರ ದುಬಾರಿ...!

ಬೆಂಗಳೂರು: ಕಳೆದ ಎರಡು ತಿಂಗಳುಗಳಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ದರದಲ್ಲಿ ತೀವ್ರ ಹೆಚ್ಚಳ ಮಾಡಿರುವುದರಿಂದ ನಗರದ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳಲ್ಲಿನ ಊಟ ಮತ್ತು ಬೀದಿ ಬದಿಯ ತಿಂಡಿ ತಿನಿಸುಗಳ ಬೆಲೆಯಲ್ಲಿ ಮತ್ತೊಂದು ಸುತ್ತಿನ ಏರಿಕೆ ಆಗಲಿದೆ.

ಏಪ್ರಿಲ್ 30ರಂದು 993 ರೂ. ಹೆಚ್ಚಳದ ಬಳಿಕ ಬೆಂಗಳೂರು ನಗರದಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆ ಮೇ 1ರಿಂದ 3,152 ರೂ.ಗೆ ಏರಿದೆ. ಇದು ಬೆಂಗಳೂರಿನಲ್ಲಿ ಇದುವರೆಗಿನ ಅತ್ಯಧಿಕ ದರವಾಗಿದೆ. ಮಾರ್ಚ್ 1 ರಂದು 1,844 ರೂ. ಗಳಿದ್ದ ಸಿಲಿಂಡರ್ ಬೆಲೆ, ಏಪ್ರಿಲ್ 1ರಂದು 2,162ಕ್ಕೆ ಏರಿತು. ಈಗ ಪ್ರತಿ ಸಿಲಿಂಡರ್‌ಗೆ 1,308 ರೂ.ಗಳಷ್ಟು ಹೆಚ್ಚಿನ ಹಣ ಪಾವತಿಸಬೇಕಿದೆ. ಈ ಮೂಲಕ ಕೇವಲ 60 ದಿನಗಳಲ್ಲಿ ಶೇಕಡಾ 70ಕ್ಕಿಂತ ಹೆಚ್ಚಿನ ಏರಿಕೆ ಕಂಡುಬಂದಿದೆ. ಇದರಿಂದಾಗಿ ಬೆಲೆ ಏರಿಕೆಯಾಗಿದ್ದಲ್ಲದೆ, 150 ರೂ. ರಿಯಾಯಿತಿಯನ್ನೂ ಹಿಂಪಡೆಯಲಾಗಿದೆ.

ಜೊತೆಗೆ, ಹೋಟೆಲ್ ವಲಯಕ್ಕೆ ಸಾಕಷ್ಟು ಗ್ಯಾಸ್ ಪೂರೈಕೆಯೂ ಇಲ್ಲದೆ, ಸಮಸ್ಯೆಗಳನ್ನು ಎದುರಿಸುತ್ತಿದೆ. ಇತ್ತೀಚಿನ ದಿನಗಳಲ್ಲಿ ಎಲ್‌ಪಿಜಿ ಲಭ್ಯತೆಯು ಸುಮಾರು ಶೇಕಡಾ



60ಕ್ಕೆ ಇಳಿದಿದೆ. ಇದರಿಂದಾಗಿ ಹೋಟೆಲ್ ವ್ಯವಹಾರಗಳು ಪರ್ಯಾಯ ಮಾರ್ಗಗಳನ್ನು ಅನುಸರಿಸುವ ಮತ್ತು ಒತ್ತಡದಲ್ಲಿ ಕಾರ್ಯನಿರ್ವಹಿಸುವ ಅನಿವಾರ್ಯತೆ ಎದುರಾಗಿದೆ.

ಅಲ್ಲದೆ, ಕೆಲವೆಡೆ ಸಿಲಿಂಡರ್‌ಗಳನ್ನು ಬ್ಲಾಕ್ ಮಾರ್ಕೆಟ್‌ನಲ್ಲಿ 5,000ಕ್ಕೂ ಹೆಚ್ಚು ಹಣ ಕೊಟ್ಟು ಖರೀದಿಸಿರುವ ಘಟನೆಗಳೂ ವರದಿಯಾಗಿದೆ.

ಕರ್ನಾಟಕ ಹೋಟೆಲ್‌ಗಳ ಸಂಘದ ಅಧ್ಯಕ್ಷ ಜಿ.ಕೆ.ಶೆಟ್ಟಿ, ಸಣ್ಣ ತಿನಿಸುಗಳು, ಟೀ ಅಂಗಡಿಗಳು ಮತ್ತು ಬೀದಿ ಬದಿ ವ್ಯಾಪಾರಿಗಳಿಗೆ ಬೆಲೆ ಏರಿಕೆಯು ಹೆಚ್ಚು ಪರಿಣಾಮ ಬೀರಿದೆ. ಒಂದು ಕಪ್ ಕಾಫಿಯಿಂದ ಹಿಡಿದು ಅಲ್ಯೂಮಿನಿಯಂ ಮತ್ತು ಕಟ್ಲರಿಯಂತಹ ಇನ್‌ಪುಟ್ ವಸ್ತುಗಳವರೆಗೆ ಎಲ್ಲದರ ಮೇಲೆಯೂ ಸಿಲಿಂಡರ್ ಬೆಲೆ ಏರಿಕೆಯ ಬಿಸಿ ತಟ್ಟಿದೆ. ಅನೇಕ ಸಣ್ಣ ವ್ಯವಹಾರಗಳು ಸಂಕಷ್ಟಕ್ಕೆ ಸಿಲುಕಿವೆ ಎಂದು ಹೇಳಿದರು.

ಬೆಂಗಳೂರು ಹೋಟೆಲ್‌ಗಳ ಸಂಘದ ಗೌ.ಅಧ್ಯಕ್ಷ ಪಿ.ಸಿ.ರಾವ್ ಮಾತನಾಡಿ, ರೆಸ್ಟೋರೆಂಟ್‌ಗಳು ಮತ್ತು ತಿನಿಸುಗಳಲ್ಲಿನ ಎಲ್ಲಾ ಆಹಾರ ಪದಾರ್ಥಗಳ ಬೆಲೆ ಏರಿಕೆ ಅನಿವಾರ್ಯವಾಗಿದೆ. ಗ್ಯಾಸ್ ಪೂರೈಕೆ ಕೊರತೆ ಮತ್ತು ಹೆಚ್ಚುತ್ತಿರುವ ವೆಚ್ಚಗಳಿಂದಾಗಿ ಹೋಟೆಲ್‌ಗಳು ಏಪ್ರಿಲ್‌ನಲ್ಲಿ ಈಗಾಗಲೇ ಬೆಲೆಗಳನ್ನು ಹೆಚ್ಚಿಸಿವೆ. ಈಗ, 993 ರೂ. ಹೆಚ್ಚಳವು ಅಡುಗೆ ಅನಿಲ ಗ್ರಾಹಕರಿಗೆ ತುಂಬಾ ದೊಡ್ಡ ಹೊಡೆತವಾಗಿದೆ. ಆಹಾರದ ದರ ಹೆಚ್ಚಳದ ನಿರ್ಧಾರವನ್ನು ನಾವು ಹೋಟೆಲ್ ಉದ್ಯಮಿಗಳ ವಿವೇಚನೆಗೆ ಬಿಟ್ಟಿದ್ದೇವೆ ಎಂದು ತಿಳಿಸಿದರು.

ತೆರಿಗೆಯ ಬಗ್ಗೆಯೂ ಹೋಟೆಲ್ ಉದ್ಯಮಿಗಳು ಕಳವಳ ವ್ಯಕ್ತಪಡಿಸಿದ್ದಾರೆ. ವಾಣಿಜ್ಯ ಎಲ್‌ಪಿಜಿಗೆ ಶೇ.18ರಷ್ಟು ಜಿಎಸ್‌ಟಿ ಹಾಗೂ ಗೃಹಬಳಕೆ ಸಿಲಿಂಡರ್‌ಗಳಿಗೆ ಶೇ.5ರಷ್ಟು ಜಿಎಸ್‌ಟಿ ವಿಧಿಸಲಾಗುತ್ತದೆ. ನಾವು 568 ರೂ. ಜಿಎಸ್‌ಟಿ ಪಾವತಿಸುತ್ತಿದ್ದೇವೆ. ಅದನ್ನು ಶೇ.5ಕ್ಕೆ ಇಳಿಸಿದರೆ, ನಮಗೆ ಪ್ರತಿ ಸಿಲಿಂಡರ್ ಮೇಲೆ ಸುಮಾರು 400 ರೂ. ಉಳಿತಾಯವಾಗಲಿದೆ. ಬೆಲೆಗಳು ಗಗನಕ್ಕೇರಿರುವಾಗ ಇಂತಹ ಪರಿಹಾರ ಮಾರ್ಗಗಳು ಅಗತ್ಯವಾಗಿದೆ ಎಂದು ಪಿ.ಸಿ.ರಾವ್ ಹೇಳಿದರು.

## ಅಮಿತ್‌ಶಾ ಭೇಟಿಯಾದ ರಿಷಬ್

ಬೆಂಗಳೂರು: ಸಿನಿಮಾ ಮತ್ತು ರಾಜಕೀಯ ಭಾರತದಲ್ಲಿ ಜೊತೆ-ಜೊತೆಯಾಗಿಯೇ ಸಾಗುತ್ತದೆ. ಸಿನಿಮಾ ತಾರೆಯರು ರಾಜಕಾರಣಕ್ಕೆ ಬರುವುದು ಭಾರತದಲ್ಲಿ ಬಹಳ ಸಾಮಾನ್ಯ. ಈಗಲೂ ಸಹ ಹಲವಾರು ಮಂದಿ ಸಿನಿಮಾ ತಾರೆಯರು ರಾಜಕೀಯದಲ್ಲಿ ಸಕ್ರಿಯರಾಗಿದ್ದಾರೆ.

ಇನ್ನು ರಾಜಕಾರಣಿಗಳು ಸಹ ತಮ್ಮ ಪಕ್ಷದ ಪ್ರಚಾರಕ್ಕೆ, ಪಕ್ಷದ ನೀತಿಗಳ ಪ್ರಚಾರಕ್ಕೆ ದಶಕಗಳಿಂದಲೂ ಸಿನಿಮಾಗಳನ್ನು ಬಳಸಿಕೊಂಡೇ ಬರುತ್ತಿದ್ದಾರೆ. ಈ ನಿಟ್ಟಿನಲ್ಲಿ, ಜನಪ್ರಿಯ ನಟ-ನಟಿಯರು ರಾಜಕಾರಣಿಗಳ ಭೇಟಿ ಆಗುವುದು ಸಾಮಾನ್ಯ ಮತ್ತು ಕುತೂಹಲಕಾರಿಯೂ ಹೌದು.



ಇದೀಗ ಕನ್ನಡ ಚಿತ್ರರಂಗದ ಜನಪ್ರಿಯ ನಟ ಮತ್ತು ನಿರ್ದೇಶಕ ರಿಷಬ್ ಶೆಟ್ಟಿ ಅವರು ಕೇಂದ್ರ ಗೃಹ ಮಂತ್ರಿ, ರಾಷ್ಟ್ರೀಯ ಬಿಜೆಪಿ ನಾಯಕ ಅಮಿತ್ ಶಾ ಅವರನ್ನು ಭೇಟಿ ಆಗಿದ್ದಾರೆ. ರಿಷಬ್ ಶೆಟ್ಟಿ ಅವರು, ಅಮಿತ್ ಶಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಅಮಿತ್ ಶಾ ಜೊತೆಗಿನ ಭೇಟಿಯ ಚಿತ್ರಗಳನ್ನು ಅವರು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಚಿತ್ರಗಳಲ್ಲಿ ಅಮಿತ್ ಶಾ ಮತ್ತು ರಿಷಬ್ ಶೆಟ್ಟಿ ಅವರು ನಗುತ್ತಾ ಚರ್ಚಿಸುತ್ತಿರುವುದು ಕಾಣುತ್ತಿದೆ.

ಚಿತ್ರ ಹಂಚಿಕೊಂಡಿರುವ ರಿಷಬ್ ಶೆಟ್ಟಿ, 'ಗೌರವಾನ್ವಿತ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗುವ ಸೌಭಾಗ್ಯ ಸಿಕ್ಕಿತು. ಅವರು ಕಾಂತಾರ ಮತ್ತು ಕಾಂತಾರ ಅಧ್ಯಾಯ 1 ಸಿನಿಮಾಗಳ ಬಗ್ಗೆ ತಮ್ಮ ಮೆಚ್ಚುಗೆಯ ಮಾತುಗಳನ್ನು ಹಂಚಿಕೊಂಡರು. ಅದು ನನ್ನ ಅತ್ಯಂತ ಸ್ಮರಣೀಯ ಕ್ಷಣಗಳಲ್ಲಿ ಒಂದಾಯಿತು. ನನ್ನ ಮುಂಬರುವ ಸಿನಿಮಾಗಳ ಬಗ್ಗೆ ಕೇಳಿ ಮಾಹಿತಿ ಪಡೆದರು.

ಅವರು ನಮ್ಮ ಇತಿಹಾಸ, ಸಂಸ್ಕೃತಿ, ಕಲೆ ಮತ್ತು ಚಲನಚಿತ್ರ ನಿರ್ಮಾಣದ ಬಗ್ಗೆ ತಮ್ಮ ಆಳವಾದ ಜ್ಞಾನ ಮತ್ತು ತಿಳುವಳಿಕೆಯನ್ನು ಹೊಂದಿದ್ದಾರೆ. ಇಬ್ಬರೂ ಸಹ ಈ ಬಗ್ಗೆ ಚರ್ಚಿಸಿದ್ದು ಬಹಳ ಸಂತೋಷ ಎನಿಸಿತು' ಎಂದಿದ್ದಾರೆ.

## ಅವಧಿಗೆ ಮುನ್ನವೇ ಮುಂಗಾರು

ನವದೆಹಲಿ: ಮೇ 14 ರಿಂದ 16 ರ ನಡುವೆ ಭಾರತಕ್ಕೆ ಮುಂಗಾರು ಪ್ರವೇಶವಾಗಲಿದೆ. ಮೇ ತಿಂಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಅಂತ ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ದೇಶದ್ಯಾಂತ ಅಸ್ತಿತ್ವದಲ್ಲಿರುವ ಉರಿಬಿಸಿಲು ಪರಿಸ್ಥಿತಿಯಿಂದ ಶೀಘ್ರದಲ್ಲೇ ಪರಿಹಾರ ಸಿಗುವ ಸಾಧ್ಯತೆಯಿದೆ. ಮೇ ತಿಂಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ. ಮೇ 14 ರಿಂದ 16 ರ ಸುಮಾರಿಗೆ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಲ್ಲಿ ನೈಋತ್ಯ ಮಾನ್ಸೂನ್ ಆಗಮನವಾಗಲಿದೆ.

ಹಿಮಾಲಯದ ತಪ್ಪಲಿನ ಕೆಲವು ಭಾಗಗಳು, ಪೂರ್ವ ಕರಾವಳಿ ರಾಜ್ಯಗಳು, ಗುಜರಾತ್ ಮತ್ತು ಮಹಾರಾಷ್ಟ್ರಗಳಲ್ಲಿ ಈ ತಿಂಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಶಾಖದ ಅಲೆಯ ದಿನಗಳು ಮುಂದುವರಿಯುವ ಸಾಧ್ಯತೆಯಿದೆ ಎಂದು ಐಎಂಡಿ ತನ್ನ ಮಾಸಿಕ ಮುನ್ಸೂಚನೆಯಲ್ಲಿ ತಿಳಿಸಿದೆ.

ಮೇ ತಿಂಗಳಲ್ಲಿ ದೇಶಾದ್ಯಂತ ಸರಾಸರಿ ಮಳೆ ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ ಎಂದು ಇಲಾಖೆ ಗಮನಿಸಿದೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಶನಿವಾರ ಸರ್ಕಾರದ ಅಪರ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಭೆಗೂ ಮುನ್ನ ರಾಜ್ಯದ ಎಲ್ಲಾ ಇಲಾಖೆಗಳ ಮಾಹಿತಿ ಯೋಜನೆಗಳ ಪರಿಶೀಲನೆ, ಅನುಮೋದನೆಗಳು, ಯೋಜನೆಗಳ ಸಮನ್ವಯ ಕುರಿತಂತೆ ನೂತನ ಕರ್ನಾಟಕ ಪ್ರಗತಿ ಪೋರ್ಟಲ್ ಹಾಗೂ ಕೈಪಿಡಿ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಡುಗಡೆ ಮಾಡಿದರು.

ಸದಾ ಒಂದಿಲ್ಲೊಂದು ರಾಜಕೀಯ ವಿಚಾರಗಳಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಮತ್ತು ಸಂಸದ ತೇಜಸ್ವಿಸೂರ್ಯ ನಡುವೆ ಜಟಾಪಟಿ ನಡೆಯುತ್ತಲೇ ಇರುತ್ತವೆ. ಈ ನಡುವೆಯೂ ಅಭಿವೃದ್ಧಿ ವಿಚಾರ ಬಂದಾಗ ಇಬ್ಬರೂ ಒಂದೇ ವೇದಿಕೆಯಲ್ಲಿ ಒಟ್ಟಿಗೆ ಕಾಣಿಸಿಕೊಂಡಿರುವ ಉದಾಹರಣೆಗಳಿವೆ. ಅದರಂತೆ ನಿನ್ನೆಯೂ ವಿವಿಧ ಕಾಮಗಾರಿಗಳಿಗೆ ಚಾಲನೆ, ಶಂಕುಸ್ಥಾಪನೆ ನಿಮಿತ್ತ ಡಿಸಿಎಂ ಭಾಗವಹಿಸಿದ್ದ ಕೆಲ ಕಾರ್ಯಕ್ರಮಗಳಲ್ಲಿ ಸಂಸದರೂ ಭಾಗಿಯಾಗಿದ್ದರು.

## ಗಮನ ಸೆಳೆದ ತೇಜಸ್ವಿಸೂರ್ಯ ಪೋಸ್ಟ್

ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಪುತ್ರಿ ಐಶ್ವರ್ಯ ಹೆಗ್ಡೆ ಹೆಣ್ಣು ಮಗುವಿಗೆ ಜನ್ಮ ನೀಡಿದ್ದು, ವಿಷಯ ತಿಳಿಯುತ್ತಿದ್ದಂತೆಯೇ ಡಿಕೆಶಿ ಖುಷಿಯಲ್ಲಿ ಆಸ್ಪತ್ರೆಗೆ ಬಂದು ಮೊಮ್ಮಗಳನ್ನು ಮುದ್ದಾಡುವ ಜೊತೆಗೆ ಮಗಳ ಆರೋಗ್ಯ ವಿಚಾರಿಸಿದ್ದರು. ವಿಶೇಷ ಅಂದ್ರೆ ಕಾರ್ಮಿಕ ದಿನಾಚರಣೆ, ಕರ್ನಾಟಕದ ರಾಜಕೀಯ ಮುತ್ಸದ್ಧಿ ಎಸ್.ಎಂ.ಕೃಷ್ಣ ಜನ್ಮದಿನ ಹಾಗೂ ಶುಭ್ರ ಪೂರ್ಣಿಮೆಯ ದಿನವೇ ತಾತನಾಗಿ ಡಿಸಿಎಂ ಬಡ್ತಿ ಪಡೆದಿದ್ದು, ಮಾಧ್ಯಮದವರ ಪ್ರಶ್ನೆಗೆ ಮುಗುಳ್ನಕ್ಕಿ ಸಂತಸ ವ್ಯಕ್ತಪಡಿಸಿದ್ದರು. ಈ ನಡುವೆ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಮಾಡಿರುವ ಎಕ್ಸ್ ಪೋಸ್ಟ್ ನೆಟ್ಟಿಗರ ಗಮನ ಸೆಳೆದಿದೆ.



ಸದಾ ಒಂದಿಲ್ಲೊಂದು ರಾಜಕೀಯ ವಿಚಾರಗಳಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಮತ್ತು ಸಂಸದ ತೇಜಸ್ವಿಸೂರ್ಯ ನಡುವೆ ಜಟಾಪಟಿ ನಡೆಯುತ್ತಲೇ ಇರುತ್ತವೆ. ಈ ನಡುವೆಯೂ ಅಭಿವೃದ್ಧಿ ವಿಚಾರ ಬಂದಾಗ ಇಬ್ಬರೂ ಒಂದೇ ವೇದಿಕೆಯಲ್ಲಿ ಒಟ್ಟಿಗೆ ಕಾಣಿಸಿಕೊಂಡಿರುವ ಉದಾಹರಣೆಗಳಿವೆ. ಅದರಂತೆ ನಿನ್ನೆಯೂ ವಿವಿಧ ಕಾಮಗಾರಿಗಳಿಗೆ ಚಾಲನೆ, ಶಂಕುಸ್ಥಾಪನೆ ನಿಮಿತ್ತ ಡಿಸಿಎಂ ಭಾಗವಹಿಸಿದ್ದ ಕೆಲ ಕಾರ್ಯಕ್ರಮಗಳಲ್ಲಿ ಸಂಸದರೂ ಭಾಗಿಯಾಗಿದ್ದರು. ಈ ವೇಳೆ ತಾನು ತಾತ ಆಗುತ್ತಿದ್ದೇನೆ ಎಂದು ಡಿಕೆಶಿ ತಮ್ಮ ಬಳಿ ಸಂತಸ ಹಂಚಿಕೊಂಡ ವಿಚಾರವನ್ನು ತೇಜಸ್ವಿ ಸೂರ್ಯ ತಮ್ಮ ಪೋಸ್ಟ್‌ನಲ್ಲಿ ಹಂಚಿಕೊಂಡಿದ್ದಾರೆ.

ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಜೊತೆ ಬೆಂಗಳೂರು ದಕ್ಷಿಣದ ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದು, ಕಾರ್ಯಕ್ರಮಗಳ ಮಧ್ಯೆ ಕಾರಿನಲ್ಲಿ ಜೊತೆಗೆ ಪ್ರಯಾಣಿಸುವಾಗ ಅವರಿಗೆ ಮನೆಯಿಂದ ಪದೇ ಪದೇ ಫೋನ್ ಬರುತ್ತಿತ್ತು. ವಿಚಾರಿಸಿದಾಗ, ಇವತ್ತು ನನ್ನ ಮಗಳ ಡೆಲಿವರಿ. ನಾನು ತಾತ ಆಗುತ್ತಿದ್ದೇನೆ ಎಂದರು. ಒಂದು ಕಡೆ ಕುಟುಂಬದ ಅತ್ಯಂತ ಸಂತೋಷದ ಕ್ಷಣ. ಇನ್ನೊಂದು ಕಡೆ ಸಾರ್ವಜನಿಕ ಜವಾಬ್ದಾರಿ. ಆದರೂ ಅವರು ಫ್ಲೈಓವರ್ ಉದ್ಘಾಟನೆ, ಸ್ಕೈವಾಕ್ ಶಂಕುಸ್ಥಾಪನೆ ಸೇರಿದಂತೆ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗಿಯಾದರು. The first casualty of public life is personal life ಅಂತ ಮಾತಿದೆ. ಇಂತಹ ಸಂದರ್ಭಗಳಲ್ಲಿ ಆ ಮಾತಿನ ಅರ್ಥ ಇನ್ನಷ್ಟು ಸ್ಪಷ್ಟವಾಗುತ್ತದೆ. ತಾತನಾದ ಡಿ.ಕೆ. ಶಿವಕುಮಾರ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ಅವರ ಮಗಳು ಐಶ್ವರ್ಯ ಅವರಿಗೆ, ಮಗುಗೆ ಮತ್ತು ಕುಟುಂಬಕ್ಕೆ ಭಗವಂತ ಆಯುಷ್ಯ, ಆರೋಗ್ಯ ಮತ್ತು ಸಂತೋಷ ಕರುಣಿಸಲಿ ಎಂದು ತೇಜಸ್ವಿ ಸೂರ್ಯ ಎಕ್ಸ್ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ.

## 'ಚುನಾವಣೋತ್ತರ ಸಮೀಕ್ಷೆ ನಂಬಲ್ಲ'

ಗುವಾಹಟಿ: "ಚುನಾವಣೋತ್ತರ ಸಮೀಕ್ಷೆಗಳು ನಮ್ಮ ಪರವಾಗಿರಲಿ, ಇಲ್ಲದಿರಲಿ ಅದರ ಮೇಲೆ ನನಗೆ ನಂಬಿಕೆ ಇಲ್ಲ. ನನ್ನ ತಂತ್ರಗಾರಿಕೆಯೇ ಬೇರೆ, ಈ ಬಾರಿ ಎಲ್ಲಾ ರಾಜ್ಯಗಳಲ್ಲಿ ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬರಲಿದೆ. ಅಸ್ಸಾಂನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವ ವಿಶ್ವಾಸವಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಗುವಾಹಟಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಜೊತೆ ಸಭೆ ನಡೆಸಿದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಅಸ್ಸಾಂ ರಾಜ್ಯದ ಕಾಂಗ್ರೆಸ್ ಪಕ್ಷವು ಒಗ್ಗಟ್ಟಾಗಿದ್ದು, ಆತ್ಮವಿಶ್ವಾಸದಲ್ಲಿದೆ. ನಮ್ಮ ತಂಡದ ಪರಿಶ್ರಮದ ಬಗ್ಗೆ ನನಗೆ ಹೆಮ್ಮೆ ಇದೆ. ಚುನಾವಣೆಯನ್ನು ಬಹಳ ಚೆನ್ನಾಗಿ ನಡೆಸಿದ್ದು, ಸಕಾರಾತ್ಮಕ ಫಲಿತಾಂಶದ ನಿರೀಕ್ಷೆ ಇದೆ. ಮಾಧ್ಯಮಗಳ ವರದಿ ಏನೇ ಇದ್ದರೂ ನನಗೆ ಪಕ್ಷ ಅಧಿಕಾರ ಬರುವ ವಿಶ್ವಾಸವಿದೆ. ಮಾಧ್ಯಮಗಳ ವರದಿ ನೋಡಿ ಅಸ್ಸಾಂ ಮತದಾರರಲ್ಲಿ ಆತಂಕ ಮೂಡಿದೆ. ಅಸ್ಸಾಂನಲ್ಲಿ ಬಿಜೆಪಿ ಜೊತೆ ಗುರುತಿಸಿಕೊಂಡವರಿಗೆ ಮಾತ್ರ ಉಚಿತ ಯೋಜನೆಗಳನ್ನು ನೀಡಲಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಯಾರು ಯಾರಿಗೆ ಮತ ಹಾಕಿದ್ದಾರೆ ಎಂದು ಹೇಗೆ ಹೇಳಲು ಸಾಧ್ಯ? ನಮ್ಮ ಆಂತರಿಕ ಸಮೀಕ್ಷೆ ಉತ್ತಮವಾಗಿದ್ದು, ಯಾರ ನೆರವು ಇಲ್ಲದೇ ನಾವು ಅಧಿಕಾರ ಹಿಡಿಯುವ ವಿಶ್ವಾಸ ನಮ್ಮ ಅಭ್ಯರ್ಥಿಗಳಲ್ಲಿ ಇದೆ" ಎಂದು ತಿಳಿಸಿದರು.

"ಇದೇ ವೇಳೆ ನಮಗೆ ಬಂದಿರುವ ಮಾಹಿತಿ ಪ್ರಕಾರ ನಮ್ಮ ಅಭ್ಯರ್ಥಿಗಳನ್ನು ಬಿಜೆಪಿ ಸಂಪರ್ಕಿಸಿದೆ. ಇದು ಬಿಜೆಪಿಯವರು ಆತಂಕಕ್ಕೆ ಒಳಗಾಗಿರುವುದಕ್ಕೆ ಸಾಕ್ಷಿಯಾಗಿದೆ. ಬಿಜೆಪಿ ಗೆಲ್ಲುವ ವಿಶ್ವಾಸ ಕಳೆದುಕೊಂಡಿದೆ. ಆದರೆ ನಾವೆಲ್ಲರೂ ಒಟ್ಟಾಗಿದ್ದೇವೆ. ಹೀಗಾಗಿ ನಾವು ಇಲ್ಲಿ ಸೇರಿ ಮತದಾನದ ದಿನವನ್ನು ನಾವು ಹೇಗೆ ಎದುರುಸಬೇಕು ಎಂದು ಮಾರ್ಗದರ್ಶನ ನೀಡಲಾಗಿದೆ. ಬಿಜೆಪಿ ಆಡಳಿತ ಯಂತ್ರ ದುರ್ಬಳಕೆಗೆ ಮುಂದಾಗಲಿದ್ದು, ನಾವು ಯಾವ ರೀತಿ ಜಾಗರೂಕರಾಗಿರಬೇಕು ಎಂದು ಮಾರ್ಗದರ್ಶನ ನೀಡಿದ್ದೇವೆ" ಎಂದರು.

## ಟಿಎಂಸಿ ಅರ್ಜಿ ವಜಾ

ನವದೆಹಲಿ: ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮತ ಎಣಿಕೆ ಪ್ರಕ್ರಿಯೆಗೆ ಕೇಂದ್ರ ಸರ್ಕಾರ ಮತ್ತು ಪಿಎಸ್‌ಯು (ಸಾರ್ವಜನಿಕ ವಲಯ ಉದ್ಯಮ) ನೌಕರರನ್ನು ನೇಮಿಸುವ ಚುನಾವಣಾ ಆಯೋಗದ ನಿರ್ಧಾರವನ್ನು ಪ್ರಶ್ನಿಸಿ ತೃಣಮೂಲ ಕಾಂಗ್ರೆಸ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾಗೊಳಿಸಿದೆ.

ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಟಿಎಂಸಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿಗಳಾದ ಜಸ್ಟಿಸ್ ಪಿ.ಎಸ್. ನರಸಿಂಹ ಮತ್ತು ಜಸ್ಟಿಸ್ ಜಾಯ್‌ಮಲ್ಯ ಬಾಗ್ಚಿ ಅವರ ಪೀಠ ವಿಚಾರಣೆ ನಡೆಸಿತು.

ಟಿಎಂಸಿ ಪರ ವಕೀಲ ಕಪಿಲ್ ಸಿಬಲ್ ಅವರು ಚುನಾವಣಾ ಆಯೋಗದ ಸುತ್ತೋಲೆಯನ್ನು ಪ್ರಶ್ನಿಸಿದರು. ಇದು ರಾಜ್ಯ ಸರ್ಕಾರಿ ನೌಕರರನ್ನು ಉದ್ದೇಶಪೂರ್ವಕವಾಗಿ ಹೊರಗಿಡುವ ಉದ್ದೇಶ ಹೊಂದಿದೆ ಎಂದು ಹೇಳಿದರು. ಇದಕ್ಕೆ ಉತ್ತರಿಸಿದ ನ್ಯಾಯಮೂರ್ತಿ ಬಾಗ್ಚಿ, ಚುನಾವಣಾ ಆಯೋಗದ ನಿಯಮಗಳು ಸ್ಪಷ್ಟವಾಗಿವೆ.

## ಆಡಳಿತ ಚುರುಕು, ಪಾರದರ್ಶಕತೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಕಟ್ಟುನಿಟ್ಟಿನ ಸೂಚನೆ

ಬೆಂಗಳೂರು: ರಾಜ್ಯದ ಆಡಳಿತವನ್ನು ಇನ್ನಷ್ಟು ಪರಿಣಾಮಕಾರಿಯಾಗಿ, ಪಾರದರ್ಶಕವಾಗಿ ರೂಪಿಸಲು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಇಂದು ವಿಧಾನಸೌಧದಲ್ಲಿ ನಡೆದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳ ಉನ್ನತ ಮಟ್ಟದ ಸಭೆಯಲ್ಲಿ ಸಮಗ್ರ ಮಾರ್ಗಸೂಚಿಗಳನ್ನು ನೀಡಿದ್ದಾರೆ.

ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಆಡಳಿತ ನಡೆಯಬೇಕು ಎಂಬುದನ್ನು ಒತ್ತಿ ಹೇಳಿದ ಮುಖ್ಯಮಂತ್ರಿ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ 1949ರ ನವೆಂಬರ್ 25ರ ಭಾಷಣವನ್ನು ಉಲ್ಲೇಖಿಸಿ, ರಾಜಕೀಯ ಪ್ರಜಾಪ್ರಭುತ್ವವು ಸಾಮಾಜಿಕ ಮತ್ತು ಆರ್ಥಿಕ ಸಮಾನತೆಯ ಮೇಲೆ ನಿಂತಿದೆ ಎಂದು ಹೇಳಿದರು. ಪ್ರತಿಯೊಬ್ಬ ನಾಗರಿಕನಿಗೂ ಆರ್ಥಿಕ ಹಾಗೂ ಸಾಮಾಜಿಕವಾಗಿ ಶಕ್ತಿ ತುಂಬುವ ಕಾರ್ಯವೇ ನಿಜವಾದ ಸ್ವಾತಂತ್ರ್ಯಕ್ಕೆ ದಾರಿ ಮಾಡಿಕೊಡುತ್ತದೆ ಎಂದು ತಿಳಿಸಿದರು. ಸಂವಿಧಾನಕ್ಕೆ ವಿರುದ್ಧವಾದ ಯಾವುದೇ ಕ್ರಮಗಳನ್ನು ಕೈಗೊಳ್ಳಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.



ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಮಾತುಗಳನ್ನು ಉಲ್ಲೇಖಿಸಿದ ಅವರು, ಅಧಿಕಾರಿಗಳು ನಿರ್ಭಯವಾಗಿ ಮತ್ತು ಸ್ವತಂತ್ರವಾಗಿ ತಮ್ಮ ಅಭಿಪ್ರಾಯಗಳನ್ನು ಮಂತ್ರಿಗಳಿಗೆ ತಿಳಿಸಬೇಕು. ಸತ್ಯ ಹೇಳುವುದರಿಂದ ಹಿಂಜರಿಯಬಾರದು ಎಂದು ಹೇಳಿದರು. ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಬಾರದು, ಜನಪರ ತೀರ್ಮಾನಗಳನ್ನು ತೆಗೆದುಕೊಳ್ಳಬೇಕು ಎಂದು ಎಚ್ಚರಿಸಿದರು. ಅಧಿಕಾರಿಗಳು ದೀರ್ಘಕಾಲ ಆಡಳಿತದಲ್ಲಿ ಇರುವುದರಿಂದ ಅವರ ಜವಾಬ್ದಾರಿ ಹೆಚ್ಚಿದೆ ಎಂದರು.

ಬಜೆಟ್ ಘೋಷಣೆಗಳ ಅನುಷ್ಠಾನವನ್ನು ವೇಗಗೊಳಿಸುವಂತೆ ಸೂಚಿಸಿದ ಮುಖ್ಯಮಂತ್ರಿ, ಕಳೆದ ವರ್ಷದ 15 ಘೋಷಣೆಗಳು ಇನ್ನೂ ಜಾರಿಯಾಗಿಲ್ಲ ಎಂಬುದನ್ನು ಗಂಭೀರವಾಗಿ ಪರಿಗಣಿಸಿದರು.

ಈ ವರ್ಷದ ಬಜೆಟ್‌ನಲ್ಲಿ 218 ಹೊಸ ಘೋಷಣೆಗಳೊಂದಿಗೆ ಒಟ್ಟು 565 ಘೋಷಣೆಗಳನ್ನು ಮಾಡಲಾಗಿದೆ. ಇವೆಲ್ಲವೂ ಅದೇ ವರ್ಷದಲ್ಲಿ ಜಾರಿಯಾಗಬೇಕು ಎಂದು ಸ್ಪಷ್ಟಪಡಿಸಿದರು. ಪ್ರಾಯೋಗಿಕ ಅಡಚಣೆಗಳಿದ್ದರೆ ನೇರವಾಗಿ ತಮ್ಮ ಅಥವಾ ಮುಖ್ಯ ಕಾರ್ಯದರ್ಶಿಯವರ ಗಮನಕ್ಕೆ ತರಬೇಕು ಎಂದು ಹೇಳಿದರು.

2026-27ರ ಬಜೆಟ್‌ನಲ್ಲಿನ ಕೇವಲ 5 ಘೋಷಣೆಗಳಿಗೆ ಮಾತ್ರ ಈಗಾಗಲೇ ಸರ್ಕಾರಿ ಆದೇಶ ಹೊರಬಂದಿರುವುದನ್ನು ಉಲ್ಲೇಖಿಸಿ, ಮೇ ತಿಂಗಳೊಳಗಾಗಿ ಎಲ್ಲಾ ಆದೇಶಗಳನ್ನು ಜಾರಿಗೊಳಿಸಿ ಅನುಷ್ಠಾನ ಪ್ರಾರಂಭಿಸಬೇಕು, ಇಲ್ಲವಾದರೆ ಸಂಬಂಧಿಸಿದ ಕಾರ್ಯದರ್ಶಿಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.

03/05/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಕಾಮಗಾರಿ ಧ್ವಂಸ



ಕೋಲಾರ

ಜಮೀನು ವಿವಾದ ಹಿನ್ನೆಲೆ ಕೆಪಿಟಿಸಿಎಲ್ ನಿಂದ ಮಾಡಲಾಗುತ್ತಿದ್ದ ಕಾಮಗಾರಿಯನ್ನು ಜೆಸಿಬಿಯಿಂದ ಧ್ವಂಸ ಮಾಡಿರುವ ಘಟನೆ ಕೋಲಾರ ತಾಲ್ಲೂಕು ತಂಬಿಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ದಿಲೀಪ್ ಹಾಗೂ ಕೆಲವು ವ್ಯಕ್ತಿಗಳು ಕಾಮಗಾರಿ ಧ್ವಂಸ ಮಾಡಿದ್ದಾರೆ. ಏಕಾಏಕಿ ಜೆಸಿಬಿ ಬಳಸಿ ನಿರ್ಮಾಣ ಹಂತದ ಸಬ್ ಸ್ಟೇಷನ್ ನಿರ್ಮಾಣ ಕಾಮಗಾರಿಯನ್ನು ಧ್ವಂಸ ಮಾಡಿದ್ದು ಲಕ್ಷಾಂತರ ರೂಪಾಯಿ ನಷ್ಟ ಉಂಟಾಗಿದೆ.

ತಂಬಿಹಳ್ಳಿ ಗ್ರಾಮದ ಸರ್ವೆ ನಂ 179 ರಲ್ಲಿ 7.34 ಎಕರೆ ಸರ್ಕಾರಿ ಜಮೀನಿದ್ದು ಆ ಪೈಕಿ 1.28 ಗುಂಟೆಯನ್ನು ದಿಲೀಪ್ ಎಂಬುವರಿಗೆ ಮಂಜೂರು ಮಾಡಲಾಗಿದೆ ಎನ್ನಲಾಗಿದೆ, ಜೊತೆಗೆ ಕೆಪಿಟಿಸಿಎಲ್‌ಗೆ ಸಬ್ ಸ್ಟೇಷನ್ ನಿರ್ಮಾಣಕ್ಕಾಗಿ 36 ಗುಂಟೆ ಜಮೀನನ್ನು ಸರ್ಕಾರದಿಂದ ಮಂಜೂರು ಮಾಡಲಾಗಿದೆ.

ಉಳಿಕೆ 1.28 ಗುಂಟೆ ಜಮೀನಿದೆ. ಸದ್ಯ ಬಗ್ಗೆ ಈಗಾಗಲೇ ಕೋರ್ಟ್‌ನಲ್ಲಿ ವಿಚಾರಣೆ ಹಂತದಲ್ಲಿದೆ ಹೀಗಿರುವಾಗ ಇಂದು ಏಕಾಏಕಿ ದಿಲೀಪ್ ಎಂಬಾತ ಜೆಸಿಬಿಯಿಂದ ಕೆಪಿಟಿಸಿಎಲ್‌ನ ಕಾಮಗಾರಿ ಧ್ವಂಸ ಮಾಡಿದ ಹಿನ್ನೆಲೆ ಅವರ ವಿರುದ್ಧ ಕೆಪಿಟಿಸಿಎಲ್ ನ ಅಧಿಕಾರಿಗಳು ಕೋಲಾರ ಗ್ರಾಮಾಂತರ ಠಾಣಾ ಪೊಲೀಸರಿಗೆ ದೂರು ನೀಡಿದ್ದು, ಕೂಡಲೇ ಸ್ಥಳಕ್ಕೆ ಬಂದ ಕೋಲಾರ ಗ್ರಾಮಾಂತರ ಠಾಣಾ ಪೊಲೀಸರು ಜೆಸಿಬಿಯನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಮೊದಲನೇ ವರ್ಷದ ಶ್ರೀ ತಿಮ್ಮರಾಯಸ್ವಾಮಿ ಬ್ರಹ್ಮರಥೋತ್ಸವ ಅದ್ದೂರಿ

ಬೂದಿಕೋಟೆ



ಇಲ್ಲಿನ ಯಳೆಸಂದ್ರ ಗ್ರಾಮದಲ್ಲಿ ಶ್ರೀ ತಿಮ್ಮರಾಯಸ್ವಾಮಿ ದೇವಾಲಯದ ವತಿಯಿಂದ ಆಯೋಜಿಸಲಾಗಿದ್ದ ಮೊದಲನೇ ವರ್ಷದ ಬ್ರಹ್ಮರಥೋತ್ಸವ ಶುಕ್ರವಾರ ಭಕ್ತಿ, ಸಂಭ್ರಮ ಮತ್ತು ಧಾರ್ಮಿಕ ಆಚರಣೆಗಳ ಮಧ್ಯೆ ಅದ್ದೂರಿಯಾಗಿ ನೆರವೇರಿತು.

ಉತ್ಸವದ ಅಂಗವಾಗಿ ಬೆಳಿಗ್ಗೆ ವಿಶೇಷ ಪೂಜೆ, ಅಭಿಷೇಕ, ಅಲಂಕಾರ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು. ನಂತರ ಶ್ರೀ ತಿಮ್ಮರಾಯಸ್ವಾಮಿ ಉತ್ಸವಮೂರ್ತಿಯನ್ನು ಅಲಂಕೃತ ಬ್ರಹ್ಮರಥದಲ್ಲಿ ಪ್ರತಿಷ್ಠಾಪಿಸಿ ಗ್ರಾಮ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಸಲಾಯಿತು. "ಗೋವಿಂದಾ ಗೋವಿಂದಾ" ಎಂಬ ಘೋಷಣೆಗಳ ನಡುವೆ ಭಕ್ತರು ರಥವನ್ನು ಎಳೆಯುವ ಮೂಲಕ ತಮ್ಮ ಭಕ್ತಿ ಭಾವವನ್ನು ವ್ಯಕ್ತಪಡಿಸಿದರು.

ರಥೋತ್ಸವದ ಸಂದರ್ಭದಲ್ಲಿ ಗ್ರಾಮದೆಲ್ಲೆಡೆ ಹಬ್ಬದ ವಾತಾವರಣ ಕಂಗೊಳಿಸಿತು. ದೇವಾಲಯವನ್ನು ಬಣ್ಣಬಣ್ಣದ ತೋರಣಗಳು ಮತ್ತು ಹೂವಿನ ಅಲಂಕಾರಗಳಿಂದ ಸಿಂಗಾರ ಮಾಡಲಾಗಿತ್ತು. ಮಹಿಳೆಯರು ಮಂಗಳಾರತಿ ನೆರವೇರಿಸಿ ದೇವರಿಗೆ ಪ್ರಾರ್ಥನೆ ಸಲ್ಲಿಸಿದರು.

ಭಕ್ತರಿಗಾಗಿ ಪ್ರಸಾದ ವಿತರಣೆ ಹಾಗೂ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿದ್ದು, ಸಾವಿರಾರು ಭಕ್ತರು ಭಾಗವಹಿಸಿದರು. ಗ್ರಾಮ ಯುವಕರು ಹಾಗೂ ದೇವಾಲಯ ಸಮಿತಿ ಸದಸ್ಯರು ಉತ್ಸವದ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಿದರು.

ಈ ಮಹೋತ್ಸವದಲ್ಲಿ ಸುತ್ತಮುತ್ತಲಿನ ಗ್ರಾಮಗಳಿಂದಲೂ ಭಕ್ತರು ಆಗಮಿಸಿ ದೇವರ ದರ್ಶನ ಪಡೆದು ಇಷ್ಟಾರ್ಥಗಳನ್ನು ಪ್ರಾರ್ಥಿಸಿದರು. ಮೊದಲನೇ ವರ್ಷದ ಈ ಬ್ರಹ್ಮರಥೋತ್ಸವವನ್ನು ಗ್ರಾಮಸ್ಥರು ಅಪಾರ ಭಕ್ತಿಯಿಂದ ಆಚರಿಸಿದ್ದು, ಮುಂದಿನ ವರ್ಷಗಳಲ್ಲಿ ಇನ್ನಷ್ಟು ವೈಭವದಿಂದ ನಡೆಸುವ ಸಂಕಲ್ಪ ವ್ಯಕ್ತಪಡಿಸಿದರು.

## ಆನ್‌ಲೈನ್ ಗೇಮ್‌ಗೆ ಕಡಿವಾಣ

ನವದೆಹಲಿ

ದೇಶದ ಯುವ ಜನತೆ ಆನ್‌ಲೈನ್ ಗೇಮ್‌ಗಳಿಗೆ ಮಾರು ಹೋಗಿದ್ದಾರೆ. ಅದೆಷ್ಟರ ಮಟ್ಟಿಗೆ ಎಂದರೆ ದೇಶದ ಹಳ್ಳಿಯ ಮೂಲೆಯಲ್ಲೂ ಗೇಮ್‌ಗಳಲ್ಲಿ ತೊಡಗಿರುವವರು ಕಾಣಸಿಗುತ್ತಾರೆ. ಹೀಗೆ ಆಡುವವರಲ್ಲಿ ಅಪ್ರಾಪ್ತರು ಸೇರಿದಂತೆ ಅನೇಕರು ಹಣ ಹೂಡಿ ನಷ್ಟ ಮಾಡಿಕೊಂಡು ಆತ್ಮಹತ್ಯೆಗೆ ಶರಣಾಗುತ್ತಾರೆ. ಅದೇ ರೀತಿ ಅಪರಾಧ ಕೃತ್ಯಗಳಲ್ಲೂ ತೊಡಗಿದ ಉದಾಹರಣೆಗಳನ್ನು ನಾವು ನೋಡಿದ್ದೇವೆ. ಇದನ್ನು ನಿಯಂತ್ರಿಸಲು ಕೇಂದ್ರ ಸರ್ಕಾರ ಹೊಸ ಆನ್‌ಲೈನ್ ಗೇಮಿಂಗ್ ಕಾಯ್ದೆಯನ್ನು ಜಾರಿಗೆ ತಂದಿದೆ. ಭಾರತದ ಹೊಸ ಆನ್‌ಲೈನ್ ಗೇಮಿಂಗ್ ಕಾಯ್ದೆ (ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಕಾಯ್ದೆ, 2025 ರ ಅಡಿ) ಇಂದಿನಿಂದ (ಮೇ 1) ಜಾರಿಯಾಗಲಿದೆ.

ಕಾಯ್ದೆಯಿಂದ ಗೇಮಿಂಗ್‌ನಲ್ಲಿ 5 ಮಹತ್ವದ ಬದಲಾವಣೆಗಳಾಗಿವೆ. ಈ ನಿಯಮಗಳ ವಿವರ, ಇದು ಯಾರ ಮೇಲೆ ಪರಿಣಾಮ ಬೀರಲಿದೆ ಎಂಬ ಬಗ್ಗೆ ಇಲ್ಲಿ ವಿವರಿಸಲಾಗಿದೆ.

ನ್ಯಾಷನಲ್ ಗೇಮಿಂಗ್ ಅಥಾರಿಟಿ ಎಲ್ಲಾ ಗೇಮ್‌ಗಳಿಗೆ ಲೈಸೆನ್ಸ್ ಕೊಡುವ ಕೇಂದ್ರದ ಸಂಸ್ಥೆಯಾಗಿದೆ.

ಗೇಮ್‌ಗಳನ್ನು ಮೂರು ರೀತಿ ವರ್ಗೀಕರಿಸಲಾಗಿದೆ. 1) ಇ–ಸ್ಪೋರ್ಟ್ಸ್ ಸಂಪೂರ್ಣ ಕಾನೂನುಬದ್ಧ 2) ಸ್ಕಿಲ್ ಗೇಮ್ ಲೈಸೆನ್ಸ್ ಬೇಕು 3) ಬೆಟ್ಟಿಂಗ್ ಗೇಮ್ ಸಂಪೂರ್ಣ ಬ್ಯಾನ್ ಮಾಡಲಾಗಿದೆ. ಆನ್‌ಲೈನ್ ಕ್ಯಾಸಿನೊ,ಗೇಮ್‌ಗಳು ಬ್ಯಾನ್ ಆಗಲಿವೆ.

# ವಿದ್ಯಾರ್ಥಿಗಳಿಗೆ ಮೌಲ್ಯಾಧಾರಿತ ಹಾಗೂ ನೈತಿಕ ಶಿಕ್ಷಣ ಅಗತ್ಯ

ಪಾವಗಡ




ಆಧುನಿಕ ಯುಗದಲ್ಲಿ ವಿದ್ಯಾರ್ಥಿಗಳಿಗೆ ಕೇವಲ ಅಂಕ ಆಧಾರಿತ ಶಿಕ್ಷಣವಷ್ಟೇ ಅಲ್ಲ, ಮೌಲ್ಯಾಧಾರಿತ ಹಾಗೂ ನೈತಿಕ ಶಿಕ್ಷಣವೂ ಅತ್ಯಂತ ಅಗತ್ಯವಾಗಿದೆ ಎಂದು ಶೃಂಗೇರಿ ಶ್ರೀ ಸರಸ್ವತಿ ಆಂಗ್ಲ ಶಾಲೆಯ ಕಾರ್ಯದರ್ಶಿ ಶ್ರೀರಾಮ್ ಹೇಳಿದರು.

ಪಟ್ಟಣದ ತುಮಕೂರು ರಸ್ತೆಯಲ್ಲಿರುವ ಶೃಂಗೇರಿ ಶ್ರೀ ಸರಸ್ವತಿ ಆಂಗ್ಲ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಶನಿವಾರ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶಿಕ್ಷಣ ಕ್ಷೇತ್ರದಲ್ಲಿ ಪೋಷಕರು, ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಎಂಬ ತ್ರಿರತ್ನಗಳ ಪರಿಶ್ರಮದಿಂದ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.

ವಿದ್ಯಾರ್ಥಿಗಳ ನಿರಂತರ ಅಧ್ಯಯನ ಹಾಗೂ ಶಿಕ್ಷಕರ ಪರಿಶ್ರಮದ ಫಲವಾಗಿ ಶಾಲೆಗೆ ಉತ್ತಮ ಫಲಿತಾಂಶ ಬಂದಿದೆ ಎಂದು ಹೇಳಿದ ಅವರು, ಮುಂದಿನ ದಿನಗಳಲ್ಲಿ ಹೊಸ ಕಟ್ಟಡ ನಿರ್ಮಿಸಿ ಸಿಬಿಎಸ್‌ಇ ಶಾಲೆ ಆರಂಭಿಸುವ ಯೋಜನೆ ಹೊಂದಿರುವುದಾಗಿ ತಿಳಿಸಿದರು. ಈ ಪ್ರಯತ್ನಕ್ಕೆ ಪೋಷಕರು ಹಾಗೂ ಹಳೆಯ ವಿದ್ಯಾರ್ಥಿಗಳು ಸಹಕಾರ ನೀಡಬೇಕು ಎಂದು ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ದಯಾನಂದ್ ಮಾತನಾಡಿ, ತಮ್ಮ ಶಾಲೆಯಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ಗ್ರಾಮೀಣ ಭಾಗದಿಂದ ಆಗಮಿಸುತ್ತಿದ್ದು, ಅವರಿಗೆ ನಗರ ಮಟ್ಟದ ಶಿಕ್ಷಣದ ಸಮಾನ ಅವಕಾಶಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು.

ಉತ್ತಮ ಶಿಕ್ಷಕರ ಮಾರ್ಗದರ್ಶನ, ಆಧುನಿಕ ಬೋಧನಾ ವಿಧಾನಗಳು ಹಾಗೂ ಶಿಸ್ತಿನ ವಾತಾವರಣದಿಂದಾಗಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಸಾಧಿಸಿದ್ದಾರೆ ಎಂದು ಅವರು ಹೇಳಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವಿ. ಲೋಕೇಶ್ 599 ಅಂಕ ಪಡೆದು ಪ್ರಥಮ ಸ್ಥಾನ ಪಡೆದರೆ, ಜಿ. ಚೇತನಶ್ರೀ 564 ಅಂಕ ಪಡೆದು ದ್ವಿತೀಯ ಸ್ಥಾನ ಹಾಗೂ ಲಕ್ಷ್ಮೀನರಸಿಂಹ ನಾಯಕ್ 558 ಅಂಕ ಪಡೆದು ತೃತೀಯ ಸ್ಥಾನ ಪಡೆದರು. ಸಾಧನೆಗೈದ ವಿದ್ಯಾರ್ಥಿಗಳಿಗೆ ಶಾಲಾ ಆಡಳಿತ ಮಂಡಳಿಯಿಂದ ಸನ್ಮಾನ ಹಾಗೂ ನಗದು ಬಹುಮಾನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಚನ್ನಬಸವಣ್ಣ, ವಿಶ್ವನಾಥ್, ಜಯಲಕ್ಷ್ಮಿ, ಮಾನಸ, ನಾಗಾರ್ಜುನ, ಮೋಹನ್, ಮೌನಿಕ ಸೇರಿದಂತೆ ಅನೇಕರು ಹಾಗೂ ಪೋಷಕರು ಉಪಸ್ಥಿತರಿದ್ದರು.

### ರೈತ ಮಕ್ಕಳ 50% ಮೀಸಲಾತಿ ಸದುಪಯೋಗಕ್ಕೆ ಮೇ 4ರಂದು ಕೃಷಿ ಪ್ರಾಯೋಗಿಕ ಪರೀಕ್ಷೆ

# ತರಬೇತಿ ಕಾರ್ಯಾಗಾರ

ಬೆಂಗಳೂರು



ಪಶುಸಂಗೋಪನೆ, ಬಿಎಸ್ಸಿ ಕೃಷಿ, ಬಿಎಸ್ಸಿ ತೋಟಗಾರಿಕೆ ಸೇರಿದಂತೆ 12 ಕೋರ್ಸ್‌ಗಳ ಪ್ರವೇಶಕ್ಕೆ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ರೈತರ ಮಕ್ಕಳಿಗೆ ಕೃಷಿಕರ ಕೋಟಾದಡಿ 50 ಶೇಕಡಾ ಮೀಸಲಾತಿ ಲಭ್ಯವಿದ್ದು, ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವ ನಿಟ್ಟಿನಲ್ಲಿ ಕೃಷಿ ಪ್ರಾಯೋಗಿಕ ಪರೀಕ್ಷೆಗೆ ಸಿದ್ಧತೆಗಾಗಿ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ.


ವಿಕ್ಸಿ 47 ಅಕಾಡೆಮಿ ವತಿಯಿಂದ ಈ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಮೇ 4ರಂದು ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ ಸಮೀಪ ಇರುವ ಅರಬಿಂದೋ ಶಾಲೆಯಲ್ಲಿ ನಡೆಸಲಾಗುತ್ತಿದೆ. ಈ ಕುರಿತು ಅಕಾಡೆಮಿಯ ಮುಖ್ಯಸ್ಥ ತೇಜಸ್ ಎಚ್. ಎನ್. ಮಾಹಿತಿ ನೀಡಿದ್ದಾರೆ.

ರೈತ ಮಕ್ಕಳಿಗೆ ಲಭ್ಯವಿರುವ 50% ಮೀಸಲಾತಿ ಪಡೆಯಲು ಕೆಸಿಇಟಿ ಪರೀಕ್ಷೆಯ ಜೊತೆಗೆ ಕೃಷಿ ವಿಶ್ವವಿದ್ಯಾಲಯಗಳಲ್ಲಿ ನಡೆಯುವ ಪ್ರಾಯೋಗಿಕ ಪರೀಕ್ಷೆಯನ್ನೂ ಉತ್ತೀರ್ಣಗೊಳ್ಳಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯ ತಯಾರಿ ನೀಡಲು ಈ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಕಾರ್ಯಾಗಾರದಲ್ಲಿ ಕೃಷಿ ಪ್ರಾಯೋಗಿಕ ಪರೀಕ್ಷೆಯ ಸಂಪೂರ್ಣ ಮಾದರಿ, ಪ್ರಶ್ನೆಗಳ ಸ್ವರೂಪ ಹಾಗೂ ತಯಾರಿ ವಿಧಾನಗಳ ಕುರಿತು ಮಾರ್ಗದರ್ಶನ ನೀಡಲಾಗುತ್ತದೆ. ದ್ವಿತೀಯ ಪಿಯುಸಿ ಪೂರ್ಣಗೊಳಿಸಿ ಅಗ್ರಿ ಪ್ರಾಕ್ಟಿಕಲ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ವಿದ್ಯಾರ್ಥಿಗಳು ಈ ಅವಕಾಶವನ್ನು ಬಳಸಿಕೊಳ್ಳುವಂತೆ ಮನವಿ ಮಾಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ನೋಂದಣಿಗಾಗಿ 8217413646 ಸಂಖ್ಯೆಗೆ ಸಂಪರ್ಕಿಸಲು ಕೋರಲಾಗಿದೆ.

# ವಾಬಲ್ ಒನ್ ಸ್ಮಾರ್ಟ್‌ಫೋನ್ ಅನಾವರಣ




ಬೆಂಗಳೂರು

ಭಾರತೀಯ ಗ್ರಾಹಕ ತಂತ್ರಜ್ಞಾನ ಕ್ಷೇತ್ರದಲ್ಲಿ ತನ್ನದೇ ಆದ ಗುರುತಿಸಿಕೊಂಡಿರುವ ವಾಬಲ್ ಬ್ರಾಂಡ್, ತನ್ನ ಪ್ರಮುಖ ಸ್ಮಾರ್ಟ್‌ಫೋನ್ ವಾಬಲ್ ಒನ್ ಅನ್ನು ನಗರದ ಲುಲು ಮಾಲ್, ರಾಜಾಜಿನಗರದಲ್ಲಿ ಭರ್ಜರಿಯಾಗಿ ಅನಾವರಣಗೊಳಿಸಿದೆ. ಈ ಕಾರ್ಯಕ್ರಮದಲ್ಲಿ ಗ್ರಾಹಕರು, ಕಂಟೆಂಟ್ ಕ್ರಿಯೇಟರ್‌ಗಳು, ಸ್ಥಳೀಯ ಇನ್ಫ್ಲುಯೆನ್ಸರ್‌ಗಳು ಹಾಗೂ ಛಾಯಾಗ್ರಹಣ ಅಭಿಮಾನಿಗಳು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿ ಉತ್ಸಾಹ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಾಬಲ್ ಕಂಪನಿ ರೋಹೆಡ್ ಕಮ್ಯುನಿಕೇಶನ್ಸ್ ಪ್ರೈವೇಟ್ ಲಿಮಿಟೆಡ್ ಜೊತೆ ಕರ್ನಾಟಕ ಮತ್ತು ಕೇರಳ ರಾಜ್ಯಗಳಿಗಾಗಿ ತಂತ್ರಗಾರಿಕೆ ವಿತರಣಾ ಪಾಲುದಾರಿಕೆಯನ್ನು ಘೋಷಿಸಿತು. ಇದು ದಕ್ಷಿಣ ಭಾರತದಲ್ಲಿ ಕಂಪನಿಯ ವಿಸ್ತರಣೆಗೆ ಮಹತ್ವದ ಹೆಜ್ಜೆಯಾಗಿದೆ.

ವಾಬಲ್ ಒನ್ ಅನಾವರಣದ ವೇಳೆ ಮಳಿಗೆ ತೆರೆಯುವ ಮೊದಲುಲೇ ಜನರು ಸಾಲಿನಲ್ಲಿ ನಿಂತು, ದಿನಪೂರ್ತಿ ಲುಲು ಮಾಲ್ ಪರಿಸರದಲ್ಲಿ ಹಬ್ಬದಂತ ವಾತಾವರಣ ನಿರ್ಮಾಣವಾಯಿತು. ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಸುಧೀರ್ ಶಿವರಾಮ್ ಅವರು ಭಾಗವಹಿಸಿದರು.

ಪ್ರಸಿದ್ಧ ವನ್ಯಜೀವಿ ಛಾಯಾಗ್ರಾಹಕರಾದ ಅವರು ಎರಡು ದಶಕಗಳಿಗೂ ಅಧಿಕ ಅನುಭವ ಹೊಂದಿದ್ದು, ದೇಶ–ವಿದೇಶಗಳಲ್ಲಿ ತಮ್ಮ ಛಾಯಾಚಿತ್ರ ಕಲೆ ಮೂಲಕ ಹೆಸರಾಗಿದ್ದಾರೆ.

# ಭಾರತದಲ್ಲಿ ವಹಿವಾಟು ಬಲವರ್ಧನೆಗೆ ಮಾಡರ್ ಚಿಂತನೆ

ಬೆಂಗಳೂರು



ಅಡಮಾನ, ಬ್ಯಾಂಕಿಂಗ್ ಮತ್ತು ವಿಮಾ ವಲಯಗಳಿಗೆ ತಂತ್ರಜ್ಞಾನ ಸೇವೆ ನೀಡುವ ಮಾಡರ್, ಎಐ–ಆಧಾರಿತ ಸೇವೆಗಳೊಂದಿಗೆ ಭಾರತದಲ್ಲಿನ ತನ್ನ ವಹಿವಾಟು ವಿಸ್ತರಣೆಗೆ ಚಿಂತನೆ ನಡೆಸಿದೆ. ಹಣಕಾಸು ಸಂಸ್ಥೆಗಳು ವೆಚ್ಚವನ್ನು ಕಡಿಮೆ ಮಾಡುವ ಮತ್ತು ಪ್ರಕ್ರಿಯೆ ತ್ವರಿತಗೊಳಿಸುವತ್ತ ಹೆಚ್ಚು ಗಮನಹರಿಸುತ್ತಿದ್ದು, ಆ ನಿಟ್ಟಿನಲ್ಲಿ ಎಐ–ಆಧಾರಿತ ಸೇವೆಗಳು ಪರಿಣಾಮಕಾರಿ ಎಂದು ಸಂಸ್ಥೆ ಭಾವಿಸಿದೆ. 2021ರಲ್ಲಿ ಸ್ಥಾಪನೆಯಾದ ಕಂಪನಿಯು ಜಾಗತಿಕವಾಗಿ 7,400 ಕ್ಕೂ ಹೆಚ್ಚು ಉದ್ಯೋಗಿಗಳನ್ನು ಹೊಂದಿದ್ದು, ಇದರಲ್ಲಿ ಭಾರತದಲ್ಲಿ 5,000ಕ್ಕೂ ಹೆಚ್ಚು ಜನರಿದ್ದಾರೆ. ಪ್ರಮುಖ ಹಣಕಾಸು ಸೇವೆಗಳ ಮಾರುಕಟ್ಟೆಗಳಲ್ಲಿ 65 ಕ್ಕೂ ಹೆಚ್ಚು ಗ್ರಾಹಕರನ್ನು ಸಂಸ್ಥೆ ಹೊಂದಿದೆ.

ಕಂಪನಿಯು ಸೇವಾ ಬಲವರ್ಧನೆ ನಿಟ್ಟಿನಲ್ಲಿ ಪಲಂತಿರ್ ಟೆಕ್ನಾಲಜೀಸ್‌ನ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾದ ಮೋಡ್‌ಐಕ್ಯೂ ಮೂಲಕ ಎಐ–ಆಧಾರಿತ ತಂತ್ರಜ್ಞಾನದಲ್ಲಿ ಹೂಡಿಕೆ ಮಾಡುತ್ತಿದೆ. ಇದು ಹಣಕಾಸು ಸಂಸ್ಥೆಗಳ ಸೇವಾ ಸಾಮರ್ಥ್ಯ ವೃದ್ಧಿಸಲಿದೆ ಎಂದು ಮಾಡರ್‌ನ ಅಧ್ಯಕ್ಷ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎರಿಕ್ ಆಂಡರ್ಸನ್ ಹೇಳಿದರು.



ವೈ.ಎನ್.ಹೊಸಕೋಟೆ ಗ್ರಾಮದ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ದೇವಾಲಯ ಸಮಿತಿಯ ವತಿಯಿಂದ ನರಸಿಂಹ ಸ್ವಾಮಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಿದರು.

## ‘ಭವ್ಯ ಭಾರತ ನಿರ್ಮಾಣಕ್ಕೆ ಕಾರ್ಮಿಕರ ಶಕ್ತಿ ಅಪಾರ’



ಕುಣಿಗಲ್

ಭವ್ಯ ಭಾರತವನ್ನು ಕಟ್ಟಲು ಕಾರ್ಮಿಕರ ಶಕ್ತಿ ಅಪಾರವಾಗಿದ್ದು, ದೇಶದ ಅಭಿವೃದ್ಧಿಯಲ್ಲಿ ಅವರ ಕೊಡುಗೆ ಅನನ್ಯವಾಗಿದೆ ಎಂದು ಶಾಸಕ ಡಾ.ಎಚ್.ಡಿ.ರಂಗನಾಥ್ ಹೇಳಿದರು.

ತಾಲೂಕು ಆಡಳಿತ ಹಾಗೂ ಕಟ್ಟಡ ನಿರ್ಮಾಣ ಅಸಂಘಟಿತ ಮತ್ತು ಸಂಘಟಿತ ಕಾರ್ಮಿಕರ ಒಕ್ಕೂಟದ ವತಿಯಿಂದ ತಾಲೂಕು ಕಚೇರಿ ಆವರಣದಲ್ಲಿ ಆಯೋಜಿಸಲಾದ ಕಾರ್ಮಿಕರ ದಿನಾಚರಣಾ ಸಮಾರಂಭದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಭಾರತದ ಇತಿಹಾಸದಲ್ಲಿ ಕಾರ್ಮಿಕ, ರೈತ ಮತ್ತು ಸೈನಿಕರು ದೇಶದ ನಿಜವಾದ ಆಸ್ತಿಯಾಗಿದ್ದು, ಜಾತಿ–ಭಾಷೆ ಭೇದವಿಲ್ಲದೆ ದುಡಿಮೆಯಲ್ಲಿ ನಂಬಿಕೆ ಇಟ್ಟು ಕೆಲಸ ಮಾಡುವ ಕಾರ್ಮಿಕರ ಕೊಡುಗೆ ಸ್ವಾತಂತ್ರ್ಯ ಸಾಧನೆಗೂ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು.

ಸಂವಿಧಾನದಲ್ಲಿ ಕಾರ್ಮಿಕರ ಹಕ್ಕುಗಳಿಗೆ ವಿಶೇಷ ಸ್ಥಾನಮಾನ ನೀಡಲಾಗಿದೆ. ಕನಿಷ್ಠ ವೇತನ ಸೇರಿದಂತೆ ಹಲವಾರು ಸೌಲಭ್ಯಗಳನ್ನು ಒದಗಿಸಿದ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಕಾರ್ಮಿಕ ವಲಯ ಸದಾ ಸ್ಮರಿಸಬೇಕು ಎಂದರು.

ದೇಶದ ಅಭಿವೃದ್ಧಿಗೆ ಕಾರ್ಮಿಕ ವಲಯ ಪ್ರಮುಖ ಪಾತ್ರವಹಿಸುತ್ತಿದ್ದು, ನೂರಕ್ಕೂ ಹೆಚ್ಚು ಕೋಟಿ ಜನರ ಕನಸುಗಳನ್ನು ನನಸು ಮಾಡಲು ಶ್ರಮಿಸುತ್ತಿದೆ. ಹೋರಾಟ, ತ್ಯಾಗ ಮತ್ತು ಬಲಿದಾನದ ಮೂಲಕ ಕಾರ್ಮಿಕರು ತಮ್ಮ ಹಕ್ಕುಗಳನ್ನು ಸಾಧಿಸಿಕೊಂಡಿರುವುದು ಶ್ಲಾಘನೀಯ ಎಂದು ಹೇಳಿದರು.

ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳು, ಗ್ರಾಮೀಣ ಉದ್ಯೋಗ ಯೋಜನೆ ಸೇರಿದಂತೆ ಬಡವರು ಮತ್ತು ಕೂಲಿಕಾರರ ಅಭಿವೃದ್ಧಿಗೆ ಕೈಗೊಳ್ಳಲಾಗಿರುವ ಕ್ರಮಗಳನ್ನು ಸ್ಮರಿಸಬೇಕು. ಸಂಕಷ್ಟದ ಸಂದರ್ಭಗಳಲ್ಲಿಯೂ ಕಾರ್ಮಿಕರ ಬದುಕಿಗೆ ನೆರವಾದ ಕಾರ್ಯಗಳನ್ನು ಮರೆಯಬಾರದು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ತಹಶೀಲ್ದಾರ್ ಎನ್.ಆರ್. ಕರಿಯ ನಾಯಕ್, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ವಿ. ವಸಂತ್ ಕುಮಾರ್, ಕಾರ್ಮಿಕ ಅಧಿಕಾರಿ ಪುರುಷೋತ್ತಮ್, ಕಾರ್ಮಿಕ ಕಲ್ಯಾಣ ಮಂಡಳಿ ಸದಸ್ಯರು ಹಾಗೂ ಹೋರಾಟಗಾರರಾದ ಎಚ್.ಜಿ. ರಮೇಶ್, ಶ್ರೇಯನ್ ಕುಮಾರ್ ಜೈನ್, ಜಯಲಕ್ಷ್ಮಿ ಪುತ್ರನ್, ಕೇಶವಮೂರ್ತಿ ಕಿರಣ್, ರವಿಕಿರಣ್ ಕುಲಕರ್ಣಿ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸುಮತಿ ಸೇರಿದಂತೆ ಅನೇಕ ಕಾರ್ಮಿಕ ಮುಖಂಡರು ಭಾಗವಹಿಸಿದ್ದರು.

ಇದಕ್ಕೂ ಮುನ್ನ ಕಾರ್ಮಿಕರು ಪ್ರವಾಸಿ ಮಂದಿರದಿಂದ ತಾಲೂಕು ಕಚೇರಿವರೆಗೆ ವಿವಿಧ ಸ್ತಬ್ಧ ಚಿತ್ರಗಳು ಮತ್ತು ಘೋಷಣೆಗಳೊಂದಿಗೆ ಭವ್ಯ ಮೆರವಣಿಗೆ ನಡೆಸಿದರು.

# ಕಾರ್ಮಿಕ ದಿನಾಚರಣೆ ಜ್ಞಾನಾರ್ಜನೆಯ ಕೇಂದ್ರವಾಗಲಿ: ನ್ಯಾಯಾಧೀಶೆ ಗೀತಾಂಜಲಿ

ಚಿಂತಾಮಣಿ



ಕಾರ್ಮಿಕ ದಿನಾಚರಣೆ ಕೇವಲ ವೇದಿಕೆ ಕಾರ್ಯಕ್ರಮಗಳಿಗೆ ಸೀಮಿತವಾಗದೆ, ಕಾರ್ಮಿಕರ ಜ್ಞಾನಾರ್ಜನೆಗೆ ದಾರಿ ತೋರಿಸುವ ಕೇಂದ್ರವಾಗಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರಾದ ಗೀತಾಂಜಲಿ.ಜಿ ಅಭಿಪ್ರಾಯಪಟ್ಟರು.

ನಗರದ ರಾಯಲ್ ಶಾಲೆ ವೃತ್ತದ ಕಟ್ಟಡ ಕಾರ್ಮಿಕರ ಕಛೇರಿಯಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಮತ್ತು ಕಟ್ಟಡ ಕಾರ್ಮಿಕರ ಸಂಘದ ವತಿಯಿಂದ ಆಯೋಜಿಸಲಾದ ಕಾರ್ಮಿಕ ದಿನಾಚರಣೆ ಹಾಗೂ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಪ್ರಗತಿಗೆ ಬೆನ್ನೆಲುಬಾಗಿರುವ ಕಾರ್ಮಿಕರನ್ನು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯದಿಂದ ನೋಡುವುದು ಸರಿಯಲ್ಲ. ವಿದ್ಯಾಭ್ಯಾಸದ ಕೊರತೆಯಿಂದ ತಳಮಟ್ಟದ ಕಾರ್ಮಿಕರು ಇಂದಿಗೂ ಸಂಘಟಿತರಾಗದೇ ಉಳಿದಿರುವುದು ವಿಷಾದನೀಯ ಎಂದು ಅವರು ಹೇಳಿದರು.

ಮಹಿಳಾ ಕಾರ್ಮಿಕರು ತಮ್ಮ ಹಕ್ಕುಗಳ ಬಗ್ಗೆ ಸಮರ್ಪಕ ಅರಿವು ಹೊಂದಿಲ್ಲದ ಕಾರಣ ದೌರ್ಜನ್ಯ ಮತ್ತು ದಬ್ಬಾಳಿಕೆಗೆ ಒಳಗಾಗುತ್ತಿರುವುದು ಆತಂಕಕಾರಿ ಸಂಗತಿ. ಕಾನೂನುಗಳು ಹಕ್ಕುಗಳನ್ನು ನೀಡಿದ್ದರೂ ಅರಿವಿನ ಕೊರತೆಯಿಂದ ಅವುಗಳನ್ನು ಪಡೆದುಕೊಳ್ಳಲು ಕಾರ್ಮಿಕರು ಪರದಾಡುತ್ತಿರುವುದು ಗಮನಾರ್ಹ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಕಾರ್ಮಿಕರು ಕೆಲಸಕ್ಕೆ ತೆರಳುವ ಸಂದರ್ಭದಲ್ಲಿ ಮಕ್ಕಳ ಸುರಕ್ಷತೆಯ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಮಕ್ಕಳನ್ನು ಒಬ್ಬಂಟಿಯಾಗಿ ಬಿಡದೇ, ಅಂಗನವಾಡಿ ಕೇಂದ್ರಗಳು ಅಥವಾ ವಿಶ್ವಾಸಾರ್ಹ ಸುರಕ್ಷಿತ ಸ್ಥಳಗಳಲ್ಲಿ ಇರಿಸುವ ಮೂಲಕ ಅಹಿತಕರ ಘಟನೆಗಳನ್ನು ತಡೆಯಬೇಕು ಎಂದು ಸಲಹೆ ನೀಡಿದರು.

ಮಹಿಳೆಯರ ಋತುಮತಿ ರಜೆ ಸಂಬಂಧಿತ ನ್ಯಾಯಾಲಯದ ತೀರ್ಪುಗಳು ಹಾಗೂ ಅಪಘಾತದ ಸಂದರ್ಭಗಳಲ್ಲಿ ಕಾರ್ಮಿಕರಿಗೆ ದೊರೆಯುವ ಕಾನೂನು ಸೌಲಭ್ಯಗಳನ್ನು ಬಳಸಿಕೊಳ್ಳಬೇಕು. ನ್ಯಾಯಕ್ಕಾಗಿ ವಿಳಂಬ ಮಾಡದೆ ನ್ಯಾಯಾಲಯವನ್ನು ಸಂಪರ್ಕಿಸುವಂತೆ ಅವರು ಕರೆ ನೀಡಿದರು.

ಕಾರ್ಮಿಕ ಇಲಾಖೆ ನಿರೀಕ್ಷಕಿ ಕಲಾವಾಣಿ ಮಾತನಾಡಿ, ನೈಜ ಕಾರ್ಮಿಕರು ಕಡ್ಡಾಯವಾಗಿ ಇಲಾಖೆಯಲ್ಲಿ ನೋಂದಣಿ ಮಾಡಿಕೊಂಡು ಗುರುತಿನ ಚೀಟಿ ಪಡೆಯಬೇಕು. ಇದರಿಂದ ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ವಕೀಲರಾದ ದಯಾನಂದ್ ಹಾಗೂ ಮುನಿರಾಜು ಕಾರ್ಮಿಕ ಕಾಯ್ದೆಗಳ ಕುರಿತು ಸವಿಸ್ತಾರ ಮಾಹಿತಿ ನೀಡಿದರು. ನಿವೃತ್ತ ಮುಖ್ಯೋಪಾಧ್ಯಾಯ ಜಗನ್ನಾಥ್ ಮತ್ತು ಬೆಸ್ಕಾಂ ನಿವೃತ್ತ ಅಧಿಕಾರಿ ನಾಗರಾಜ್ ಕಾರ್ಮಿಕರ ಸುರಕ್ಷತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ವಕೀಲರಾದ ವಿ. ರಮೇಶ್, ಕೆ.ಎ. ರಮೇಶ್ ಭಾರತಿ, ವಿಜಯ್ ಶ್ರೀನಿವಾಸ್, ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ನಾಗರಾಜ್, ಗೌರವಾಧ್ಯಕ್ಷ ಶ್ರೀನಿವಾಸ್, ಕಾರ್ಯಾಧ್ಯಕ್ಷ ಸುರೇಶ್ ಸೇರಿದಂತೆ ಅನೇಕ ಪದಾಧಿಕಾರಿಗಳು ಹಾಗೂ ನೂರಾರು ಕಾರ್ಮಿಕರು ಪಾಲ್ಗೊಂಡಿದ್ದರು.

# ಮದುವೆ ಊಟ ಸೇವಿಸಿ 15ಕ್ಕೂ ಹೆಚ್ಚು ಮಂದಿ ಅಸ್ವಸ್ಥ

ತಿಪಟೂರು

ತಾಲೂಕಿನ ಹೊನ್ನವಳ್ಳಿ ಹೋಬಳಿಯ ರಾಮನಹಳ್ಳಿ ಗ್ರಾಮದಲ್ಲಿ ಮದುವೆ ಕಾರ್ಯಕ್ರಮದಲ್ಲಿ ಊಟ ಸೇವಿಸಿದ ಬಳಿಕ 15ಕ್ಕೂ ಹೆಚ್ಚು ಮಂದಿ ಅಸ್ವಸ್ಥಗೊಂಡ ಘಟನೆ ವರದಿಯಾಗಿದೆ.



ಗ್ರಾಮದ ಕುಮಾರಯ್ಯ ಅವರ ಮನೆಯಲ್ಲಿ ನಡೆದ ಮದುವೆ ದೇವತಾ ಕಾರ್ಯಕ್ರಮದಲ್ಲಿ ಸುಮಾರು 150 ಮಂದಿ ಊಟ ಸೇವಿಸಿದ್ದು, ಅವರಲ್ಲಿ ಸುಮಾರು 20 ಮಂದಿಗೆ ವಾಂತಿ ಮತ್ತು ಬೇಧಿ ಲಕ್ಷಣಗಳು ಕಾಣಿಸಿಕೊಂಡಿವೆ. ಅಸ್ವಸ್ಥಗೊಂಡವರನ್ನು ತಿಪಟೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆಯ ಮಾಹಿತಿ ತಿಳಿದ ತಕ್ಷಣ ತಾಲೂಕು ಆರೋಗ್ಯ ಅಧಿಕಾರಿ ಚೆನ್ನಕೇಶವ ಸ್ಥಳಕ್ಕೆ ಭೇಟಿ ನೀಡಿ ತುರ್ತು ಚಿಕಿತ್ಸಾ ಕೇಂದ್ರ ಆರಂಭಿಸಿದರು. ಸುಮಾರು 35 ಮಂದಿ ಚಿಕಿತ್ಸೆ ಪಡೆದಿದ್ದು, 16 ಮಂದಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಇವರಲ್ಲಿ ಒಬ್ಬರನ್ನು ಹೃದಯ ಸಂಬಂಧಿ ಸಮಸ್ಯೆ ಹಿನ್ನೆಲೆಯಲ್ಲಿ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ. ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಗ್ರಾಮದಲ್ಲಿ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ತಾತ್ಕಾಲಿಕ ಚಿಕಿತ್ಸಾ ಕೇಂದ್ರವನ್ನು ಆರಂಭಿಸಲಾಗಿದೆ. ಕುಡಿಯುವ ನೀರು ಮತ್ತು ಆಹಾರದ ಮಾದರಿಗಳನ್ನು ಪರೀಕ್ಷೆಗಾಗಿ ಸಂಗ್ರಹಿಸಲಾಗಿದೆ.

ಈ ನಡುವೆ ಶಾಸಕ ಕೆ. ಷಡಕ್ಷರಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುದರ್ಶನ್, ಜಿಲ್ಲಾ ಆರೋಗ್ಯಾಧಿಕಾರಿ ರಾಮೇಗೌಡ ಸೇರಿದಂತೆ ಅಧಿಕಾರಿಗಳು ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳ ಆರೋಗ್ಯ ವಿಚಾರಿಸಿದರು.

# ‘ಎಚ್5ಎನ್1 ಆತಂಕ ಬೇಡ, ಎಚ್ಚರ ಇರಲಿ’

ತುಮಕೂರು

ಊರ್ಡಿಗೆರೆ ಹೋಬಳಿಯ ಅರಣ್ಯ ಪ್ರದೇಶದಲ್ಲಿ ಇತ್ತೀಚೆಗೆ ಸಂಭವಿಸಿದ ನವಿಲುಗಳ ಸಾವಿಗೆ ಎಚ್5ಎನ್1 ವೈರಾಣು ಸೋಂಕು ಕಾರಣ ಎಂದು ದೃಢಪಟ್ಟಿದ್ದು, ಆದರೆ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ರಾಜ್ಯ ಸಾಂಕ್ರಮಿಕ ರೋಗ ಜಾಗೃತಿ ಸಮಿತಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಏಪ್ರಿಲ್ 16ರಂದು ಊರ್ಡಿಗೆರೆ ಹೋಬಳಿಯ ಕೋಳಿಹಳ್ಳಿ ಅರಣ್ಯ ಪ್ರದೇಶದಲ್ಲಿ ನವಿಲುಗಳ ಅಸಹಜ ಸಾವು ಸಂಭವಿಸಿದ್ದಾಗಿ ಅವರು ಹೇಳಿದರು. ಮೃತ ನವಿಲುಗಳ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದ್ದು, ಇದೀಗ ಎಚ್5ಎನ್1 ವೈರಾಣು ಸೋಂಕಿನಿಂದ ಸಾವು ಸಂಭವಿಸಿರುವುದು ದೃಢಪಟ್ಟಿದೆ.

ಜಿಲ್ಲಾಡಳಿತ ತಕ್ಷಣವೇ ತ್ವರಿತ ಪ್ರತಿಕ್ರಿಯಾ ತಂಡವನ್ನು ರಚಿಸಿ ಸಾಂಕ್ರಾಮಿಕ ರೋಗ ಹರಡದಂತೆ ಕ್ರಮ ಕೈಗೊಂಡಿದೆ ಎಂದು ಅವರು ತಿಳಿಸಿದರು. ಊರ್ಡಿಗೆರೆ ಹೋಬಳಿಯ ಕೋಳಿಹಳ್ಳಿ, ಉಳ್ಳೇನಹಳ್ಳಿ, ಬೋಮ್ಮನಹಳ್ಳಿ, ಭೈರಸಂದ್ರ, ಕಲ್ಲಳ್ಳಿ ಸೇರಿದಂತೆ ಐದು ಗ್ರಾಮಗಳು ಹಾಗೂ ಸುತ್ತಲಿನ ಹತ್ತು ಕಿಲೋಮೀಟರ್ ವ್ಯಾಪ್ತಿಯಲ್ಲಿ ತೀವ್ರ ನಿಗಾ ವಹಿಸಲಾಗಿದೆ.

ಅರಣ್ಯ, ಪಶುಸಂಗೋಪನೆ, ಆರೋಗ್ಯ, ಕಂದಾಯ ಹಾಗೂ ಗ್ರಾಮ ಪಂಚಾಯಿತಿ ಇಲಾಖೆಗಳಿಂದ ಸಂಯುಕ್ತ ತಂಡಗಳನ್ನು ರಚಿಸಿ ಜಾಗೃತಿ ಕಾರ್ಯ ನಡೆಯುತ್ತಿದೆ. ಕೋಳಿ ಸಾಕಾಣಿಕೆದಾರರಿಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಲಾಗಿದೆ. ಜೊತೆಗೆ ಕೆಲವು ಕೋಳಿ ಅಂಗಡಿಗಳು ಹಾಗೂ ಮಾಂಸ ಮಾರಾಟ ಮಳಿಗೆಗಳನ್ನು ತಾತ್ಕಾಲಿಕವಾಗಿ ಮುಚ್ಚಲಾಗಿದೆ ಎಂದು ಅವರು ಹೇಳಿದರು.

ಎಚ್5ಎನ್1 ವೈರಾಣು ಮಾರಕ ಸ್ವಭಾವದ ಸೋಂಕಾಗಿರುವುದರಿಂದ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು. ಕೋಳಿ ಫಾರಂಗಳಲ್ಲಿ ಅಸಹಜ ಸಾವು ಕಂಡುಬಂದರೆ ತಕ್ಷಣವೇ ಸಂಬಂಧಿತ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಇತ್ತೀಚೆಗೆ ಬೊಮ್ಮನಹಳ್ಳಿ ಕೋಳಿ ಫಾರನಲ್ಲಿ 15 ಕೋಳಿಗಳು ಮೃತಪಟ್ಟಿದ್ದು, ಅವುಗಳ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ವರದಿ ಬಂದ ಬಳಿಕ ರಾಜ್ಯ ಸರ್ಕಾರದ ಮಾರ್ಗದರ್ಶನದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು. ಕೋಳಿ ಫಾರಂ ಮಾಲೀಕರು ಮತ್ತು ಸ್ಥಳೀಯರು ಅನಗತ್ಯವಾಗಿ ಸಂಚಾರ ಮಾಡದೆ ಎಚ್ಚರಿಕೆಯಿಂದ ಇರಬೇಕು. ಕೋಳಿ ತ್ಯಾಜ್ಯವನ್ನು ಸುರಕ್ಷಿತವಾಗಿ ಭೂಮಿಯಲ್ಲಿ ಆಳವಾಗಿ ಹೂಳುವಂತೆ ಸೂಚಿಸಲಾಗಿದೆ. ಫಾರಂಗಳಲ್ಲಿ ಸೋಂಕು ನಿಯಂತ್ರಣ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆ ಎಂದರು.

# ರಾಮಸಾಗರದಲ್ಲಿ ವೈಭವದಿಂದ ಶ್ರೀ ಚೆನ್ನಕೇಶವ ಸ್ವಾಮಿ ಬ್ರಹ್ಮರಥೋತ್ಸವ

ಬೇತಮಂಗಲ

ಇಲ್ಲಿಗೆ ಸಮೀಪದ ಸುಮಾರು ಎಂಭತ್ತು ವರ್ಷಗಳ ಇತಿಹಾಸ ಹೊಂದಿರುವ ರಾಮಸಾಗರ ನದಿದಡದಲ್ಲಿ ನೆಲೆಸಿರುವ ಶ್ರೀ ಭೂನೀಳಾ ಸಮೇತ ಪ್ರಸನ್ನ ಚೆನ್ನಕೇಶವ ಸ್ವಾಮಿಯ ಬ್ರಹ್ಮರಥೋತ್ಸವವು ಶುಕ್ರವಾರ ಭಕ್ತಿ ಮತ್ತು ಸಂಭ್ರಮದ ವಾತಾವರಣದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಬ್ರಹ್ಮರಥೋತ್ಸವದ ಅಂಗವಾಗಿ ಬೆಳಗ್ಗೆಯಿಂದಲೇ ಸ್ವಾಮಿಗೆ ವಿಶೇಷ ಪೂಜೆ, ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು. ರಥೋತ್ಸವಕ್ಕೂ ಮುನ್ನ ದೇವಾಲಯ ಆವರಣದಲ್ಲಿ ಹೋಮ ಹವನ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ಶಾಸ್ತ್ರೋಕ್ತವಾಗಿ ನೆರವೇರಿಸಲಾಯಿತು.



ಗ್ರಾಮಸ್ಥರು ಮಾತನಾಡಿ, “ರಾಮಸಾಗರ ನದಿದಡದಲ್ಲಿ ನೆಲೆಸಿರುವ ಈ ದೇವಾಲಯದ ಬ್ರಹ್ಮರಥೋತ್ಸವವನ್ನು ಸುಮಾರು ಎಂಭತ್ತು ವರ್ಷಗಳಿಂದ ಯಾವುದೇ ಜಾತಿ ಭೇದವಿಲ್ಲದೆ ಗ್ರಾಮಸ್ಥರ ಸಹಕಾರದಿಂದ ಏಕತೆಯಿಂದ ಆಚರಿಸುತ್ತಿದ್ದೇವೆ” ಎಂದು ತಿಳಿಸಿದರು.

ಮಧ್ಯಾಹ್ನ ಶುಭ ಮುಹೂರ್ತದಲ್ಲಿ ಶ್ರೀ ಚೆನ್ನಕೇಶವ ಸ್ವಾಮಿಯ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಮೆರವಣಿಗೆಯ ಮೂಲಕ ತಂದು, ಭವ್ಯವಾಗಿ ಅಲಂಕರಿಸಿದ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. “ಗೋವಿಂದಾ ಗೋವಿಂದಾ” ಎಂಬ ಜಯಘೋಷಗಳ ನಡುವೆ ರಥವು ಗ್ರಾಮ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ ಭಕ್ತರು ತೇರು ಎಳೆಯುವ ಮೂಲಕ ಭಕ್ತಿ ವ್ಯಕ್ತಪಡಿಸಿದರು.

ರಥ ಸಾಗುವ ಹಾದಿಯುದ್ದಕ್ಕೂ ಭಕ್ತರು ಬಾಳೆಹಣ್ಣು, ಉಪ್ಪು ಹಾಗೂ ಚಿಲ್ಲರೆ ಹಣವನ್ನು ರಥದತ್ತ ಸಮರ್ಪಿಸಿ ತಮ್ಮ ಹರಕೆಗಳನ್ನು ಸಲ್ಲಿಸಿದರು.

ಉತ್ಸವಕ್ಕೆ ಆಗಮಿಸಿದ ಭಕ್ತಾದಿಗಳಿಗೆ ಅನ್ನಸಂತರ್ಪಣೆ, ಪಾನಕ, ಮಜ್ಜಿಗೆ ಮತ್ತು ಕೋಸಂಬರಿ ವಿತರಿಸಲಾಯಿತು.

ಮೇ 5ರಂದು ಶ್ರೀ ಭೂನೀಳಾ ಸಮೇತ ಪ್ರಸನ್ನ ಚೆನ್ನಕೇಶವ ಸ್ವಾಮಿ ಉತ್ಸವದ ಅಂಗವಾಗಿ ಪುಷ್ಪಪಲ್ಲಕ್ಕಿ ಹಾಗೂ ಶ್ರೀ ಪಟಳಮ್ಮ ದೇವಿಯ ಹೂವಿನ ಕರಗ ಮಹೋತ್ಸವ ನಡೆಯಲಿದೆ.

ಈ ಸಂದರ್ಭದಲ್ಲಿ ರಸಮಂಜರಿ ಕಾರ್ಯಕ್ರಮವೂ ಜರುಗಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಗ್ರಾಮಸ್ಥರು, ಯುವಕರು ಹಾಗೂ ಅನೇಕ ಭಕ್ತರು ಉಪಸ್ಥಿತರಿದ್ದರು.

# ಸುಳ್ಳು ಸುದ್ದಿಗಳ ಬಗ್ಗೆ ಜಾಗೃತಿವಹಿಸಬೇಕು: ದಯಾನಂದ್.ಟಿ.ಎಸ್

ತಿಪಟೂರು

ಸಾಮಾಜಿಕ ಜಾಲತಾಣಗಳ ಬಳಕೆ ಹೆಚ್ಚಾದಂತೆ ಸುಳ್ಳುಸುದ್ದಿಗಳ ಹರಡುವಿಕೆಯೂ ಹೆಚ್ಚುತ್ತಿದೆ. ಇವುಗಳಿಂದ ಗಂಭೀರ ಕಲಹಗಳು ಉಂಟಾಗುತ್ತಿರುವುದರಿಂದ ವಿದ್ಯಾರ್ಥಿಗಳು ಫೇಕ್ ಸುದ್ದಿಗಳ ಬಗ್ಗೆ ಜಾಗೃತರಾಗಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತಿಪಟೂರು ಅಧ್ಯಕ್ಷ ದಯಾನಂದ್ ಟಿ.ಎಸ್ ಸಲಹೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪತ್ರಿಕೋದ್ಯಮ ವಿಭಾಗ ಹಾಗೂ ಈ ದಿನ ಡಾಟ್ ಕಾಮ್ ಸಹಯೋಗದಲ್ಲಿ “ಪ್ರಸ್ತುತ ವಿದ್ಯಮಾನಗಳಲ್ಲಿ ಡಿಜಿಟಲ್ ಮಾಧ್ಯಮಗಳ ಪಾತ್ರ” ವಿಷಯದ ಕುರಿತು ಎಪಿಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

“ಸಾಮಾಜಿಕ ಜಾಲತಾಣಗಳಲ್ಲಿ ಕಾಣಿಸುವ ಪ್ರತಿಯೊಂದು ಮಾಹಿತಿಯನ್ನು ನಂಬಬಾರದು.




ಪತ್ರಿಕೆಗಳನ್ನು ಓದಿ, ವಿವಿಧ ಮೂಲಗಳಿಂದ ಮಾಹಿತಿ ಪರಿಶೀಲಿಸಿ ಸತ್ಯಾಸತ್ಯತೆ ತಿಳಿದುಕೊಳ್ಳಬೇಕು” ಎಂದು ಹೇಳಿದರು.

ಮುಖ್ಯ ಭಾಷಣಕಾರರಾಗಿ ಭಾಗವಹಿಸಿದ್ದ ತುಮಕೂರು ಜಿಲ್ಲಾ ವರದಿಗಾರ ಚಂದನ್ ಡಿ.ಎನ್ ಅವರು, ಡಿಜಿಟಲ್ ಮಾಧ್ಯಮದ ಬೆಳವಣಿಗೆ, ಅದರ ವ್ಯಾಪ್ತಿ ಮತ್ತು ಸಾರ್ವಜನಿಕರ ಭಾಗವಹಿಸುವಿಕೆ ಕುರಿತು ವಿವರಿಸಿದರು. “ಆನ್‌ಲೈನ್ ಮಾಧ್ಯಮಗಳ ಮೂಲಕ ವಿಶ್ವದ ಯಾವುದೇ ಮೂಲೆಯಲ್ಲಿ ಇದ್ದರೂ ಕ್ಷಣಾರ್ಧದಲ್ಲಿ ಸುದ್ದಿ ತಲುಪಿಸಬಹುದು. ಸಾಮಾನ್ಯ ನಾಗರಿಕರೂ ನಾಗರಿಕ ಪತ್ರಕರ್ತರಾಗಿ ಕಾರ್ಯನಿರ್ವಹಿಸಬಹುದು” ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಶಶಿಕುಮಾರ್ ಎಚ್.ಸಿ ಮಾತನಾಡಿ, “ವಿದ್ಯಾರ್ಥಿಗಳು ಮೊಬೈಲ್ ಬಳಕೆಯಲ್ಲಿ ಮುಳುಗಿ ಸತ್ಯಸುಳ್ಳಿನ ಅರಿವಿಲ್ಲದೆ ಸುಳ್ಳುಸುದ್ದಿಗಳಿಗೆ ಬಲಿಯಾಗುತ್ತಿದ್ದಾರೆ. ಡಿಜಿಟಲ್ ಮಾಧ್ಯಮವನ್ನು ಎಚ್ಚರಿಕೆಯಿಂದ ಬಳಕೆ ಮಾಡಬೇಕು” ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತುಮಕೂರಿನ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರ ಆಯೋಜಿಸಿದ್ದ ಮಾಧ್ಯಮ ಹಬ್ಬದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಇತಿಹಾಸ ವಿಭಾಗದ ಮುಖ್ಯಸ್ಥ ಶಿವಕುಮಾರ್ ಸಿ.ಜಿ, ಉಪಸಂಪಾದಕ ದರ್ಶನ್, ಪತ್ರಿಕೋದ್ಯಮ ವಿಭಾಗದ ಉಪನ್ಯಾಸಕರಾದ ದೇವರಾಜ್ ಸಿ, ಹಣಮಂತ ಕಾಂಬಳೆ, ಸಮಾಜ ಕಾರ್ಯ ವಿಭಾಗದ ಗಂಗಾಧರ್ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗ್ರಾಮಾಂತರ ಪೊಲೀಸರ ದಾಳಿ: 4 ಕೆಜಿ 168 ಗ್ರಾಂ ಮಾದಕ ವಸ್ತು ವಶ



ಕನಕಪುರ

ಕನಕಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ರಾಯಸಂದ್ರ ಗ್ರಾಮದ ಬಡಾವಣೆಯಲ್ಲಿ ಮಾದಕ ವಸ್ತು ಮಾರಾಟ ನಡೆಯುತ್ತಿರುವ ಬಗ್ಗೆ ಬಂದ ಖಚಿತ ಮಾಹಿತಿಯ ಆಧಾರದಲ್ಲಿ ಪೊಲೀಸರು ದಾಳಿ ನಡೆಸಿ, ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ಸುಮಾರು 4 ಕೆಜಿ 168 ಗ್ರಾಂ ತೂಕದ ಮಾದಕ ವಸ್ತುವನ್ನು ವಶಪಡಿಸಿಕೊಂಡಿದ್ದಾರೆ.

ಮಾಹಿತಿ ತಿಳಿದ ತಕ್ಷಣ ಕನಕಪುರ ಗ್ರಾಮಾಂತರ ವೃತ್ತಾಧಿಕಾರಿಗಳು ಹಾಗೂ ಠಾಣಾ ಸಿಬ್ಬಂದಿಗಳು ಸ್ಥಳೀಯರ ಸಹಕಾರದೊಂದಿಗೆ ದಾಳಿ ನಡೆಸಿದರು. ದಾಳಿ ವೇಳೆ ಮಾದಕ ವಸ್ತುವನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದ ಇಬ್ಬರನ್ನು ಬಂಧಿಸಿ ಶೋಧನೆ ನಡೆಸಲಾಯಿತು.

ಶೋಧನೆ ಸಂದರ್ಭದಲ್ಲಿ ದೊಡ್ಡ ಪ್ರಮಾಣದ ಮಾದಕ ವಸ್ತು ಪತ್ತೆಯಾಗಿದ್ದು, ಅದನ್ನು ವಶಪಡಿಸಿಕೊಂಡು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಈ ಕಾರ್ಯಾಚರಣೆಯಿಂದ ಸ್ಥಳೀಯರಲ್ಲಿ ಆತಂಕ ಕಡಿಮೆಯಾಗಿದ್ದು, ಮಾದಕ ವಸ್ತುಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಅದ್ದೂರಿಯಾಗಿ ನಡೆದ ಕೋದಂಡರಾಮಸ್ವಾಮಿ ಬ್ರಹ್ಮರಥೋತ್ಸವ

ಬಂಗಾರಪೇಟೆ

ನಗರದ ಆರಾಧ್ಯ ದೈವ, ಐತಿಹಾಸಿಕ ಪ್ರಸಿದ್ಧ ಶ್ರೀ ಕೋದಂಡರಾಮಸ್ವಾಮಿ ಬ್ರಹ್ಮರಥೋತ್ಸವವು ಶುಕ್ರವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವೈಭವ ಹಾಗೂ ಧಾರ್ಮಿಕ ಶ್ರದ್ಧಾಭಕ್ತಿಗಳೊಂದಿಗೆ ನೆರವೇರಿತು.

ರಥೋತ್ಸವದ ಅಂಗವಾಗಿ ಮುಂಜಾನೆಯಿಂದಲೇ ದೇವಾಲಯದಲ್ಲಿ ಸೀತಾ, ಲಕ್ಷ್ಮಣ ಸಮೇತ ಶ್ರೀ ಕೋದಂಡರಾಮಸ್ವಾಮಿಗೆ ವಿಶೇಷ ಅಭಿಷೇಕ, ಹೋಮ–ಹವನ ಹಾಗೂ ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಮಧ್ಯಾಹ್ನ



ನಿಗದಿತ ಶುಭ ಮುಹೂರ್ತದಲ್ಲಿ ಉತ್ಸವ ಮೂರ್ತಿಗಳನ್ನು ರಥಾರೋಹಣ ಮಾಡಿಸಿದ ಬಳಿಕ, ಭಕ್ತರ ಜಯಘೋಷಗಳ ನಡುವೆ ರಥ ಎಳೆಯಲಾಯಿತು.

ಬ್ರಹ್ಮರಥೋತ್ಸವದಲ್ಲಿ ಶಾಸಕ ಎಸ್. ಎನ್.ನಾರಾಯಣಸ್ವಾಮಿ, ಸಂಸದ ಮಲ್ಲೇಶ್ ಬಾಬು ಹಾಗೂ ತಹಸೀಲ್ದಾರ್ ಕೆ.ಎನ್.ಸುಜಾತ, ಡಿವೈಎಸ್ಪಿ ಲಕ್ಷ್ಮಯ್ಯ ಪಾಲ್ಗೊಂಡು ದೇವರ ದರ್ಶನ ಪಡೆದರು.

ರಥಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಿದ ಶಾಸಕರು, ಕ್ಷೇತ್ರದ ಜನತೆಗೆ ಒಳಿತಾಗಲಿ ಎಂದು ಪ್ರಾರ್ಥಿಸಿದರು.

ರಥವು ನಗರದ ಪ್ರಮುಖ ಬೀದಿಗಳಲ್ಲಿ ಸಾಗುತ್ತಿದ್ದಂತೆ ರಸ್ತೆಯ ಇಕ್ಕೆಲಗಳಲ್ಲಿ ನೆರೆದಿದ್ದ ಸಾವಿರಾರು ಭಕ್ತರು ರಥಕ್ಕೆ ಹಣ್ಣು–ಜವನ ಎಸೆದು ಭಕ್ತಿ ಸಮರ್ಪಿಸಿದರು. ಕೇವಲ ತಾಲ್ಲೂಕಿನಿಂದ ಮಾತ್ರವಲ್ಲದೆ ನೆರೆಯ ಆಂಧ್ರಪ್ರದೇಶ ಮತ್ತು ತಮಿಳುನಾಡಿನಿಂದಲೂ ಭಕ್ತರು ಆಗಮಿಸಿ ದೇವರಿಗೆ ಹರಕೆ ಸಲ್ಲಿಸಿದರು.

ಹಬ್ಬದ ಪ್ರಯುಕ್ತ ನಗರದಾದ್ಯಂತ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ವಿವಿಧ ಸಂಘ–ಸಂಸ್ಥೆಗಳು ಹಾಗೂ ದಾನಿಗಳ ವತಿಯಿಂದ ಭಕ್ತಾದಿಗಳಿಗೆ ಪಾನಕ, ಮಜ್ಜಿಗೆ ಹಾಗೂ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಶಾಂತಿಯುತವಾಗಿ ಉತ್ಸವ ಜರುಗಲು ಪೊಲೀಸ್ ಇಲಾಖೆಯಿಂದ ಬಿಗಿ ಬಂದೋಬಸ್ತ್ ಕಲ್ಪಿಸಲಾಗಿತ್ತು.

# ಎಂ.ಎಸ್.ಡಬ್ಲ್ಯು ವಿದ್ಯಾರ್ಥಿಗಳಿಂದ ಗ್ರಾಮೀಣ ಶಿಬಿರ

ಕನಕಪುರ

ದೊಂತೂರಿನ ಮಾರೇಗೌಡರ ಕೊಡುಗೆ ಅಪಾರವಾಗಿದ್ದು, ಅವರು ಸಲ್ಲಿಸಿದ ಸೇವೆಗಳು ಅಜರಾಮರ ಎಂದು ರೂರಲ್ ಕಾಲೇಜಿನ ವಾಣಿಜ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಭೋಜರಾಜು ಹೇಳಿದರು.

ಸಾತನೂರು ಹೋಬಳಿಯ ದೊಂತೂರು ಗ್ರಾಮದಲ್ಲಿ ಎಂ.ಎಸ್.ಡಬ್ಲ್ಯು ವಿದ್ಯಾರ್ಥಿಗಳಿಂದ ನಡೆಯುತ್ತಿರುವ ಶಿಬಿರದ ಮೂರನೇ ದಿನದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. “ಮಾರೇಗೌಡರು ಗ್ರಾಮದಲ್ಲಿ ಅನೇಕ ಸಮಾಜಮುಖಿ ಕಾರ್ಯಗಳನ್ನು ನಡೆಸಿ ಜನಾನುರಾಗಿಯಾಗಿ ಬದುಕಿದ್ದರು. ಗ್ರಾಮದಲ್ಲಿ ಯಾವುದೇ ಸಮಸ್ಯೆ ಬಂದರೂ ಅದನ್ನು




ಪರಿಹರಿಸುವಲ್ಲಿ ಮುಂಚೂಣಿಯಲ್ಲಿ ನಿಂತು ಎಲ್ಲರ ಪ್ರೀತಿ ಗಳಿಸಿದ್ದರು” ಎಂದು ಅವರು ತಿಳಿಸಿದರು.

ಡಾ. ಮುತ್ತುರಾಜ್ ಮಾತನಾಡಿ ಹಳ್ಳಿ ಜೀವನದ ಸರಳತೆ, ಗ್ರಾಮೀಣ ಹಾಗೂ ನಗರ ಜೀವನದ ನಡುವಿನ ವ್ಯತ್ಯಾಸಗಳ ಕುರಿತು ವಿವರಿಸಿದರು.

ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರದ ವಾಣಿಜ್ಯ ವಿಭಾಗದ ಅಧ್ಯಾಪಕ ವಿರಾಜ್ ಅವರು ಗ್ರಾಮದ ಹಿನ್ನೆಲೆ ಹಾಗೂ ಊರಿನೊಂದಿಗೆ ಜನರ ನಂಟಿನ ಕುರಿತು ಮಾತನಾಡಿದರು.

ಗ್ರಾಮದ ಹಿರಿಯ ನಾಗರಿಕರಾದ ಶ್ರೀಮತಿ ದೊಡ್ಡತಾಯಮ್ಮ ಅವರು ತತ್ವಪದ ಹಾಗೂ ಸೋಬಾನೆ ಗೀತೆಗಳನ್ನು ಹಾಡಿ ಕಾರ್ಯಕ್ರಮಕ್ಕೆ ಸಾಂಸ್ಕೃತಿಕ ಮೆರುಗು ನೀಡಿದರು. ಬಳಿಕ ಪುಟ್ಟಸ್ವಾಮಿ ಹಾಗೂ ರಘು ಅವರು ಜನಪದ ಗೀತೆಗಳನ್ನು ಹಾಡಿ ಮನರಂಜಿಸಿದರು.

ಶಿಬಿರದ ಸಂಯೋಜಕರಾದ ಡಾ. ದೇವಿಂದ್ರಪ್ಪ ಹಾಗೂ ಮಧುಕುಮಾರ್ ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ವಿದ್ಯಾರ್ಥಿನಿ ಚಂದನ ಆರ್ ನಡೆಸಿಕೊಟ್ಟರು.

ವಿದ್ಯಾರ್ಥಿ ಹರೀಶ್ ಆರ್ ಸ್ವಾಗತ ಭಾಷಣ ಮಾಡಿದರು.

# ಸರಕಾರಿ ಶಾಲೆ ಅಂಗನವಾಡಿ ಕಟ್ಟಡ ಇರುವ ಜಾಗ ಕಬಳಿಕೆಗೆ ಹುನ್ನಾರ

ರಾಮನಗರ

ಶಾಲಾ ಕಟ್ಟಡವಿರುವ ಜಾಗದ ಕಬಳಿಕೆಗೆ ನಡೆದಿದೆ ಹುನ್ನಾರ.. ಸರಕಾರಿ ಶಾಲೆಗಳನ್ನು ನಾನಾ ಕಾರಣಗಳಿಗಾಗಿ ಮುಚ್ಚುತ್ತಿರುವ ಸನ್ನಿವೇಶದಲ್ಲಿ ನಮ್ಮೂರ ಶಾಲೆಯನ್ನು ಉಳಿಸಿಕೊಡಿ.. ಹೊಸಕಟ್ಟಡ ನಿರ್ಮಿಸಿ ಮಾದರಿ ಶಾಲೆ ಮಾಡುತ್ತೇವೆ.. ಹೀಗೆಂದು ಹಲಸಿನಮರದದೊಡ್ಡಿ ಗ್ರಾಮಸ್ಥರು ಸಂಬಂಧಿಸಿದ ಇಲಾಖಾಧಿಕಾರಿಗಳಲ್ಲಿ ಮನವಿ ಮಾಡಿದ್ದಾರೆ.

ತಾಲ್ಲೂಕಿನ ಬಿಡದಿ ಪುರಸಭೆ 2ನೇ ವಾರ್ಡ್ ವ್ಯಾಪ್ತಿಯ ಹಲಸಿನಮರದದೊಡ್ಡಿ ಗ್ರಾಮದಲ್ಲಿ ಪುಟಾಣಿ ಮಕ್ಕಳಿಗೆ ಪ್ರಾಥಮಿಕ ಶಿಕ್ಷಣವನ್ನು ಒದಗಿಸುವ ಉದ್ದೇಶದಿಂದ ಮೂರುವರೆ ದಶಕದ ಹಿಂದೆಯೇ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಕಟ್ಟಡ ಮತ್ತು ಅಂಗನವಾಡಿ ಕೇಂದ್ರವನ್ನು ನಿರ್ಮಿಸಲಾಗಿದೆ.

ಇದೀಗ ಖಾಸಗಿ ವ್ಯಕ್ತಿಯೊಬ್ಬರು ಸದರಿ ಜಾಗವನ್ನು ಅಕ್ರಮವಾಗಿ ಖಾತೆ ಮಾಡಿಸಿಕೊಳ್ಳಲು ಯತ್ನಿಸಿರುವ ಕಾರಣ ಅಧಿಕಾರಿಗಳು ತಕ್ಷಣವೇ ಸ್ಥಳ ಪರಿಶೀಲಿಸಿ ಸರಕಾರದ ಆಸ್ತಿಯೆಂದು ಘೋಷಣೆ ಮಾಡಬೇಕಾಗಿ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಯಾವ ಜಾಗ, ಏನಿದು ಸಮಸ್ಯೆ?

ಹಲಸಿನಮರದದೊಡ್ಡಿ ಮತ್ತು ಕರಿಯಪ್ಪನದೊಡ್ಡಿ ಗ್ರಾಮಗಳ ಪುಟ್ಟಮಕ್ಕಳು ಹಿಂದೆ ಬಿಡದಿ ಅಥವಾ ಬಾನಂದೂರು ಸರಕಾರಿ ಶಾಲೆಗಳಿಗೆ ನಡೆದುಕೊಂಡು ಹೋಗಬೇಕಿದ್ದ ಸನ್ನಿವೇಶದಲ್ಲಿ ಕೆಲವು ಹಿರಿಯರು ಸೇರಿ ನಮ್ಮೂರಲ್ಲಿಯೇ ಒಂದು ಪ್ರಾಥಮಿಕ ಶಾಲೆ ನಿರ್ಮಿಸೋಣವೆಂದು ತೀರ್ಮಾನಿಸಿದರು. ಸುಮಾರು 35 ವರ್ಷಗಳ ಹಿಂದೆಯೇ ದೇಣಿಗೆ ಸಂಗ್ರಹಿಸುವ ಮೂಲಕ ಹಲಸಿನಮರದದೊಡ್ಡಿ ಗ್ರಾಮದಲ್ಲಿ 3500 ರೂಗಳಿಗೆ ಖಾಸಗಿಯವರಿಂದ ಸರ್ವೇ ನಂ.94/14 ರಲ್ಲಿ ಒಂದೂವರೆ ಗುಂಟೆಯಷ್ಟು ಜಾಗವನ್ನು ಖರೀದಿ ಮಾಡಿದ್ದಾರೆ.

ಆದರೆ ಇತ್ತೀಚೆಗೆ ಹಲಸಿನಮರದದೊಡ್ಡಿ ಗ್ರಾಮದ ದೊಡ್ಡಕಗ್ಗಲ್ಲಯ್ಯ ಎಂಬುವರು ಶಾಲಾ ಕಟ್ಟಡ ಮತ್ತು ಅಂಗನವಾಡಿ ಕಟ್ಟಡವಿರುವ ಸ್ಥಳವನ್ನು ಅಕ್ರಮವಾಗಿ ಪೌತಿಖಾತೆ ಮಾಡಿಸಿಕೊಳ್ಳಲು ಯತ್ನಿಸಿರುತ್ತಾರೆ. ಇದರ ಬೆನ್ನಲ್ಲೇ ಸದರಿ ಜಮೀನಿನ ಖಾತೆಯನ್ನು ಯಾರ ಹೆಸರಿಗೂ ಮಾಡಬಾರದೆಂದು ಕೋರಿ ಗ್ರಾಮಸ್ಥರು ತಾಲ್ಲೂಕು ತಹಸೀಲ್ದಾರ್‌ರವರಿಗೆ ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಹಾಗಾಗಿ ಸಂಬಂಧಪಟ್ಟ ಇಲಾಖಾಧಿಕಾರಿಗಳು ಇತ್ತ ಗಮನಹರಿಸಿ ದಾಖಲಾತಿಯೊಂದಿಗೆ ಸ್ಥಳ ಪರಿಶೀಲಿಸಿ ನಮ್ಮೂರಿನ ಸರಕಾರಿ ಶಾಲಾ ಕಟ್ಟಡವನ್ನು ಉಳಿಸಿಕೊಡಬೇಕೆಂದು ಗ್ರಾಮಸ್ಥರು ಅವಲತ್ತುಗೊಂಡಿದ್ದಾರೆ.

# ‘ಕಟ್ಟಡ ಕಾರ್ಮಿಕರ ಶ್ರಮವೇ ದೇಶದ ಅಭಿವೃದ್ಧಿಯ ಅಡಿಪಾಯ’

ಬಂಗಾರಪೇಟೆ

ದೇಶದ ಸರ್ವತೋಮುಖ ಅಭಿವೃದ್ಧಿಯಲ್ಲಿ ಕಟ್ಟಡ ಕಾರ್ಮಿಕರ ಪಾತ್ರ ಅನನ್ಯವಾಗಿದ್ದು, ಸುಂದರ ಕಟ್ಟಡಗಳು ಹಾಗೂ ಮೂಲಸೌಕರ್ಯಗಳ ನಿರ್ಮಾಣಕ್ಕೆ ಅವರ ಶ್ರಮವೇ ಅಡಿಪಾಯ ಎಂದು ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಬಿ.ವಿ.ಮಹೇಶ್ ಹೇಳಿದರು.

ನಗರದ ವಿನಾಯಕ ಕಟ್ಟಡ ಕಾರ್ಮಿಕರ ಸಂಘದ ವತಿಯಿಂದ ಶುಕ್ರವಾರ ಆಯೋಜಿಸಲಾದ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಮಿಕರ ಬೆವರಿನ ಹನಿ ಇಲ್ಲದೆ ಯಾವುದೇ ಭವ್ಯ ಕಟ್ಟಡಗಳು ತಲೆ ಎತ್ತಲು ಸಾಧ್ಯವಿಲ್ಲ. ಇಂದಿನ ಪ್ರಗತಿಯ ಹಿಂದೆ ಪ್ರತಿಯೊಬ್ಬ ಕಾರ್ಮಿಕನ ಕಠಿಣ ಪರಿಶ್ರಮ ಅಡಗಿದೆ. ಆದ್ದರಿಂದ ಕಾರ್ಮಿಕರನ್ನು ಕೇವಲ ಕೂಲಿ ಆಳುಗಳೆಂದು ನೋಡದೆ, ಅವರನ್ನು ದೇಶದ ಅಭಿವೃದ್ಧಿಯ ನಿಜವಾದ ಶಿಲ್ಪಿಗಳೆಂದು ಗೌರವಿಸಬೇಕು ಎಂದು ಹೇಳಿದರು.

ಅನೇಕ ಕಾರ್ಮಿಕರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ಅರಿವು ಇಲ್ಲ. ಕಾರ್ಮಿಕರು ಸಂಘಟಿತರಾಗಿ ತಮ್ಮ ಹಕ್ಕುಗಳ ಬಗ್ಗೆ



ಜಾಗೃತರಾಗಬೇಕು. ಕಾರ್ಮಿಕ ಇಲಾಖೆಯ ಸೌಲಭ್ಯಗಳು, ವಿಮೆ ಹಾಗೂ ಮಕ್ಕಳ ಶೈಕ್ಷಣಿಕ ಸಹಾಯಧನಗಳನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಪುರಸಭೆ ಮಾಜಿ ಅಧ್ಯಕ್ಷ ಕೆ. ಚಂದ್ರಾರೆಡ್ಡಿ ಮಾತನಾಡಿ, ಅಸಂಘಟಿತ ಕಾರ್ಮಿಕರು ಎದುರಿಸುತ್ತಿರುವ ಆರ್ಥಿಕ ಸಂಕಷ್ಟಗಳು ಅವರ ಮಕ್ಕಳ ಶಿಕ್ಷಣಕ್ಕೆ ಅಡ್ಡಿಯಾಗಬಾರದು ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಕಾರ್ಮಿಕ ಮಕ್ಕಳಿಗಾಗಿ ವಸತಿ ಶಾಲೆಗಳನ್ನು ಆರಂಭಿಸುತ್ತಿದೆ ಎಂದು ತಿಳಿಸಿದರು.

ಈ ಯೋಜನೆಯಡಿ 1ನೇ ತರಗತಿಯಿಂದ ದ್ವಿತೀಯ ಪಿಯುಸಿ ವರೆಗೆ ಉಚಿತ ಶಿಕ್ಷಣ ದೊರೆಯಲಿದ್ದು, ವಸತಿ ಸೌಲಭ್ಯ, ಪಠ್ಯಪುಸ್ತಕ, ಸಮವಸ್ತ್ರ ಹಾಗೂ ಪೌಷ್ಟಿಕ ಆಹಾರವನ್ನು ಸರ್ಕಾರವೇ ಒದಗಿಸಲಿದೆ ಎಂದು ಹೇಳಿದರು.

ಕಾರ್ಮಿಕರ ಮಕ್ಕಳು ಕೇವಲ ಕೆಲಸಕ್ಕೆ ಸೀಮಿತವಾಗದೆ ಉನ್ನತ ಶಿಕ್ಷಣ ಪಡೆದು ಸಮಾಜದ ಮುಖ್ಯವಾಹಿನಿಗೆ ಬರಬೇಕು. ಈ ವಸತಿ ಶಾಲೆಯ ಸೌಲಭ್ಯವನ್ನು ಪ್ರತಿಯೊಬ್ಬ ಅರ್ಹ ಕಾರ್ಮಿಕ ಕುಟುಂಬವೂ ಬಳಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಹೊಸರಾಯಪ್ಪ, ಮಾಜಿ ತಾಲೂಕು ಪಂಚಾಯಿತಿ ಸದಸ್ಯ ಮಾರ್ಕಂಡೇಗೌಡ, ಎಚ್.ಆರ್. ಶ್ರೀನಿವಾಸ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮತದಾನದ ವೇಳೆ ಅಕ್ರಮ: 15 ಮತಗಟ್ಟೆಗಳಲ್ಲಿ ಇಂದು ಮರು ಮತದಾನ

ಕೋಲ್ಕತ್ತಾ

ಪಶ್ಚಿಮ ಬಂಗಾಳದ ಡೈಮಂಡ್ ಹಾರ್ಬರ್ ಮತ್ತು ಮಗ್ರಹತ್ ಪಶ್ಚಿಮ್ ಕ್ಷೇತ್ರಗಳಲ್ಲಿ ಅಕ್ರಮ ನಡೆದಿದೆ ಎಂದು ದೂರುಗಳು ಬಂದ ಹಿನ್ನೆಲೆ 15 ಮತಗಟ್ಟೆಗಳಲ್ಲಿ ಮರು ಮತದಾನ ನಡೆಸುವುದಾಗಿ ಭಾರತೀಯ ಚುನಾವಣಾ ಆಯೋಗ ಘೋಷಿಸಿದೆ.

ಮಗ್ರಹತ್ ಪಶ್ಚಿಮ್‌ನ 11 ಮತಗಟ್ಟೆಗಳಲ್ಲಿ ಮತ್ತು ಡೈಮಂಡ್ ಹಾರ್ಬರ್‌ನ 4 ಮತಗಟ್ಟೆಗಳಲ್ಲಿ ಶನಿವಾರ ಮರು ಮತದಾನ ನಡೆಯಲಿದೆ ಎಂದು ಚುನಾವಣಾ ಆಯೋಗ ತನ್ನ ಆದೇಶದಲ್ಲಿ ತಿಳಿಸಿದೆ. ಎಲ್ಲಾ 15 ಮತಗಟ್ಟೆಗಳಲ್ಲಿ ಮತದಾನ ಬೆಳಗ್ಗೆ 7 ಗಂಟೆಗೆ ಪ್ರಾರಂಭವಾಗಿ ಸಂಜೆ 6 ಗಂಟೆಗೆ ಕೊನೆಗೊಳ್ಳಲಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಏಪ್ರಿಲ್ 23 ಮತ್ತು ಏಪ್ರಿಲ್ 29 ರಂದು ಎರಡು ಹಂತಗಳಲ್ಲಿ ಮತದಾನ ನಡೆದಿದ್ದು, ಸ್ವಾತಂತ್ರ್ಯದ ನಂತರ ರಾಜ್ಯವು ಅತಿ ಹೆಚ್ಚು ಮತದಾನವನ್ನು ದಾಖಲಿಸಿದೆ.

ಎರಡೂ ಹಂತಗಳ ಒಟ್ಟಾರೆ ಮತದಾನ ಶೇ. 92.47 ರಷ್ಟಿತ್ತು ಎಂದು ಚುನಾವಣಾ ಆಯೋಗ ಕಳೆದ ವಾರ ತಿಳಿಸಿತ್ತು. ಮೇ 4 ರಂದು ಮತ ಎಣಿಕೆ ನಡೆಯಲಿದೆ.

ಮತದಾನದ ನಂತರದ ಹಿಂಸಾಚಾರವನ್ನು ತಡೆಗಟ್ಟಲು ಚುನಾವಣಾ ಆಯೋಗವು ಕಟ್ಟೆಚ್ಚರ ವಹಿಸಿದೆ. ಪಕ್ಷದ ಅಧಿಕೃತ ಪ್ರತಿನಿಧಿಗಳ ಅನುಪಸ್ಥಿತಿಯಲ್ಲಿ ಮತಪೆಟ್ಟಿಗೆಗಳನ್ನು ತೆರೆಯಲಾಗಿದೆ ಎಂದು ಆರೋಪಿಸಿ ತೃಣಮೂಲ ಕಾಂಗ್ರೆಸ್ ನಾಯಕರು ನೇತಾಜಿ ಒಳಾಂಗಣ ಕ್ರೀಡಾಂಗಣದಲ್ಲಿ ಪ್ರತಿಭಟನೆ ನಡೆಸಿದ್ದರು. ಕೋಲ್ಕತ್ತಾ ಪೊಲೀಸರು ಮತ ಎಣಿಕೆ ನಡೆಯುವ ಏಳು ಪ್ರದೇಶಗಳಲ್ಲಿ ಸಭೆ ಸೇರುವುದನ್ನು ನಿಷೇಧಿಸಿದ್ದಾರೆ.

03/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಅದ್ದೂರಿಯಾಗಿ ನಡೆದ ಹಸೀ ಕರಗ ಮಹೋತ್ಸವ

ಬಂಗಾರಪೇಟೆ



ನಗರದಲ್ಲಿ ಗುರುವಾರ ರಾತ್ರಿ ಹಸೀ ಕರಗ ಮಹೋತ್ಸವ ಭಕ್ತಿ ಮತ್ತು ಸಂಭ್ರಮದ ವಾತಾವರಣದಲ್ಲಿ ಅದ್ದೂರಿಯಾಗಿ ನೆರವೇರಿತು.

ಕರಗದ ಪೂಜಾರಿ ಕೃಷ್ಣಮೂರ್ತಿ ಅವರು ಸಂಪ್ರದಾಯಬದ್ಧ ವಿಧಿವಿಧಾನಗಳೊಂದಿಗೆ ಹಸೀ ಕರಗವನ್ನು ಎತ್ತಿಕೊಂಡು ಭಕ್ತರ ಗಮನ ಸೆಳೆದರು. ದೇಶಹಳ್ಳಿ ಕೆರೆಯಿಂದ ಕರಗವನ್ನು ಎತ್ತಿಕೊಂಡು ಬಂದ ಪೂಜಾರಿ ಹಾಗೂ ಭಕ್ತರು ನಗರ ಪ್ರಮುಖ ರಸ್ತೆಗಳಲ್ಲಿ ಭವ್ಯ ಮೆರವಣಿಗೆ ನಡೆಸಿದರು.

ಮೆರವಣಿಗೆಯ ವೇಳೆ ಕರಗಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು. ಪಟ್ಟಣದ ಪ್ರಮುಖ ವೃತ್ತಗಳು ಹಾಗೂ ರಸ್ತೆಗಳಲ್ಲಿ ಸಾವಿರಾರು ಭಕ್ತರು ಸೇರಿ ಹಸೀ ಕರಗದ ದರ್ಶನ ಪಡೆದು ಭಕ್ತಿ ಭಾವ ವ್ಯಕ್ತಪಡಿಸಿದರು.

ಕರಗ ಸಾಗಿದ ಮಾರ್ಗದ ಎಲ್ಲೆಡೆ ಭಕ್ತರು ಹಣ್ಣು, ಹೂವು ಹಾಗೂ ಪ್ರಸಾದವನ್ನು ಅರ್ಪಿಸಿ ಆಶೀರ್ವಾದ ಪಡೆದರು. ಕೆಲವರು ಭಕ್ತಿಭಾವದಿಂದ ಪೂಜೆ ಸಲ್ಲಿಸಿದರು.

ಪೊಲೀಸ್ ಇಲಾಖೆ ಭದ್ರತಾ ವ್ಯವಸ್ಥೆ ಕೈಗೊಂಡಿದ್ದು, ಮೆರವಣಿಗೆಯ ವೇಳೆ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸಿತು.

ಹಸೀ ಕರಗ ಮಹೋತ್ಸವವು ಧಾರ್ಮಿಕ ಭಾವನೆಗಳ ಜೊತೆಗೆ ಜನರಲ್ಲಿ ಏಕತೆ ಹಾಗೂ ಸಾಂಸ್ಕೃತಿಕ ಪರಂಪರೆಯ ಮಹತ್ವವನ್ನು ಸಾರುವ ಕಾರ್ಯಕ್ರಮವಾಗಿ ಗಮನಸೆಳೆಯಿತು.

# ಮರೀಚಿಕೆಯಾಗುತ್ತಿರುವ ಕಾನೂನುಗಳು, ನಿಲ್ಲದ ಕಾರ್ಮಿಕ ಶೋಷಣೆ

ಕೋಲಾರ



ದೇಶದಲ್ಲಿ ಆಳುವ ಸರ್ಕಾರದ ನೀತಿಗಳ ಪರಿಣಾಮವಾಗಿ ಕಾರ್ಮಿಕರ ಭದ್ರತೆಗೆ ಇರುವ ಕಾನೂನುಗಳು ಹಂತಹಂತವಾಗಿ ಮರೀಚಿಕೆಯಾಗುತ್ತಿವೆ. ಕಾರ್ಮಿಕರ ಮೇಲೆ ನಡೆಯುತ್ತಿರುವ ಅನ್ಯಾಯ, ದಬ್ಬಾಳಿಕೆ ಮತ್ತು ಶೋಷಣೆ ಇನ್ನೂ ನಿಂತಿಲ್ಲ ಎಂದು ಐ.ಎನ್.ಟಿ.ಯು.ಸಿ ಜಿಲ್ಲಾ ಅಧ್ಯಕ್ಷ ಹೊನ್ನೇನಹಳ್ಳಿ ಯಲ್ಲಪ್ಪ ಆರೋಪಿಸಿದರು.

ನಗರದ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಮುಂಭಾಗದಲ್ಲಿ ಮೇ ದಿನಾಚರಣೆ ಅಂಗವಾಗಿ ಶುಕ್ರವಾರ ನಡೆದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇಶದಲ್ಲಿ ಪ್ರಸ್ತುತ ಸರ್ಕಾರದ ನೀತಿಗಳಿಂದ ಕಾರ್ಮಿಕರಿಗೆ ದೊರಕಬೇಕಾದ ನ್ಯಾಯಯುತ ಸೌಲಭ್ಯಗಳು ಸರಿಯಾಗಿ ತಲುಪುತ್ತಿಲ್ಲ. ದೊಡ್ಡ ಕಂಪನಿಗಳು ಹಾಗೂ ಬಂಡವಾಳಶಾಹಿಗಳ ಲಕ್ಷಾಂತರ ಕೋಟಿ ರೂಪಾಯಿ ಸಾಲ ಮನ್ನಾ ಮಾಡಲಾಗುತ್ತಿದ್ದರೂ, ಬಡತನ ಮತ್ತು ನಿರುದ್ಯೋಗ ಸಮಸ್ಯೆಗಳು ತೀವ್ರವಾಗಿವೆ ಎಂದು ಅವರು ಹೇಳಿದರು.

ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಸಂಘಟಿತ ಹೋರಾಟ ಅನಿವಾರ್ಯವಾಗಿದೆ. ಕಾರ್ಮಿಕರ ಹಕ್ಕುಗಳನ್ನು ಉಳಿಸಿಕೊಳ್ಳಲು ಎಲ್ಲರೂ ಸಜ್ಜಾಗಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಇನ್ನಷ್ಟು ಗಂಭೀರ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕೇಂದ್ರ ಸರ್ಕಾರ ಬಹುರಾಷ್ಟ್ರೀಯ ಹಾಗೂ ಬಂಡವಾಳಶಾಹಿಗಳ ಪರವಾಗಿ ಕಾರ್ಯನಿರ್ವಹಿಸುತ್ತಿದೆ ಎಂಬುದಕ್ಕೆ ಇತ್ತೀಚೆಗೆ ಜಾರಿಗೆ ಬಂದ ನಾಲ್ಕು ಕಾರ್ಮಿಕ ಸಂಹಿತೆಗಳೇ ಸಾಕ್ಷಿ ಎಂದು ಅವರು ಆರೋಪಿಸಿದರು.

ಕಾರ್ಮಿಕರಿಗೆ ಕನಿಷ್ಠ ವೇತನ ಜಾರಿಯಾಗಬೇಕಿದೆ. ಕಾರ್ಮಿಕರ ಶ್ರಮದಿಂದಲೇ ಕಾರ್ಖಾನೆಗಳು ನಡೆಯುತ್ತಿವೆ ಎಂಬ ಅರಿವು ಮಾಲೀಕರು ಹೊಂದಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಐ.ಎನ್.ಟಿ.ಯು.ಸಿ ಜಿಲ್ಲಾ ಕಾರ್ಯದರ್ಶಿ ಮುರಳೀಧರ್, ತಾಲೂಕು ಅಧ್ಯಕ್ಷ ವೆಂಕಟೇಶ್, ಕಾರ್ಯದರ್ಶಿ ನಾಗರಾಜ್, ಖಜಾಂಚಿ ಲಕ್ಷ್ಮಿಕಾಂತಮ್ಮ, ಮಹಿಳಾ ಘಟಕದ ತಾಲೂಕು ಅಧ್ಯಕ್ಷೆ ಮಾಲಾ, ಹಾಗೂ ಸಮಿತಿ ಸದಸ್ಯರಾದ ಮುನಿಯಮ್ಮ, ಶಿವಣ್ಣ, ಅನಿಲ್, ಮಾಲಮ್ಮ, ಶಂಕರಪ್ಪ, ಕುಮಾರ್, ಜಡೇರಿ ನಾರಾಯಣಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿಜೃಂಭಣೆಯ ಹೂವಿನ ಕರಗ ಮಹೋತ್ಸವ

ದೊಡ್ಡಬಳ್ಳಾಪುರ

ದೊಡ್ಡ ತುಮಕೂರು ಗ್ರಾಮದ ಆದಿಶಕ್ತಿ ಶ್ರೀ ರೇಣುಕಾ ಎಲ್ಲಮ್ಮ ದೇವಿಯ ಹೂವಿನ ಕರಗ ಮಹೋತ್ಸವವು ಶುಕ್ರವಾರ ಭಕ್ತಿ ಮತ್ತು ಸಂಭ್ರಮದ ವಾತಾವರಣದಲ್ಲಿ ವಿಜೃಂಭಣೆಯಿಂದ ನಡೆಯಲಿದೆ ಎಂದು ಗ್ರಾಮ ಪ್ರಮುಖ ಹಾಗೂ ಸಮಿತಿ ಮುಖಂಡ ಎಲ್‌ಐಸಿ ಟಿ.ಜಿ. ಮಂಜುನಾಥ್ ತಿಳಿಸಿದ್ದಾರೆ.



ಬುದ್ಧ ಪೂರ್ಣಿಮೆ ಅಂಗವಾಗಿ ನಡೆಯುವ ಏಳನೇ ವಾರ್ಷಿಕೋತ್ಸವ ಹಾಗೂ ಅಮ್ಮನವರ ಕರಗ ಮಹೋತ್ಸವದ ಪ್ರಯುಕ್ತ ದೇವಾಲಯದಲ್ಲಿ ಬೆಳಿಗ್ಗೆ ಆರು ಗಂಟೆಗೆ ದೇವಿ ಸುಪ್ರಭಾತ, ಯಾಗಶಾಲಾ ಪ್ರವೇಶ, ಮಹಾಗಣಪತಿ ಪೂಜೆ, ಧ್ವಜಾರೋಹಣ, ಅಂಕುರಾರ್ಪಣ, ಪ್ರಧಾನ ಹೋಮ ಹಾಗೂ ಬ್ರಹ್ಮ ಕುಂಭಾಭಿಷೇಕ ಸೇರಿದಂತೆ ಹಲವು ಧಾರ್ಮಿಕ ವಿಧಿವಿಧಾನಗಳು ನಡೆಯಲಿವೆ.

ರಾತ್ರಿ ಹತ್ತು ಗಂಟೆಯಿಂದ ಹನ್ನೊಂದು ಗಂಟೆಯೊಳಗೆ ಸ್ವಾತಿ ನಕ್ಷತ್ರ ಹಾಗೂ ಧನುರ್ ಲಗ್ನದಲ್ಲಿ ದೇವಾಲಯದಿಂದ ಶ್ರೀ ರೇಣುಕಾ ಎಲ್ಲಮ್ಮ ದೇವಿಯ ಹೂವಿನ ಕರಗ ಮೆರವಣಿಗೆ ಆರಂಭವಾಗಲಿದೆ. ಈ ಧಾರ್ಮಿಕ ಕಾರ್ಯಕ್ಕೆ ಶಿವಮೊಗ್ಗದ ಶ್ರೀ ಚನ್ನವೀರ ಚೇತನ ಡಾ. ಮರಳ ಸಿದ್ದ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವ ಇರಲಿದೆ ಎಂದು ತಿಳಿಸಲಾಗಿದೆ.

ದೊಡ್ಡ ತುಮಕೂರಿನ ನಿವೃತ್ತ ಪೊಲೀಸ್ ಅಧಿಕಾರಿ ನಾಗರಾಜ್ ಅವರು ಕರಗದ ಪೂಜಾರಿಗಳಾಗಿ ಕರಗವನ್ನು ಹೊರುವ ವಿಶೇಷತೆ ಈ ವರ್ಷದ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿದೆ.

ಇದೇ ಸಂದರ್ಭದಲ್ಲಿ ಗ್ರಾಮ ದೇವರುಗಳಾದ ಆವಲ ಕೊಂಡರಾಯ ಸ್ವಾಮಿ, ಮುತ್ತುರಾಯ ಸ್ವಾಮಿ, ಚನ್ನಕೇಶವ ಸ್ವಾಮಿ ಹಾಗೂ ಆಂಜನೇಯ ಸ್ವಾಮಿ ದೇವರುಗಳಿಗೆ ಆರತಿ ಕಾರ್ಯಕ್ರಮಗಳು ಗ್ರಾಮಸ್ಥರ ಸಹಕಾರದೊಂದಿಗೆ ಭವ್ಯವಾಗಿ ನಡೆಯಲಿವೆ.

ಕಾರ್ಯಕ್ರಮದ ಯಶಸ್ಸಿಗೆ ಶ್ರೀ ರೇಣುಕಾ ಎಲ್ಲಮ್ಮ ದೇವಿ ಕರಗ ಸಮಿತಿ ಮುಖಂಡರಾದ ಆರ್. ನಾಗರಾಜ್, ಸರೋಜ, ವಕೀಲ ಅಂಜನಮೂರ್ತಿ ಹಾಗೂ ಟಿ.ಜಿ. ಮಂಜುನಾಥ್ ನೇತೃತ್ವ ನೀಡುತ್ತಿದ್ದಾರೆ.

# 3 ದಿನ ವಿಶೇಷ ಲೋಕ್ ಅದಾಲತ್

ತುಮಕೂರು



ಆಗಸ್ಟ್ 21 ರಿಂದ 3 ದಿನಗಳು ನಡೆಯುವ ಸುಪ್ರೀಂ ಕೋರ್ಟ್‌ನ ವಿಶೇಷ ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಕಕ್ಷಿದಾರರು ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಹೈಕೋರ್ಟ್ ನ್ಯಾಯಾಧೀಶರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾದ ನ್ಯಾ. ಅನು ಶಿವರಾಮನ್ ತಿಳಿಸಿದ್ದಾರೆ.

ಬೆಂಗಳೂರಿನ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದಲ್ಲಿ ಗುರುವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯಾದ್ಯಂತ ಸುದ್ದಿಗೋಷ್ಠಿ ನಡೆಸಿದ ಅವರು, ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣಗಳು ಬಾಕಿಯಿದ್ದು, ಹೊರ ರಾಜ್ಯದ ಕಕ್ಷಿದಾರರು ನ್ಯಾಯಾಲಯಕ್ಕೆ ಸಕಾಲಕ್ಕೆ ಹಾಜರಾಗದೆ ಪ್ರಕರಣಗಳು ಬಾಕಿಯಿರುವ ಹಿನ್ನೆಲೆಯಲ್ಲಿ ಹೊರ ರಾಜ್ಯದ ಕಕ್ಷಿದಾರರಿಗೆ ಅನುಕೂಲವಾಗಬೇಕೆಂಬ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಾಧೀಶರ ಆದೇಶದಂತೆ 'ಸಮಾಧಾನ್ ಸಮರೋಹ್' ಕಾರ್ಯಕ್ರಮದ ಮೂಲಕ ಆಗಸ್ಟ್ 21 ರಿಂದ 3 ದಿನಗಳು ವಿಶೇಷ ಲೋಕ್ ಅದಾಲತ್ ನಡೆಸುತ್ತಿದ್ದು, ಈ ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಮೂಲಕ ಪೂರ್ವ ಸಂಧಾನ ಕಾರ್ಯಕ್ರಮಗಳು ನಡೆದು ಆಗಸ್ಟ್ 21 ರಿಂದ 3 ದಿನಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಕಕ್ಷಿದಾರರು ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಅವರು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ರಾಜ್ಯ ಕಾನೂನು ಸೇವೆಗಳ ಸಮಿತಿ ಅಧ್ಯಕ್ಷರಾದ ನ್ಯಾ. ಆರ್. ದೇವದಾಸ್, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ನ್ಯಾಯಾಧೀಶರಾದ ಹೆಚ್. ಶಶಿಧರ್‌ಶೆಟ್ಟಿ ಇದ್ದರು.

ಮುಂದುವರೆದು, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ. ನೂರುನ್ನೀಸ ಅವರು ತುಮಕೂರಿನಲ್ಲಿ ಸುದ್ದಿಗೋಷ್ಠಿಯಲ್ಲಿದ್ದು, ಸುಪ್ರೀಂ ಕೋರ್ಟ್‌ನಲ್ಲಿ ರಾಜ್ಯಕ್ಕೆ ಸಂಬಂಧಿಸಿದಂತೆ 4328 ಪ್ರಕರಣಗಳು ಇದ್ದು, ತುಮಕೂರು ಜಿಲ್ಲೆಗೆ ಸಂಬಂಧಿಸಿದಂತೆ 101 ಪ್ರಕರಣಗಳು ಬಾಕಿ ಇರುತ್ತವೆ. ಸುಪ್ರೀಂ ಕೋರ್ಟ್‌ನಲ್ಲಿ ನಿರ್ದಿಷ್ಟ ಪ್ರಕರಣಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ವಿಶೇಷ ಲೋಕ್ ಅದಾಲತ್‌ನಲ್ಲಿ ಇತ್ಯರ್ಥ ಪಡಿಸಲಾಗುತ್ತಿದ್ದು, ಸಂಬಂಧಿಸಿದ ಪ್ರಕರಣಗಳಿಗೆ ಜಿಲ್ಲೆಯ ಕಕ್ಷಿದಾರರಿಗೆ ನೋಟಿಸ್ ಜಾರಿಗೊಳಿಸಿ ಶುಕ್ರವಾರದಿಂದಲೇ ಪೂರ್ವ ಸಂಧಾನ ಸಭೆಯನ್ನು ನಡೆಸಲಾಗುವುದು. ಅಲ್ಲದೆ, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಪ್ರಕರಣಗಳಿದ್ದಲ್ಲಿ ಸಂಬಂಧಿಸಿದ ಪಕ್ಷಗಾರರು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಹಾಜರಾಗಿ ತಮ್ಮ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡಬಹುದಾಗಿದೆ ಎಂದು ಅವರು ತಿಳಿಸಿದರು.

ಪ್ರಕರಣಗಳಿಗೆ ಸಂಬಂಧಿಸಿದಂತೆ ಪಕ್ಷಗಾರರು ದೆಹಲಿಗೆ ಹೋಗಲು ಸಾಧ್ಯವಾಗದಿರುವ ಕಾರಣ 'ಸಮಾಧಾನ್ ಸಮಾರೋಹ್' ಕಾರ್ಯಕ್ರಮದ ಮೂಲಕ ತಮ್ಮ ಪ್ರಕರಣಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕವೇ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸದಾವಕಾಶವಾಗಿದ್ದು, ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಲು ಅವರು ಕರೆ ನೀಡಿದ್ದಾರೆ.

# ಭಗವಾನ್ ಬುದ್ಧರ ಜಯಂತಿ ಆಚರಣೆ



ಕೆಜಿಎಫ್

ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತೋತ್ಸವದ ಅಂಗವಾಗಿ ಭಗವಾನ್ ಬುದ್ದರ ಜಯಂತಿಯನ್ನು ಕೆಜಿಎಫ್‌ನ ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ಶುಕ್ರವಾರದಂದು ಆಚರಿಸಲಾಯಿತು.

ಜಿಲ್ಲಾ ಪೊಲೀಸ್ ಕಛೇರಿಯ ಸಹಾಯಕ ಆಡಳಿತಾಧಿಕಾರಿ ಜಿ.ವಿಶ್ವನಾಥ ಅವರು ಭಗವಾನ್ ಬುದ್ದ ರವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಿದರು. ಬುದ್ದ ಅವರ ಆದರ್ಶ ಮತ್ತು ತತ್ವಗಳು, ಸರ್ವಕಾಲಿಕವಾಗಿದ್ದು, ಅವರ ಮಾರ್ಗದರ್ಶನವನ್ನು ಅಳವಡಿಸಿಕೊಂಡು ಮುನ್ನಡೆಯುವಂತೆ ಕರೆ ನೀಡಿದರು. ಬುದ್ಧನ ಶಾಂತಿ ಮತ್ತು ಕರುಣೆಯ ತತ್ವಗಳು ತುಂಬಾ ಅವಶ್ಯಕ. ಸಹನೆ, ದಯೆ ಮತ್ತು ಮೈತ್ರಿಯ ಭಾವನೆಗಳನ್ನು ಬೆಳೆಸಿಕೊಳ್ಳುವುದು ನಮ್ಮ ಜೀವನಕ್ಕೆ ಅವಶ್ಯಕವೆಂದು ಎಎಓ ವಿಶ್ವನಾಥ ಅವರು ಕರೆ ನೀಡಿದರು.

ಅಶೋಕ ದಮ್ಮದತ್ತ ಬೌದ್ದ ಸಮಾಜದ ಕಾರ್ಯದರ್ಶಿ ಭಂತೇಜಿ ಖೇಮಿಂಡೋ ಸ್ವಾಮಿಜೀ ಅವರು ಸಾನ್ನಿದ್ಯ ವಹಿಸಿ, ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿ, ಮಾತನಾಡಿದರು. ಬುದ್ಧ ಪೂರ್ಣಿಮೆಯು ಗೌತಮ ಬುದ್ಧನ ಜನನ, ಜ್ಞಾನೋದಯ ಮತ್ತು ಮಹಾ ಪರಿನಿರ್ವಾಣವನ್ನು ಸ್ಮರಿಸುವ ಅತ್ಯಂತ ಪವಿತ್ರ ದಿನವಾಗಿದೆ. ಶಾಂತಿ, ಅಹಿಂಸೆ ಮತ್ತು ಕರುಣೆಯ ಸಂದೇಶವನ್ನು ಸಾರಿದ ಬುದ್ಧನ ತತ್ವಗಳು ಇಂದಿಗೂ ಪ್ರಸ್ತುತ. ಈ ದಿನದಂದು ಜ್ಞಾನದ ಬೆಳಕನ್ನು ಅಳವಡಿಸಿಕೊಂಡು, ಆಂತರಿಕ ಶಾಂತಿ ಮತ್ತು ಸಹೋದರತ್ವವನ್ನು ಉತ್ತೇಜಿಸುವುದು ನಮ್ಮ ಆಶಯವಾಗಿರಲಿ ಎಂದು ಭಂತೇಜಿ ಖೇಮಿಂಡೋ ಸ್ವಾಮಿಜೀ ಅವರು ಕರೆ ನೀಡಿದರು.

ಭಗವಾನ್ ಬುದ್ದರ ಜಯಂತಿ ಕಾರ್ಯಕ್ರಮದಲ್ಲಿ ಕೆಜಿಎಫ್ ಅಶೋಕ ದಮ್ಮ ದತ್ತ ಬುದ್ದ ಸಂಘದ ಸಂಚಾಲಕ ಡಾ|| ಆರ್.ಪ್ರಭುರಾಂ, ರಾಜ್‌ಕುಮಾರ್ ಮತ್ತು ಜಿಲ್ಲಾ ಪೊಲೀಸ್ ಕಛೇರಿಯ ಅಧಿಕಾರಿ, ಸಿಬ್ಬಂದಿಗಳು ಹಾಗೂ ಲಿಪಿಕ ನೌಕರರು ಭಾಗವಹಿಸಿದ್ದರು.

# ಸದೃಢ ದೇಶ ನಿರ್ಮಾಣದಲ್ಲಿ ಕಾರ್ಮಿಕರ ಕೊಡುಗೆ ಅಪಾರ

ತುಮಕೂರು



ಕಾರ್ಮಿಕರು ದೇಶದ ಅಭಿವೃದ್ಧಿಯ, ಆರ್ಥಿಕ ಬೆಳವಣಿಗೆಯ ರೂವಾರಿಗಳು. ಯಾವುದೇ ಕ್ಷೇತ್ರಗಳಲ್ಲಿ ದುಡಿಯುವ ಕಾರ್ಮಿಕರು ತಾವೂ ಬೆಳವಣಿಗೆ ಹೊಂದುವ ಜೊತೆಗೆ ದೇಶದ ಆರ್ಥಿಕ ಶಕ್ತಿ ಹೆಚ್ಚಳಕ್ಕೂ ಕಾರಣರಾಗಿರುತ್ತಾರೆ. ದುಡಿಯುವ ಜನರ ಶ್ರಮ ಶ್ಲಾಘನೀಯ ಎಂದು ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್. ನಿಂಗಪ್ಪ ಹೇಳಿದರು.

ಶುಕ್ರವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಕಾರ್ಮಿಕರ ದಿನಾಚರಣೆ ಸಮಾರಂಭದಲ್ಲಿ ಪೌರಕಾರ್ಮಿಕರನ್ನು ಸನ್ಮಾನಿಸಿ ಅವರ ಸೇವೆ ಪ್ರಶಂಸಿಸಿದರು. ನಗರ ನೈರ್ಮಲ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಮಹತ್ವವಾದದ್ದು, ನಗರದ ಸ್ವಚ್ಛತೆಗಾಗಿ ಕೆಲಸ ಮಾಡಿ ಜನರ, ಪರಿಸರದ ಆರೋಗ್ಯ ಕಾಪಾಡುತ್ತಿರುವ ಪೌರಕಾರ್ಮಿಕರನ್ನು ಎಲ್ಲರೂ ಗೌರವದಿಂದ ಕಾಣಬೇಕು ಎಂದು ತಿಳಿಸಿದರು.

ಯಾವುದೇ ದೇಶ ಸಂಪತ್ಭರಿತವಾಗಿ, ಸದೃಢವಾಗಿರಲು ದೇಶದ ಆರ್ಥಿಕತೆ ಶಕ್ತಿಯುತವಾಗಿರಬೇಕು. ಉತ್ಪಾದನಾ ಸಾಮರ್ಥ್ಯ ಹೆಚ್ಚಬೇಕು. ಅಂತಹ ಉತ್ಪಾದನೆಯಲ್ಲಿ ತೊಡಗುವ ರೈತರು, ಕಾರ್ಮಿಕರು ಸೇರಿದಂತೆ ದುಡಿಯುವ ವರ್ಗವು ದೇಶದ ಶಕ್ತಿ. ಅವರ ದುಡಿಮೆಯ ಫಲ, ಅದರ ಹಿಂದಿನ ಶ್ರಮವನ್ನು ಎಲ್ಲರೂ ಗೌರವಿಸಬೇಕು ಎಂದು ಹೆಚ್. ನಿಂಗಪ್ಪ ಹೇಳಿದರು.

ಜೆಡಿಎಸ್ ನಗರ ಅಧ್ಯಕ್ಷ ಟಿ.ಹೆಚ್. ಜಯರಾಮ್, ರಾಜ್ಯ ಹಿರಿಯ ಉಪಾಧ್ಯಕ್ಷ ಗಂಗಣ್ಣ, ಎಸ್ಸಿ ಘಟಕ ರಾಜ್ಯ ಉಪಾಧ್ಯಕ್ಷ ಸೋಲಾರ್ ಕೃಷ್ಣಮೂರ್ತಿ, ನಗರಪಾಲಿಕೆ ಮಾಜಿ ಸದಸ್ಯರಾದ ಲಕ್ಷ್ಮೀನರಸಿಂಹರಾಜು, ಟಿ.ಜಿ. ನರಸಿಂಹರಾಜು, ಮೋಹನ್‌ಕುಮಾರ್, ಟಿ.ಎ. ಬಾಲಕೃಷ್ಣ, ಜಿಲ್ಲಾ ಪಂಚಾಯ್ತಿ ಮಾಜಿ ಅಧ್ಯಕ್ಷೆ ಕುಸುಮಾ ಜಗನ್ನಾಥ್, ಮುಖಂಡರಾದ ಅಶ್ವತ್ಥ್, ಉಪ್ಪಾರಹಳ್ಳಿ ಕುಮಾರ್, ಹೊನ್ನೇಗೌಡ, ಮಂಜುನಾಥ್, ತಾಹೇರಾ ಕುಲ್ಸಂ, ಲೀಲಾವತಿ, ಲಕ್ಷ್ಮೀ ನಾಯಕ್, ಯಶೋಧ, ಸುವರ್ಣ, ಪ್ರಮೋದ್ ಮತ್ತಿತರರು ಭಾಗವಹಿಸಿದ್ದರು.



ನರಸಿಂಹ ಜಯಂತಿಯ ಪ್ರಯುಕ್ತ ಉಡುಪಿಯ ಹಿರಿಯಡ್ಕ ಸಮೀಪದ ಶ್ರೀ ಪುತ್ತಿಗೆ ಮೂಲ ಮಠದಲ್ಲಿ ಶ್ರೀ ದೇವರಿಗೆ ಪರಮಪೂಜ್ಯ ಶ್ರೀ ಪುತ್ತಿಗೆ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರು ಮತ್ತು ಕಿರಿಯ ಶ್ರೀಪಾದರು ಪಂಚಾಮೃತ ಅಭಿಷೇಕದೊಂದಿಗೆ ಸೀಯಾಳ ಅಭಿಷೇಕವನ್ನು ಮಾಡಿ ವಿಶೇಷ ಪೂಜೆಯನ್ನು ಮಾಡಿದರು. ನಂತರ ಸುವರ್ಣ ನದಿಯ ತೀರದಲ್ಲಿ ಊರ್ಧ್ವಾರ್ಚನೆಯೊಂದಿಗೆ ಅಭಿಷೇಕವನ್ನು ಮಾಡಿದರು.



ಶುಕ್ರವಾರ ವೈಶಾಖ ಪೂರ್ಣಿಮೆ ಹಿನ್ನೆಲೆಯಲ್ಲಿ ಮಹಾರಾಷ್ಟ್ರದ ವಿಶ್ವ ವಿಖ್ಯಾತ ಶ್ರೀ ತುಳಜಾ ಭವಾನಿ ದೇವಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಬೃಹತ್ ಭಕ್ತ ಸಮೂಹ ಮಹಾಪೂಜೆಯಲ್ಲಿ ಪಾಲ್ಗೊಂಡು ವಿಶೇಷ ದರ್ಶನ ಪಡೆದು ಪುನೀತರಾದರು.

# ತೊರೆದೊಡ್ಡಿ ಪ್ರೌಢಶಾಲೆಗೆ ಶೇ.100ರಷ್ಟು ಫಲಿತಾಂಶ

ರಾಮನಗರ

ತಾಲ್ಲೂಕಿನ ಬಿಡದಿ ಹೋಬಳಿ ತೊರೆದೊಡ್ಡಿ(ಅಂಗರಹಳ್ಳಿ) ಸರಕಾರಿ ಪ್ರೌಢಶಾಲೆ ವಿದ್ಯಾರ್ಥಿಗಳು 2026ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶಾಲೆಗೆ ಶೇ.100ರಷ್ಟು ಫಲಿತಾಂಶ ಪಡೆಯುವ ಮೂಲಕ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಸರಕಾರಿ ಶಾಲೆಯ ವಿದ್ಯಾರ್ಥಿ ಪೂರ್ಣೇಶ್.ಹೆಚ್ 526 ಅಂಕ ಗಳಿಸುವ ಮೂಲಕ ಶಾಲೆಗೆ ಟಾಪರ್ ಆಗಿದ್ದಾನೆ. ಪರೀಕ್ಷೆ ಬರೆದ ಎಲ್ಲಾ 28 ಜನ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು ಈ ಪೈಕಿ 9 ಜನ ಪ್ರಥಮದರ್ಜೆ, 6 ಜನ ದ್ವಿತೀಯ ಹಾಗೂ 13 ಜನ ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಡಿಡಿಪಿಐ ಸ್ವಾಮಿ, ಬಿಇಒ ಸೋಮಲಿಂಗಯ್ಯ, ಡಯೇಟ್ ಪ್ರಾಂಶುಪಾಲ ವೆಂಕಟೇಶ್ ಹಾಗೂ ಉಪನ್ಯಾಸಕರ ಮಾರ್ಗದರ್ಶನ ಕಾರಣವಾಗಿದೆ. ಶಾಲೆಯ ವಿದ್ಯಾರ್ಥಿಗಳ ಮನೆಮನೆಗೆ ಭೇಟಿ ನೀಡಿ ಪ್ರೋತ್ಸಾಹಿಸಿ ಅಗತ್ಯ ಸಲಹೆಗಳನ್ನು ನೀಡಿದ ಶಿಕ್ಷಕರು, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣಮೂರ್ತಿ, ಶಾಲೆಯ ಪೋಷಕರಾದ ಇಟ್ಟಮಡು ಸೋಮಣ್ಣ(ಚನ್ನಪ್ಪ) ಹಾಗೂ ಎಲ್ಲಾ ರೀತಿಯಲ್ಲೂ ಸಹಕರಿಸಿದ ಮಕ್ಕಳ ಪೋಷಕರಿಗೆ ಅಭಿನಂದನೆ ತಿಳಿಸುವುದಾಗಿ ಶಾಲೆಯ ಮುಖ್ಯಶಿಕ್ಷಕಿ ಜಯಶ್ರೀ ತಿಳಿಸಿದ್ದಾರೆ.

ಖಾಸಗಿ ಶಾಲೆಗಳ ಮೇಲಿನ ವ್ಯಾಮೋಹ ಬಿಟ್ಟು, ಸ್ವಚ್ಛಂದ ವಾತಾವರಣ, ಹೈಟೆಕ್ ಗ್ರಂಥಾಲಯ, ಸಾರಿಗೆ ವ್ಯವಸ್ಥೆ ಸೇರಿದಂತೆ ಅನೇಕ ಸೌಲಭ್ಯಗಳ ಜತೆಗೆ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ತೊರೆದೊಡ್ಡಿ ಸರಕಾರಿ ಪ್ರೌಢಶಾಲೆಗೆ ಮಕ್ಕಳನ್ನು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಿಸಬೇಕು ಎಂದು ಪೋಷಕರಲ್ಲಿ ಸೋಮಣ್ಣ ಮನವಿ ಮಾಡಿದ್ದಾರೆ.

# ಒಳ ಮೀಸಲಾತಿ ಅನುಷ್ಠಾನ ಸ್ವಾಗತಾರ್ಹ

ದೊಡ್ಡಬಳ್ಳಾಪುರ

ರಾಜ್ಯ ಸರ್ಕಾರ ಗ್ರೂಪ್ ಎಗೆ 5.25, ಗ್ರೂಪ್ ಬಿ ಗೆ 5.25 ಹಾಗೂ ಗ್ರೂಪ್ ಸಿ ಗೆ 4.5 ಪ್ರಮಾಣದಲ್ಲಿ ಒಳಮೀಸಲಾತಿ ಜಾರಿಗೆ ತಂದಿರುವುದನ್ನು ಮಾದಿಗ ಸಮುದಾಯ ಸ್ವಾಗತಿಸುತ್ತದೆ ಎಂದು ಮಾದರ ಮಹಾಸಭಾ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಸುಬ್ಬರಾಜು ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. "ನಲವತ್ತು ವರ್ಷಗಳ ಹೋರಾಟಕ್ಕೆ ಇಂದು ನ್ಯಾಯ ದೊರಕಿದಂತಾಗಿದೆ. ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಈ ತೀರ್ಮಾನ ಮಹತ್ವದ್ದಾಗಿದೆ. ಬಸವಣ್ಣನವರ ಸಮಾನತೆ ತತ್ವವನ್ನು ಸರ್ಕಾರ ಕಾರ್ಯರೂಪಕ್ಕೆ ತಂದಿದೆ" ಎಂದು ಹೇಳಿದರು.

ಈ ಹೋರಾಟಕ್ಕೆ ಸಹಕಾರ ನೀಡಿದ ರಾಜ್ಯದ ಪ್ರಮುಖ ಸಚಿವರಾದ ಕೆ.ಎಚ್. ಮುನಿಯಪ್ಪ ಅವರಿಗೆ, ಜೊತೆಗೆ ಒಳಮೀಸಲಾತಿ ಜಾರಿಗೆ ಮುಂದಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆ ಸಲ್ಲಿಸಿದರು.

"ಎಲ್ಲರೂ ಸಮಾನವಾಗಿ ಬದುಕಬೇಕು ಎಂಬ ಮುಖ್ಯಮಂತ್ರಿಗಳ ಬದ್ಧತೆ ಇಂದು ಕಾರ್ಯರೂಪಕ್ಕೆ ಬಂದಿದೆ. ಒಳಮೀಸಲಾತಿ ಜಾರಿಗೆ ಕಾನೂನು ಸಚಿವರು, ಗೃಹ ಸಚಿವರು ಹಾಗೂ ಸಚಿವ ಕೆ. ಎಚ್. ಮಹಾದೇವಪ್ಪ ಸೇರಿದಂತೆ ಅನೇಕರು ಪ್ರಮುಖ ಪಾತ್ರವಹಿಸಿದ್ದಾರೆ" ಎಂದು ಹೇಳಿದರು.

ಚಿತ್ರದುರ್ಗದಲ್ಲಿ ನಡೆದ ಐತಿಹಾಸಿಕ ಸಮಾವೇಶದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಪಕ್ಷದ ನಾಯಕರು ತೆಗೆದುಕೊಂಡ ನಿರ್ಧಾರದಿಂದ ಇದು ಸಾಧ್ಯವಾಗಿದೆ ಎಂದು ಅವರು ತಿಳಿಸಿದರು.



ಮಾದರ ಮಹಾಸಭಾ ವಿಶೇಷ ಪ್ರತಿನಿಧಿ ರಾಮಕೃಷ್ಣ ಮಾತನಾಡಿ, ರಾಜ್ಯದ 101 ಹಿಂದುಳಿದ ಜಾತಿಗಳಿಗೆ ನ್ಯಾಯ ಒದಗಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು. "ಸಮುದಾಯದ ಅನೇಕ ಮುಖಂಡರು ತಮ್ಮ ಜೀವನಪರ್ಯಂತ ಹೋರಾಟ ನಡೆಸಿ ತ್ಯಾಗ ಮಾಡಿದ್ದಾರೆ. ಕೆಲವರು ಕೇಸುಗಳನ್ನು ಎದುರಿಸಿದರೂ ಹೋರಾಟವನ್ನು ನಿಲ್ಲಿಸಲಿಲ್ಲ. ಅವರ ಹೋರಾಟದ ಫಲವೇ ಈ ಒಳಮೀಸಲಾತಿ ನಿರ್ಧಾರ" ಎಂದು ಹೇಳಿದರು.

ತಾಲೂಕು ಅಧ್ಯಕ್ಷ ತಳಗವಾರ ನಾಗರಾಜ್ ಮಾತನಾಡಿ, ಒಳಮೀಸಲಾತಿ ಗೊಂದಲಕ್ಕೆ ರಾಜ್ಯ ಸರ್ಕಾರ ತೆರೆ ಎಳೆದಿದ್ದು, ಸಂಪೂರ್ಣವಾಗಿ ಅಲ್ಲದಿದ್ದರೂ ಭಾಗಶಃ ನ್ಯಾಯ ಸಿಕ್ಕಿದೆ ಎಂದು ಹೇಳಿದರು. ಸರ್ಕಾರದ ನಿರ್ಧಾರವನ್ನು ಮಹಾಸಭಾ ಸ್ವಾಗತಿಸುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಿ.ಕೆ. ಶಿವಪ್ಪ, ನಾಗರಾಜು ಬಚ್ಚಹಳ್ಳಿ, ವೆಂಕಟೇಶ್, ಹನುಮಣ್ಣ, ಟಿ.ಡಿ. ಮುನಿಯಪ್ಪ, ಗಂಗರಾಜು ನಾರಸಿಂಹನಹಳ್ಳಿ, ಕೆ.ವಿ. ಮುನಿಯಪ್ಪ, ರಾಮ, ನರಸಪ್ಪ, ಮೈಲಾರಪ್ಪ, ಕೆ. ನಾರಾಯಣಪ್ಪ, ಹರ್ಷ, ಕಾಂತರಾಜ, ಮುನಿಯಪ್ಪ, ಗಂಗರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಕ್ಸಿಮ್ ಬ್ಯಾಂಕ್ ವಿರುದ್ಧದ ಸುಳ್ಳು ವರದಿಗಳ ತೆಗೆದು ಹಾಕಲು ಸೂಚನೆ

ಹೈದರಾಬಾದ್

ರವಿಪ್ರಕಾಶ್ ಮಾಲೀಕತ್ವದ ಆರ್‌ಟಿವಿ– ತೆಲುಗು ವಿರುದ್ಧ ತೀವ್ರ ಟೀಕೆ ವ್ಯಕ್ತಪಡಿಸಿ, ಯೂರೋ ಎಕ್ಸಿಂ ಬ್ಯಾಂಕ್ ವಿರುದ್ಧದ ಮಾನಹಾನಿಕರ ಪ್ರಸಾರಗಳನ್ನು ನಿಲ್ಲಿಸಲು ಇಲ್ಲಿನ ನ್ಯಾಯಾಲಯ ಆದೇಶಿಸಿದೆ.

ಹೈದರಾಬಾದ್ ಸಿಟಿ ಸಿವಿಲ್ ನ್ಯಾಯಾಲಯವು ರವಿ ಪ್ರಕಾಶ್ ಮತ್ತು ಅವರ ಮಾಧ್ಯಮ ಸಂಸ್ಥೆ ಆರ್‌ಟಿವಿ ತೆಲುಗುಗೆ ಯೂರೋ ಎಕ್ಸಿಂ ಬ್ಯಾಂಕ್ ವಿರುದ್ಧ ಮಾನಹಾನಿಕರ ಹಾಗೂ ಸುಳ್ಳು ಆರೋಪಗಳನ್ನು ಪ್ರಸಾರ ಮಾಡುವುದನ್ನು ಕೂಡಲೇ ನಿಲ್ಲಿಸುವಂತೆ ಆದೇಶಿಸಿದೆ.

ಆರ್‌ಟಿವಿ ತೆಲುಗು ಎಕ್ಸಿಮ್ ಬ್ಯಾಂಕ್ ವಿರುದ್ಧ ಮಾಡಿರುವ ಗಂಭೀರ ಆರೋಪಗಳನ್ನು ಸಮರ್ಥಿಸಲು ಯಾವುದೇ ನಂಬಲರ್ಹ ಅಥವಾ ಪರಿಶೀಲಿಸಬಹುದಾದ ಸಾಕ್ಷ್ಯವನ್ನು ನ್ಯಾಯಾಲಯದ ಮುಂದೆ ಸಲ್ಲಿಸಲು ವಿಫಲವಾಗಿದೆ ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಹೇಳಿದೆ.

ಈ ಆದೇಶದ ಭಾಗವಾಗಿ, ಆರ್‌ಟಿವಿ ತೆಲುಗು ತಕ್ಷಣದಿಂದಲೇ ಇಂತಹ ವಿಷಯಗಳನ್ನು ಪ್ರಸಾರ ಮಾಡುವುದು ಅಥವಾ ಹಂಚುವುದು ನಿಲ್ಲಿಸಬೇಕು ಹಾಗೂ ಈಗಾಗಲೇ ಪ್ರಸಾರಗೊಂಡಿರುವ ಮಾನಹಾನಿಕರ ವಿಡಿಯೋಗಳು ಮತ್ತು ಸಂಬಂಧಿತ ಪೋಸ್ಟ್‌ಗಳನ್ನು ತನ್ನ ಸಾಮಾಜಿಕ ಜಾಲತಾಣಗಳಿಂದ ತೆಗೆದುಹಾಕಬೇಕು ಎಂದು ಸೂಚಿಸಿದೆ.

ನ್ಯಾಯಾಲಯವು ಮುಂದುವರಿದು, ಸರಿಯಾದ ಸಾಕ್ಷ್ಯವಿಲ್ಲದೆ ಎಕ್ಸಿಮ್ ಬ್ಯಾಂಕ್ ವಿರುದ್ಧ ಅವಹೇಳನಕಾರಿ ಟಿಪ್ಪಣಿಗಳು, ತಪ್ಪು ಮಾರ್ಗದರ್ಶಕ ಶೀರ್ಷಿಕೆಗಳು ಅಥವಾ ಆರೋಪಗಳನ್ನು ಪ್ರಕಟಿಸುವುದನ್ನು ನಿಷೇಧಿಸಿದೆ. ವಾಸ್ತವಾಧಾರವಿಲ್ಲದ ನಿರ್ಲಕ್ಷ್ಯಪೂರ್ಣ ವರದಿ ಸಂಸ್ಥೆಯ ಪ್ರತಿಷ್ಠೆಗೆ ಹಾನಿ ಉಂಟುಮಾಡುತ್ತದೆ ಎಂದು ನ್ಯಾಯಾಲಯ ಒತ್ತಿ ಹೇಳಿದೆ.

# ‘ಕಾಂಗ್ರೆಸ್ ಮುಸ್ಲಿಮರಿಗೆ ಮಾತ್ರ ವಿಶೇಷ ಅನುದಾನ ನೀಡುತ್ತಿದೆ’

ಬೆಂಗಳೂರು

ಸರ್ವರಿಗೂ ಸಮಪಾಲು ಎಂದು ಹೇಳುವ ಕಾಂಗ್ರೆಸ್ ಮುಸ್ಲಿಮರಿಗೆ ಮಾತ್ರ ವಿಶೇಷ ಅನುದಾನ ನೀಡುತ್ತಿದೆ. ಇದರ ಜೊತೆಗೆ ದಲಿತರು ಹಾಗೂ ಹಿಂದುಳಿದ ವರ್ಗಕ್ಕೂ ನೀಡಬೇಕಿತ್ತು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಾವಣಗೆರೆಯಲ್ಲಿ ಮುಸ್ಲಿಮರು ತಿರುಗಿಬಿದ್ದು ಮುಖಂಡರ ವಿರುದ್ಧ ಕ್ರಮ ಕೈಗೊಂಡಿರುವುದರಿಂದ ಮತ ಬ್ಯಾಂಕ್ ರಾಜಕಾರಣ ಮಾಡಲಾಗಿದೆ. ಇದಕ್ಕೆ ಹಿಂದೂಗಳು ತಿರುಗುಬಾಣ ನೀಡಲಿದ್ದಾರೆ ಎಂದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಾಂಗ್ರೆಸ್‌ನ ಮೂರನೇ ಬಾಗಿಲಿಗೆ ಶಂಕುಸ್ಥಾಪನೆಯ ಪೂಜೆ ಮಾಡಿದ್ದಾರೆ. ಈ ಮೂಲಕ ಅವರು ಸಿಎಂ ಆಗುವ ಚರ್ಚೆ ಶುರುವಾಗಿದೆ. ಇದುವರೆಗೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆ ಎಂಬ ಅಭಿಪ್ರಾಯವಿತ್ತು. ಈಗ ಎಲ್ಲರೂ ಖರ್ಗೆ ಕಡೆಗೆ ತಿರುಗಿ ನೋಡುತ್ತಿದ್ದಾರೆ. ನಮಗೆ ಸಿಎಂ ಬದಲಾವಣೆಗಿಂತಲೂ ಸರ್ಕಾರ



ಬಿದ್ದುಹೋಗುವುದು ಸೂಕ್ತ ಎಂಬ ಅಭಿಪ್ರಾಯವಿದೆ. ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರ ಆಟ ನೋಡಿಯಾಗಿದೆ. ಅದೇ ರೀತಿ ಹೊಸ ಪಿಕ್ಚರ್ ಬಂದರೂ ನೋಡುತ್ತೇವೆ. ಖರ್ಗೆ ಸಿಎಂ ಆದರೂ ಬಳಿಕ ಜನರು ಗೇಟ್‌ಪಾಸ್ ನೀಡುವುದು ಖಚಿತ ಎಂದರು.

ಹೈಕಮಾಂಡ್ ತಿರಸ್ಕಾರ ಮಾಡಿದ ನಂತರ ಡಿ.ಕೆ.ಶಿವಕುಮಾರ್‌ಗೆ ಬೇರೆ ದಾರಿಯೇ ಇಲ್ಲ. ತಲೆಬಾಗಿ ಅಲ್ಲ, ಮಂಡಿಯೂರಿ ತೆವಳಿಕೊಂಡು ಮಲ್ಲಿಕಾರ್ಜುನ ಖರ್ಗೆ ಅವರ ಸೂಚನೆಯನ್ನು ಸ್ವೀಕಾರ ಮಾಡಬೇಕಾಗುತ್ತದೆ. ಮಲ್ಲಿಕಾರ್ಜುನ ಖರ್ಗೆ ಏನೇನು ಕಿಲಾಡಿ ಆಟ ಆಡುತ್ತಾರೋ ನೋಡೋಣ ಎಂದರು.

ಇರಾನ್ ಹಾಗೂ ಅಮೆರಿಕದ ನಡುವಿನ ಯುದ್ಧ ಇನ್ನೂ ಸ್ಥಗಿತಗೊಂಡಿಲ್ಲ. ಅಡುಗೆ ಅನಿಲ ಸೇರಿದಂತೆ ತೈಲ ಸಮಸ್ಯೆ ಎಲ್ಲ ದೇಶಗಳಿಗೆ ತಟ್ಟಿದೆ. ಸಹಜವಾಗಿ ಅಡುಗೆ ಅನಿಲದ ಬೆಲೆ ಏರಿಕೆಯಾಗಿದೆ. ಮುಂದಿನ ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಬೆಲೆಯನ್ನು ಇಳಿಕೆ ಮಾಡಲು ಕ್ರಮ ವಹಿಸಬಹುದು. ಯುದ್ಧ ನಿಂತ ಕೂಡಲೇ ಈ ಸಮಸ್ಯೆ ನಿವಾರಣೆಯಾಗುವ ವಿಶ್ವಾಸವಿದೆ ಎಂದರು.

# ನೈಋತ್ಯ ರೈಲ್ವೆಯಿಂದ ರೈಲುಗಳಿಗೆ ಹೆಚ್ಚುವರಿ ಬೋಗಿಗಳ ಸೇರ್ಪಡೆ

ಬೆಂಗಳೂರು

ಪ್ರಯಾಣಿಕರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪ್ರಮುಖ ರೈಲುಗಳಲ್ಲಿ ಶಾಶ್ವತವಾಗಿ ಹೆಚ್ಚುವರಿ ಬೋಗಿಗಳನ್ನು ಸೇರಿಸಲು ನಿರ್ಧರಿಸಿದೆ. ಪ್ರತಿ ರೈಲಿಗೂ ಒಂದು ಎಸಿ ಮೂರು ಹಂತದ ಬೋಗಿ, ಮೂರು ಸ್ಲೀಪರ್ ವರ್ಗದ ಬೋಗಿಗಳು ಹಾಗೂ ಒಂದು ಸಾಮಾನ್ಯ ದರ್ಜೆಯ ಬೋಗಿಯನ್ನು ಸೇರಿಸಲಾಗುತ್ತದೆ.

ಯಶವಂತಪುರ ವಿಜಯಪುರಯಶವಂತಪುರ ನಡುವೆ ಸಂಚರಿಸುವ ರೈಲು ಸಂಖ್ಯೆ 16547/16548 ದೈನಂದಿನ ಎಕ್ಸ್‌ಪ್ರೆಸ್ ರೈಲಿಗೆ ಐದು ಹೆಚ್ಚುವರಿ ಬೋಗಿಗಳನ್ನು ಸೇರಿಸಲಾಗುತ್ತಿದ್ದು, ಒಟ್ಟು ಬೋಗಿಗಳ ಸಂಖ್ಯೆ 13ರಿಂದ 18ಕ್ಕೆ ಏರಿಕೆಯಾಗಲಿದೆ. ಪರಿಷ್ಕೃತ ಸಂಯೋಜನೆಯಲ್ಲಿ 2 ಎಸಿ ಮೂರು ಹಂತದ ಬೋಗಿಗಳು, 7 ಸ್ಲೀಪರ್ ಬೋಗಿಗಳು, 7 ಸಾಮಾನ್ಯ ಎರಡನೇ ದರ್ಜೆ ಬೋಗಿಗಳು ಮತ್ತು 2 ಎಸ್‌ಎಲ್‌ಆರ್ ಬೋಗಿಗಳು ಇರಲಿವೆ. ಈ ಬದಲಾವಣೆ ಯಶವಂತಪುರದಿಂದ ಮೇ 8, 2026 ಮತ್ತು ವಿಜಯಪುರದಿಂದ ಮೇ 9, 2026ರಿಂದ ಜಾರಿಗೆ ಬರಲಿದೆ.

ಅದೇ ರೀತಿ, ಯಶವಂತಪುರ ಸಿಂಧನೂರು ಯಶವಂತಪುರ ನಡುವೆ ಸಂಚರಿಸುವ ರೈಲು ಸಂಖ್ಯೆ 16545/16546 ದೈನಂದಿನ ಎಕ್ಸ್‌ಪ್ರೆಸ್ ರೈಲಿನ ಬೋಗಿಗಳ ಸಂಖ್ಯೆಯೂ 13ರಿಂದ 18ಕ್ಕೆ ಹೆಚ್ಚಿಸಲಾಗುತ್ತಿದೆ. ಪರಿಷ್ಕೃತ ಸಂಯೋಜನೆಯಲ್ಲಿ 2 ಎಸಿ ಮೂರು ಹಂತದ ಬೋಗಿಗಳು, 7 ಸ್ಲೀಪರ್ ಬೋಗಿಗಳು, 7 ಸ್ಲೀಪರ್ ಬೋಗಿಗಳು, 7 ಸಾಮಾನ್ಯ ಎರಡನೇ ದರ್ಜೆ ಬೋಗಿಗಳು ಮತ್ತು 2 ಎಸ್‌ಎಲ್‌ಆರ್ ಬೋಗಿಗಳು ಇರಲಿವೆ. 7 ಸಾಮಾನ್ಯ ಎರಡನೇ ದರ್ಜೆ ಬೋಗಿಗಳು ಮತ್ತು 2 ಎಸ್‌ಎಲ್‌ಆರ್ ಬೋಗಿಗಳು ಇರಲಿವೆ. ಈ ವ್ಯವಸ್ಥೆ ಯಶವಂತಪುರದಿಂದ ಮೇ 10, 2026 ಮತ್ತು ಸಿಂಧನೂರಿನಿಂದ ಮೇ 11, 2026ರಿಂದ ಜಾರಿಗೆ ಬರಲಿದೆ.

ಇದೇ ವೇಳೆ, ಯಶವಂತಪುರ ಹಿಂದೂಪುರ ಯಶವಂತಪುರ ನಡುವೆ ಸಂಚರಿಸುವ ರೈಲು ಸಂಖ್ಯೆ 06517/06518 ಕಾಯ್ದಿರಿಸದ ವಿಶೇಷ ಎಕ್ಸ್‌ಪ್ರೆಸ್ ರೈಲಿನ ಬೋಗಿಗಳ ಸಂಖ್ಯೆಯೂ 13ರಿಂದ 18ಕ್ಕೆ ಹೆಚ್ಚಿಸಲಾಗಿದೆ. ಪರಿಷ್ಕೃತ ಸಂಯೋಜನೆಯಲ್ಲಿ 2 ಎಸಿ ಮೂರು ಹಂತದ ಬೋಗಿಗಳು (ಬೀಗ ಹಾಕಿದ), 7 ಸ್ಲೀಪರ್ ಬೋಗಿಗಳು, 7 ಸಾಮಾನ್ಯ ಎರಡನೇ ದರ್ಜೆ ಬೋಗಿಗಳು ಮತ್ತು 2 ಎಸ್‌ಎಲ್‌ಆರ್ ಬೋಗಿಗಳು ಇರಲಿವೆ. ಈ ಬದಲಾವಣೆ ಮೇ 10, 2026ರಿಂದ ಯಶವಂತಪುರ ಮತ್ತು ಹಿಂದೂಪುರ ಎರಡೂ ಕಡೆಗಳಿಂದ ಜಾರಿಗೆ ಬರಲಿದೆ.

ಈ ಕ್ರಮದಿಂದ ಪ್ರಯಾಣಿಕರಿಗೆ ಹೆಚ್ಚುವರಿ ಆಸನ ವ್ಯವಸ್ಥೆ ದೊರೆಯಲಿದ್ದು, ಸಂಚಾರದ ಅನುಕೂಲತೆ ಮತ್ತು ಆರಾಮ ಹೆಚ್ಚಾಗಲಿದೆ.

# ಶ್ರಮಿಕರ ಕಲ್ಯಾಣಕ್ಕಾಗಿ ಬಿಜೆಪಿಯಿಂದ ಹಲವು ಯೋಜನೆ ಅನುಷ್ಠಾನ

ಬೆಂಗಳೂರು

ದೇಶ ಅಭಿವೃದ್ಧಿಯ ಪಥದಲ್ಲಿ ಸಾಗಲು ಮಹತ್ವದ ಕೊಡುಗೆ ನೀಡುತ್ತಿರುವ ಶ್ರಮಿಕ ವರ್ಗದ ಕಲ್ಯಾಣಕ್ಕಾಗಿ ಕೇಂದ್ರದ ಬಿಜೆಪಿ ಸರ್ಕಾರ ಹಲವು ಯೋಜನೆಗಳನ್ನು ಜಾರಿ ಮಾಡಿದೆ. ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿ ಇದ್ದಾಗಲೂ ಕಾರ್ಮಿಕರ ಅನುಕೂಲಕ್ಕಾಗಿ ಸಾಕಷ್ಟು ನೆರವು ನೀಡಲಾಗಿತ್ತು ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ. ವಿಜಯೇಂದ್ರ ಹೇಳಿದರು.

ವಿಶ್ವ ಕಾರ್ಮಿಕರ ದಿನಾಚರಣೆ ಅಂಗವಾಗಿ ಬಿಜೆಪಿ ರಾಜ್ಯ ಕಾರ್ಯಾಲಯ ‘ಜಗನ್ನಾಥ ಭವನ’ದಲ್ಲಿ ಬಿಜೆಪಿ ಅಸಂಘಟಿತ ಕಾರ್ಮಿಕರ ಪ್ರಕೋಷ್ಠದ ವತಿಯಿಂದ ಹಮ್ಮಿಕೊಂಡಿದ್ದ ‘ಶ್ರಮಿಕ ದಿವಸ್’ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶ ಹಾಗೂ ಸಮಾಜಕ್ಕೆ ಶ್ರಮಿಕವರ್ಗ ನೀಡುತ್ತಿರುವ ಕೊಡುಗೆಯನ್ನು ಎಂದಿಗೂ ಮರೆಯಲಾಗದು. 2047 ನೇ ಇಸವಿಗೆ ಭಾರತ ಅಭಿವೃದ್ಧಿಶೀಲ ರಾಷ್ಟ್ರವಾಗಿ ಪರಿವರ್ತನೆ ಮಾಡಲು ಶ್ರಮಿಕದ ಪಾತ್ರ ದೊಡ್ಡದು. ಕಾರ್ಮಿಕರು ಇಲ್ಲದೇ ದೇಶ ನಿರ್ಮಾಣವನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ. ನರೇಂದ್ರ ಮೋದಿ ಅವರು 2014 ರಲ್ಲಿ ಅಧಿಕಾರಕ್ಕೆ ಬಂದ ನಂತರ ಕಾರ್ಮಿಕ ವರ್ಗಕ್ಕೆ ಅನುಕೂಲ ಮಾಡಿಕೊಡುವ



ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ಅನುಷಾನಕ್ಕೆ ತಂದರು. ಇ– ಶ್ರಮ್ ಪೋರ್ಟಲ್ ಅನ್ನು ಆರಂಭಿಸಿ ಅಸಂಘಟಿತ ಕಾರ್ಮಿಕರ ಅಂಕಿ ಅಂಶ ಪಡೆದು ಅವರಿಗೆ ಪಿಂಚಣಿ, ಆರೋಗ್ಯ ಸೇರಿದಂತೆ ಹಲವು ರೀತಿಯ ಸಹಾಯ ಮಾಡಿದರು ಎಂದು ವಿವರಿಸಿದರು.

ಇಡೀ ವಿಶ್ವವನ್ನೇ ನಲುಗಿಸಿದ ಕೋವಿಡ್ ವೇಳೆ ಕಾರ್ಮಿಕರು ಯಾವ ರೀತಿ ತೊಂದರೆಗೆ ಸಿಲುಕಿದ್ದರು ಎಂಬುದನ್ನು ನೋಡಿದ್ದೇವೆ. ಅಂದು ದೇಶದಾದ್ಯಂತ ಪ್ರಧಾನಿ ಮೋದಿ ಅವರು ಶ್ರಮಿಕರಿಗೆ ಎಲ್ಲಾ ರೀತಿಯ ಅನುಕೂಲಗಳನ್ನು ಮಾಡಿದರು. ರಾಜ್ಯದಲ್ಲಿ ಆಗ ಮುಖ್ಯಮಂತ್ರಿಗಳಾಗಿದ್ದ ಬಿ.ಎಸ್. ಯಡಿಯೂರಪ್ಪ ಅವರ ಸರ್ಕಾರ ಸಹ ಕಾರ್ಮಿಕರ ನೆರವಿಗೆ ನಿಂತಿತ್ತು ಎಂದು ನೆನಪಿಸಿದರು.

ಕೋವಿಡ್ ವೇಳೆ ದೇಶದ ಮೂಲೆಮೂಲೆಗಳಿಂದ ರಾಜ್ಯಕ್ಕೆ ಕೆಲಸಕ್ಕಾಗಿ ಬಂದಿದ್ದ ಕಾರ್ಮಿಕರು ಸಾಕಷ್ಟು ತೊಂದರೆಗೆ ಸಿಲುಕಿದ್ದರು. ತುತ್ತು ಅನ್ನವೂ ಸಿಗದೆ ಬೀದಿಗೆ ಬಿದ್ದಂತೆ ಆಗಿದ್ದರು. ಆಗ ಬಿ ಎಸ್ ಯಡಿಯೂರಪ್ಪ ಅವರು ಇಂತಹ ಕಾರ್ಮಿಕರಿಗೆ ಪ್ಯಾಕೇಜ್ ಘೋಷಣೆ ಮಾಡಿದರು. ರಾತ್ರೋ ರಾತ್ರಿ ಲಾಕ್‌ಡೌನ್ ಆಗಿದ್ದಾಗ ಎಲ್ಲಿಗೆ ಹೋಗಬೇಕು ಎಂದು ದಿಕ್ಕೆಟ್ಟ ಕಾರ್ಮಿಕರಿಗೆ ಸರ್ಕಾರ ಅನುಕೂಲ ಮಾಡಿಕೊಟ್ಟಿತ್ತು. ಕ್ಲಿಷ್ಟಕರ ಸಂದರ್ಭದಲ್ಲೂ ಶ್ರಮಿಕ ವರ್ಗವನ್ನು ಮೋದಿ ಹಾಗೂ ಬಿ.ಎಸ್ ಯಡಿಯೂರಪ್ಪ ಅವರು ನಿರ್ಲಕ್ಷಿಸಲಿಲ್ಲ. ಕಾರ್ಮಿಕರ ಜೊತೆ ನಿಂತು ಧೈರ್ಯ ಹೇಳಿದರು ಎಂದರು.

ಇತ್ತೀಚೆಗೆ ಕೇಂದ್ರ ಸರ್ಕಾರವು 29 ಹಳೆಯ ಕಾರ್ಮಿಕ ಕಾನೂನುಗಳನ್ನು ಸರಳೀಕರಿಸಿ 4 ಹೊಸ ಕಾರ್ಮಿಕ ಸಂಹಿತೆಗಳನ್ನು ರೂಪಿಸಿತು. ಇದರಿಂದ ಕಾರ್ಮಿಕರಿಗೆ ಸಾಕಷ್ಟು ಅನುಕೂಲವಾಗಿದೆ. ಎನ್‌ಡಿಎ ಸರ್ಕಾರದ ಈ ನಿರ್ಧಾರ ಮಹತ್ವದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರಿ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಮಾಜಿ ಶಾಸಕ ಎಂ.ಡಿ.ಲಕ್ಷ್ಮಿನಾರಾಯಣ್, ದಕ್ಷಿಣ ಜಿಲ್ಲಾ ಉಪಾಧ್ಯಕ್ಷ ಅರುಣ್ ಸೋಮಣ್ಣ, ಕಾರ್ಮಿಕ ಪ್ರಕೋಷ್ಠದ ಸಂಚಾಲಕರು, ಪದಾಧಿಕಾರಿಗಳು ಮತ್ತು ಪ್ರಮುಖರು ಉಪಸ್ಥಿತರಿದ್ದರು..

# ತಿರುಚ್ಚಿರಾಪಳ್ಳಿ–ಬೆಂಗಳೂರು ನಡುವೆ ಬೇಸಿಗೆ ವಿಶೇಷ ರೈಲು ಸಂಚಾರ

ಬೆಂಗಳೂರು

ಬೇಸಿಗೆ ಸಮಯದಲ್ಲಿ ಪ್ರಯಾಣಿಕರ ದಟ್ಟಣೆ ನಿವಾರಿಸುವ ಉದ್ದೇಶದಿಂದ ಖಠಣಾಣುಜಡಿಟಿ ಖಚುಟತಿಚಿಥಿ ವತಿಯಿಂದ ತಿರುಚ್ಚಿರಾಪಳ್ಳಿ ಹಾಗೂ ಎಸ್‌ಎಂವಿಟಿ ಬೆಂಗಳೂರು ನಡುವೆ ವಿಶೇಷ ರೈಲುಗಳನ್ನು ಓಡಿಸಲಾಗುತ್ತಿದೆ.

ಈ ಬೇಸಿಗೆ ವಿಶೇಷ ರೈಲು ಸೇವೆ 05.05.2026, 12.05.2026, 19.05.2026 ಮತ್ತು 26.05.2026 ರಂದು, ಪ್ರತಿ ಮಂಗಳವಾರ, ಎರಡೂ ದಿಕ್ಕುಗಳಲ್ಲಿ ಒಟ್ಟು ನಾಲ್ಕು ಪ್ರಯಾಣಗಳನ್ನು ನಡೆಸಲಿದೆ.

ರೈಲು ಸಂಖ್ಯೆ 06007 ತಿರುಚ್ಚಿರಾಪಳ್ಳಿ ಎಸ್‌ಎಂವಿಟಿ ಬೆಂಗಳೂರು ವಿಶೇಷ ರೈಲು ತಿರುಚ್ಚಿರಾಪಳ್ಳಿಯಿಂದ ಬೆಳಿಗ್ಗೆ 06:15ಕ್ಕೆ ಹೊರಟು, ಮಧ್ಯಾಹ್ನ 13:45ಕ್ಕೆ ಬೆಂಗಳೂರಿಗೆ ತಲುಪಲಿದೆ.

ಮರು ಪ್ರಯಾಣದಲ್ಲಿ ರೈಲು ಸಂಖ್ಯೆ 06008 ಎಸ್‌ಎಂವಿಟಿ ಬೆಂಗಳೂರು ತಿರುಚ್ಚಿರಾಪಳ್ಳಿ ವಿಶೇಷ ರೈಲು ಮಧ್ಯಾಹ್ನ 15:00ಕ್ಕೆ ಬೆಂಗಳೂರಿನಿಂದ ಹೊರಟು, ರಾತ್ರಿ 22:30ಕ್ಕೆ ತಿರುಚ್ಚಿರಾಪಳ್ಳಿಗೆ ತಲುಪಲಿದೆ.

ಈ ರೈಲು ತನ್ನ ಪ್ರಯಾಣದ ವೇಳೆ ಕರೂರ್, ನಾಮಕ್ಕಲ್, ಸೇಲಂ, ಬಂಗಾರಪೇಟೆ ಹಾಗೂ ಕೃಷ್ಣರಾಜಪುರಂ ನಿಲ್ದಾಣಗಳಲ್ಲಿ ನಿಲುಗಡೆಗಳನ್ನು ಹೊಂದಿರುತ್ತದೆ. ಈ ವಿಶೇಷ ರೈಲು ಒಟ್ಟು 18 ಎಲ್‌ಎಚ್‌ಬಿ ಬೋಗಿಗಳನ್ನು ಒಳಗೊಂಡಿರುತ್ತದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

# ರೈತರಿಗೆ ಗುಣಮಟ್ಟದ ಸಸಿ ನೀಡಲು, ಒತ್ತುವರಿ ತೆರವು ಮಾಡಲು ಖಂಡ್ರೆ ಆದೇಶ

ಮದ್ದೂರು

ಜಾಗತಿಕ ತಾಪಮಾನ ಏರಿಕೆಗೆ ವೃಕ್ಷ ಸಂವರ್ಧನೆ, ಸಂರಕ್ಷಣೆಯೇ ಮಾರ್ಗವಾಗಿದ್ದು, ಹಸಿರು ಹೊದಿಕೆ ಹೆಚ್ಚಿಸುವಂತೆ ಮತ್ತು ಮಂಡ್ಯ ನಗರದ ರಸ್ತೆ ಬದಿಯ ಮರಗಳ ಸಮೀಕ್ಷೆ ನಡೆಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತ ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರ.

ಮಂಡ್ಯ ಜಿಲ್ಲೆ ಮದ್ದೂರಿನಲ್ಲಿಂದು ಜಿಲ್ಲಾ ಅರಣ್ಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮಂಡ್ಯದ 7 ವಲಯಗಳಲ್ಲಿರುವ ನರ್ಸರಿಗಳಲ್ಲಿ ತೇಗ, ಶ್ರೀಗಂಧ, ಹೊನ್ನೆ ಇತ್ಯಾದಿ ಗುಣಮಟ್ಟದ ಸಸಿಗಳನ್ನು ಬೆಳೆಸಿ ರೈತರಿಗೆ ವಿತರಿಸುವಂತೆ ಮತ್ತು ವಿತರಿಸಿದ ಸಸಿಗಳ ಪೈಕಿ ಎಷ್ಟು ಬದುಕುಳಿದಿವೆ ಎಂಬ ಬಗ್ಗೆ ಸಮೀಕ್ಷೆ ನಡೆಸುವಂತೆಯೂ ತಿಳಿಸಿದರು.

ಜಿಲ್ಲೆಯ ಹಲವೆಡೆ ಚಿರತೆಗಳ ಸಮಸ್ಯೆಯ ಪರಿಹಾರಕ್ಕೆ ತತ್ ಕ್ಷಣವೇ ಕ್ರಮ ವಹಿಸುವಂತೆ



ತಿಳಿಸಿದ ಅವರು, ಕಾಡಿನಂಚಿನ ಗ್ರಾಮದ ಜನರೊಂದಿಗೆ ಸೌಹಾರ್ದ ಸಂಬಂಧ ಬೆಳೆಸಿಕೊಂಡರೆ, ಕಾಡ್ಗಿಚ್ಚು, ಕಳ್ಳಬೇಟೆ, ಅಕ್ರಮ ಮರ ಕಡಿತಲೆಯಂತಹ ಅಪರಾಧಗಳ ಬಗ್ಗೆ ತಕ್ಷಣದ ಮಾಹಿತಿ ಲಭಿಸುತ್ತದೆ, ವನ ಮತ್ತು ವನ್ಯಜೀವಿ ಸಂರಕ್ಷಣೆಯನ್ನು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ ಎಂದರು.

ಅರಣ್ಯ, ಕಾಡಿನಂಚಿನಲ್ಲಿರುವ ಪಟ್ಟಾ ಜಮೀನು, ಸರ್ಕಾರಿ ಜಾಗದಲ್ಲಿ ಬೆಳೆದಿರುವ ಶ್ರೀಗಂಧ, ರಕ್ತ ಚಂದನ, ಬೀಟೆ ಮತ್ತು ತೇಗದ ಮರಗಳ ಜಿಯೋ ಟ್ಯಾಗ್ ಮಾಡುವ ಮೂಲಕ ಯಾವುದೇ ಬೆಲೆ ಬಾಳುವ ವೃಕ್ಷ ಕಳುವಾಗದಂತೆ ಸಂರಕ್ಷಿಸಲು ಅರಣ್ಯ ಸಚಿವರು ಸೂಚನೆ ನೀಡಿದರು.

**ಮಂಡ್ಯದಲ್ಲಿ ಮರ ಸಮೀಕ್ಷೆಗೆ ಆದೇಶ:**

ಮಂಡ್ಯ ನಗರದಲ್ಲಿ ಮನೆಯ ಮುಂದೆ, ರಸ್ತೆಯ ಬದಿಯಲ್ಲಿ ಬೆಳೆದ ಮರಗಳನ್ನು ಅಕ್ರಮವಾಗಿ ಕಡಿಯಲಾಗುತ್ತಿದೆ ಎಂಬ ಆರೋಪಗಳಿದ್ದು, ಮರಗಳ ಗಣತಿ ನಡೆಸಲು ಮತ್ತು ಅಕ್ರಮವಾಗಿ ಮರ ಕಡಿತಲೆ ಆಗದಂತೆ ಕ್ರಮ ವಹಿಸಲು ಸೂಚಿಸಿದರು.

ಜಿಲ್ಲೆಯಲ್ಲಿ ಕರ್ನಾಟಕ ಅರಣ್ಯ ಕಾಯಿದೆ ಅಡಿ ಸೆಕ್ಷನ್ 4ರ ಪ್ರಾಥಮಿಕ ಅಧಿಸೂಚನೆ ಆಗಿ ವರ್ಷಗಳೇ ಕಳೆದಿದ್ದರೂ ಸೆಕ್ಷನ್ 17 ಅಡಿಯಲ್ಲಿ ಅರಣ್ಯ ಎಂದು ಘೋಷಣೆ ಆಗಿಲ್ಲ. ಎಲ್ಲೆಲ್ಲಿ ಅರಣ್ಯ ವ್ಯವಸ್ಥಾಪನಾಧಿಕಾರಿ (ಎಫ್.ಎಸ್.ಓ.) ಇಲ್ಲವೋ ಅಲ್ಲಿಗೆ ಪ್ರಸ್ತಾವನೆ ಸಲ್ಲಿಸಿದರೆ ಅಧಿಕಾರಿಗಳನ್ನು ನೇಮಕ ಮಾಡುವುದಾಗಿ ತಿಳಿಸಿದರು.

ಅದೇ ರೀತಿ ಜಿಲ್ಲೆಯಲ್ಲಿ 2 ಸಾವಿರಕ್ಕೂ ಹೆಚ್ಚು ಎಕರೆ ಅರಣ್ಯ ಭೂಮಿ ಒತ್ತುವರಿಯಾಗಿದ್ದು, ಪಟ್ಟಾ ಜಮೀನೂ ಸೇರಿ 3 ಎಕರೆಗಿಂತ ಕಡಿಮೆ ಒತ್ತುವರಿ ಹೊರತು ಪಡಿಸಿ, ಉಳಿದ ಎಲ್ಲ ಒತ್ತುವರಿ ಹಾಗೂ 2015ರ ನಂತರದ ಅರಣ್ಯ ಒತ್ತುವರಿ ತೆರವುಗೊಳಿಸಲು ಆದೇಶ ನೀಡಿದರು. ಆನೆ–ಮಾನವ ಸಂಘರ್ಷ ನಿಯಂತ್ರಿಸಲು ಈ ತಿಂಗಳಲ್ಲೇ ರೈಲ್ವೆ ಬ್ಯಾರಿಕೇಡ್ ಮತ್ತು ಆನೆ ಕಂದಕ ಹಾಗೂ ಸೌರಬೇಲಿ ಕುರಿತಂತೆ ಸಭೆ ನಡೆಸುವುದಾಗಿಯೂ ಈಶ್ವರ ಖಂಡ್ರೆ ತಿಳಿಸಿದರು.

ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ರಘು, ಪ್ರಭುಗೌಡ ಪಾಟೀಲ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ಗುಪ್ತಚರ ಮುಖ್ಯಸ್ಥರ ಬದಲಾವಣೆ

ಬೆಂಗಳೂರು

ಕರ್ನಾಟಕ ಕಾಂಗ್ರೆಸ್ ಸರ್ಕಾರದಲ್ಲಿ ನಾಯಕತ್ವದ ಗೊಂದಲದ ನಡುವೆ ರಾಜ್ಯ ಗುಪ್ತಚರ ಮುಖ್ಯಸ್ಥರ ಬದಲಾವಣೆ ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇನ್ನೂ ಅಧಿಕಾರ ತಮ್ಮ ಕೈಯಲ್ಲೇ ಇದೆ ಎಂಬ ಬಲವಾದ ಸಂದೇಶ ನೀಡಲು ಈ ಕ್ರಮ ಕೈಗೊಂಡಿದ್ದಾರೆಂಬ ಮಾತುಗಳು ಕೇಳಿಬರುತ್ತಿದೆ.

ಎಡಿಜಿಪಿ ರವಿ ಎಸ್ ಬದಲಿಗೆ ಕೇಂದ್ರ ವಲಯ ಐಜಿಪಿ ಲಾಭು ರಾಮ್ ಅವರನ್ನು ಗುಪ್ತಚರ ವಿಭಾಗದ ಐಜಿಪಿಯಾಗಿ ನೇಮಿಸಲಾಗಿದೆ.

ಇತ್ತೀಚಿನ ದಿನಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ರಾಜಕೀಯ ಮಾಹಿತಿಯ ಸಂಗ್ರಹಣದಲ್ಲಿ ‘ಇಂಟೆಲಿಜೆನ್ಸ್ ವೈಫಲ್ಯ’ ಕಂಡುಬಂದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಅಸಮಾಧಾನಗೊಂಡಿದ್ದರು ಎಂದು ಮೂಲಗಳು ತಿಳಿಸಿವೆ. ಫೆಬ್ರವರಿಯಲ್ಲಿ ಧಾರವಾಡದಲ್ಲಿ ನಡೆದ ಪ್ರತಿಭಟನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಬ್ಯಾನರ್‌ಗಳು, ಪೋಸ್ಟರ್‌ಗಳನ್ನು ಸುಟ್ಟ ಘಟನೆ ಸರ್ಕಾರದ ವರ್ಚಸ್ಸಿಗೆ ಧಕ್ಕೆ ತಂದಿದ್ದು ಈ ಘಟನೆ ಬಗ್ಗೆ ಮುಂಚಿತವಾಗಿ ಸೂಕ್ತ ಮಾಹಿತಿ ಲಭ್ಯವಾಗದಿರುವುದು ಗುಪ್ತಚರ ಇಲಾಖೆಯ ಕಾರ್ಯಕ್ಷಮತೆ ಬಗ್ಗೆ ಪ್ರಶ್ನೆಗಳನ್ನು ಎಬ್ಬಿಸಿದೆ.

ಇದಕ್ಕೂ ಹೊರತಾಗಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಬಣದ ಚಟುವಟಿಕೆಗಳ ಬಗ್ಗೆ ಸಮರ್ಪಕ ಮಾಹಿತಿ ಸಿಗದಿರುವುದೂ ಮುಖ್ಯಮಂತ್ರಿಗಳ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ತಿಳಿದುಬಂದಿದೆ.

ಅವರ ಬೆಂಬಲಿಗರು ದೆಹಲಿಗೆ ತೆರಳಿ ಹೈಕಮಾಂಡ್ ನಾಯಕರನ್ನು ಭೇಟಿಯಾದ ವಿಚಾರಗಳು ಕೂಡ ಮುಂಚಿತವಾಗಿ ತಿಳಿದಿರಲಿಲ್ಲ ಎಂದು ಹೇಳಲಾಗುತ್ತಿದೆ.

ಮುಡಾ ಹಗರಣವೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ದೊಡ್ಡ ಹಿನ್ನಡೆಯಾಗಿ ಪರಿಣಮಿಸಿತ್ತು. ಪಕ್ಷದ ಒಳಗಾಗಲಿ ಹೊರಗಾಗಲಿ ನಡೆಯುತ್ತಿರುವ ರಾಜಕೀಯ ಚಟುವಟಿಕೆಗಳನ್ನು ಗಮನದಲ್ಲಿಟ್ಟುಕೊಳ್ಳಲು ಗುಪ್ತಚರ ಇಲಾಖೆ ವಿಫಲವಾಗಿದೆ ಎಂಬ ಆರೋಪವೂ ಕೇಳಿ ಬಂದಿತ್ತು.

# ವಿವಿಧ ಕಾಮಗಾರಿಗಳಿಗೆ ಚಾಲನೆ

**ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ರಾಗಿ ಗುಡ್ಡ ಜಂಕ್ಷನ್‌ವರೆಗೆ ನಿರ್ಮಿತ ರೈಲು-ಸಹ ರಸ್ತೆ ಮೇಲ್ಸೇತುವೆಗೆ ಪ್ರಾಯೋಗಿಕ ಸಂಚಾರಕ್ಕೆ ಹೆಚ್.ಎಸ್.ಆರ್ ಲೇಔಟ್ ರ್ಯಾಂಪ್ ಪ್ರವೇಶ ದ್ವಾರದಲ್ಲಿ ಹಸಿರು ನಿಶಾನೆ ತೋರಿಸಲಾಯಿತು. ಬನಶಂಕರಿ ಜಂಕ್ಷನ್‌ನಲ್ಲಿ ಸ್ಕೈವಾಕ್ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.**

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಹಾಗೂ ಬೆಂಗಳೂರು ಮೆಟ್ರೋ ನಿಗಮದ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಕಾರ್ಯಕ್ರಮವನ್ನು ಉಪ ಮುಖ್ಯಮಂತ್ರಿಗಳು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ರಾಗಿ ಗುಡ್ಡ ಜಂಕ್ಷನ್‌ವರೆಗೆ ನಿರ್ಮಿತ ರೈಲು–ಸಹ ರಸ್ತೆ ಮೇಲ್ಸೇತುವೆಗೆ ಪ್ರಾಯೋಗಿಕ ಸಂಚಾರಕ್ಕೆ ಹೆಚ್.ಎಸ್.ಆರ್ ಲೇಔಟ್ ರ್ಯಾಂಪ್ ಪ್ರವೇಶ ದ್ವಾರದಲ್ಲಿ ಹಸಿರು ನಿಶಾನೆ ತೋರಿಸಲಾಯಿತು. ಬನಶಂಕರಿ ಜಂಕ್ಷನ್‌ನಲ್ಲಿ ಸ್ಕೈವಾಕ್ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ಜೊತೆಗೆ ಚಿಕ್ಕಪೇಟೆ ಕ್ಷೇತ್ರದ ಗಾಂಧಿಬಜಾರ್‌ನಲ್ಲಿ ವಾಣಿಜ್ಯ ಸಂಕೀರ್ಣ ಹಾಗೂ ಬಹುಮಹಡಿ ವಾಹನ ನಿಲುಗಡೆ ಕಟ್ಟಡವನ್ನು ಲೋಕಾರ್ಪಣೆ ಮಾಡಲಾಗಿದ್ದು, ಚಾಮರಾಜಪೇಟೆ ಕ್ಷೇತ್ರದ ಕೆ.ಆರ್ ಮಾರುಕಟ್ಟೆ ಕಟ್ಟಡದ ನೆಲ ಮಹಡಿಯಲ್ಲಿ ನಿರ್ಮಿತ ವಾಹನ ನಿಲುಗಡೆ ಸಂಕೀರ್ಣದ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಚಾಲನೆ ನೀಡಲಾಯಿತು. ಎಂ.ಜಿ. ರಸ್ತೆ ಮೆಟ್ರೋ ನಿಲ್ದಾಣದ ಬಳಿ ಮಾರ್ಗದ



ಕಂಬಗಳಿಗೆ ಅಳವಡಿಸಲಾದ ಡೈನಾಮಿಕ್ ಲೈಟಿಂಗ್ ವ್ಯವಸ್ಥೆಯನ್ನೂ ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ ಮತ್ತು ಬಿ.ಝಡ್. ಜಮೀರ್ ಅಹ್ಮದ್ ಖಾನ್, ವಿರೋಧ ಪಕ್ಷದ ನಾಯಕ ಆರ್. ಅಶೋಕ, ಲೋಕಸಭಾ ಸದಸ್ಯ ತೇಜಸ್ವಿ ಸೂರ್ಯ ಸೇರಿದಂತೆ ಹಲವಾರು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ನಗರದ ಸಂಚಾರ ದಟ್ಟಣೆ ಕಡಿಮೆ ಮಾಡುವುದು, ಮೂಲಸೌಕರ್ಯವನ್ನು ಸುಧಾರಿಸುವುದು ಮತ್ತು ನಾಗರಿಕರಿಗೆ ಉತ್ತಮ ಸೌಲಭ್ಯ ಒದಗಿಸುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿರುವ ಈ ಯೋಜನೆಗಳು ಬೆಂಗಳೂರಿನ ಅಭಿವೃದ್ಧಿಗೆ ಹೊಸ ವೇಗ ನೀಡಲಿವೆ.

# ಅಮೆರಿಕಾದಿಂದ ಇಸ್ರೇಲ್‌ಗೆ ಭಾರೀ ಶಸ್ತ್ರಾಸ್ತ್ರ

ಟೆಲ್ ಅವಿವ್

ಇರಾನ್ ಜೊತೆಗಿನ ಉದ್ವಿಗ್ನತೆಯ ಬೆನ್ನಲ್ಲೇ ಅಮೆರಿಕವು ಇಸ್ರೇಲ್‌ಗೆ ಕೇವಲ 24 ಗಂಟೆಗಳಲ್ಲಿ 6,500 ಟನ್ ಯುದ್ಧಸಾಮಗ್ರಿ ಮತ್ತು ಮಿಲಿಟರಿ ಉಪಕರಣಗಳನ್ನು ಪೂರೈಸಿದೆ.

ಇಸ್ರೇಲ್ ರಕ್ಷಣಾ ಸಚಿವಾಲಯವು ಏ.30 ರಂದು ಈ ಮಾಹಿತಿಯನ್ನು ನೀಡಿದ್ದು, ಇದು ಇರಾನ್ ಮೇಲಿನ ದಾಳಿಯನ್ನು ಪುನರಾರಂಭಿಸುವ ಸಿದ್ಧತೆಯ ಭಾಗವೆಂದು ವಿಶ್ಲೇಷಿಸಲಾಗುತ್ತಿದೆ.

ಕಳೆದ 24 ಗಂಟೆಗಳಲ್ಲಿ ಎರಡು ಸರಕು ಹಡಗುಗಳು ಮತ್ತು ಹಲವಾರು ಕಾರ್ಗೋ ವಿಮಾನಗಳ ಮೂಲಕ ಸಾವಿರಾರು ವಾಯು ಮತ್ತು ಭೂ ಯುದ್ಧಸಾಮಗ್ರಿಗಳು, ಮಿಲಿಟರಿ ಟ್ರಕ್‌ಗಳು ಮತ್ತು ಜಂಟಿ ಲಘು ಯುದ್ಧ ವಾಹನಗಳನ್ನು ಇಸ್ರೇಲ್ ಸ್ವೀಕರಿಸಿದೆ. ಈ ಸಾಮಗ್ರಿಗಳನ್ನು ಹೈಫಾ ಮತ್ತು ಅಶ್ಡೋಡ್ ಬಂದರುಗಳಲ್ಲಿ ಇಳಿಸಿ ತಕ್ಷಣವೇ ವಿವಿಧ ಮಿಲಿಟರಿ ನೆಲೆಗಳಿಗೆ ಸಾಗಿಸಲಾಗಿದೆ.

ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಅವರು, ಯಾವುದೇ ಸಮಯದಲ್ಲಿ ಮತ್ತು ಎಲ್ಲಿ ಬೇಕಾದರೂ ಶತ್ರುಗಳ ವಿರುದ್ಧ ಪೂರ್ಣ ಬಲದಿಂದ ಕಾರ್ಯಾಚರಣೆ ನಡೆಸಲು ಸಿದ್ಧರಾಗಿರಲು ಈ ಪೂರೈಕೆ ಅತ್ಯಗತ್ಯ ಎಂದು ಹೇಳಿದ್ದಾರೆ.

ಇರಾನ್ ವಿರುದ್ಧ ಫೆಬ್ರವರಿ 28 ರಿಂದ ಆಪರೇಷನ್ ರೋರಿಂಗ್ ಲಯನ್ ಹೆಸರಿನಲ್ಲಿ ಇಸ್ರೇಲ್ ಕಾರ್ಯಾಚರಣೆ ನಡೆಸುತ್ತಿದೆ.

> ಇರಾನ್‌ನ ಪರಮಾಣು ಮಹತ್ವಾಕಾಂಕ್ಷೆಗಳನ್ನು ತಡೆಯಲು ಮತ್ತು ಅದರ ಕ್ಷಿಪಣಿ ದಾಳಿಗಳಿಗೆ ಪ್ರತಿಕ್ರಿಯಿಸಲು ಅಮೆರಿಕವು ಇಸ್ರೇಲ್‌ಗೆ ನಿರಂತರವಾಗಿ ಬೆಂಬಲ ನೀಡುತ್ತಿದ್ದು, ಈ ಹೊಸ ಪೂರೈಕೆಯು ಯುದ್ಧದ ತೀವ್ರತೆಯನ್ನು ಹೆಚ್ಚಿಸುವ ಮುನ್ಸೂಚನೆ ನೀಡಿದೆ.

ಇರಾನ್ ವಿರುದ್ಧ ಯುದ್ಧ ಆರಂಭವಾದಾಗಿನಿಂದ ಇಲ್ಲಿಯವರೆಗೆ ಇಸ್ರೇಲ್ ಒಟ್ಟು 1,15,600 ಟನ್‌ಗಳಿಗಿಂತ ಹೆಚ್ಚು ಮಿಲಿಟರಿ ಉಪಕರಣಗಳನ್ನು ಅಮೆರಿಕದಿಂದ ಪಡೆದುಕೊಂಡಿದೆ. ಇರಾನ್‌ನ ಪರಮಾಣು ಮಹತ್ವಾಕಾಂಕ್ಷೆಗಳನ್ನು ತಡೆಯಲು ಮತ್ತು ಅದರ ಕ್ಷಿಪಣಿ ದಾಳಿಗಳಿಗೆ ಪ್ರತಿಕ್ರಿಯಿಸಲು ಅಮೆರಿಕವು ಇಸ್ರೇಲ್‌ಗೆ ನಿರಂತರವಾಗಿ ಬೆಂಬಲ ನೀಡುತ್ತಿದ್ದು, ಈ ಹೊಸ ಪೂರೈಕೆಯು ಯುದ್ಧದ ತೀವ್ರತೆಯನ್ನು ಹೆಚ್ಚಿಸುವ ಮುನ್ಸೂಚನೆ ನೀಡಿದೆ. ಅಮೆರಿಕ ಮತ್ತು ಇರಾನ್ ನಡುವಿನ ಕದನ ವಿರಾಮವು ಕೇವಲ ತಾಂತ್ರಿಕ ಮಟ್ಟದಲ್ಲಿದ್ದು, ಇಸ್ರೇಲ್ ಯಾವುದೇ ಕ್ಷಣದಲ್ಲಿ ದಾಳಿಯನ್ನು ಪುನರಾರಂಭಿಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

# ನಾಳೆ ದೊಡ್ಡಬಳ್ಳಾಪುರದಲ್ಲಿ 100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆ ಉದ್ಘಾಟನೆ

ಬೆಂಗಳೂರು

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವರಾದ ಡಾ.ಮನ್ಸುಖ್ ಮಾಂಡವೀಯಾ ಅವರು ಮೇ.3, 2026ರಂದು ದೊಡ್ಡಬಳ್ಳಾಪು ರದಲ್ಲಿ ನೂತನವಾಗಿ ನಿರ್ಮಿಸಲಾದ 100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆಗೆ ಉದ್ಘಾಟನೆ ನೆರವೇರಿಸಲಿದ್ದಾರೆ.

ಇದೇ ವೇಳೆ ಬಳ್ಳಾರಿಯಲ್ಲಿ ನಿರ್ಮಾಣಗೊಳ್ಳಲಿರುವ 100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆಗೆ ದೂರಸಂಪರ್ಕದ ಮೂಲಕ ಶಂಕುಸ್ಥಾಪನೆ ಮಾಡಲಿದ್ದಾರೆ.

ಈ ಆಸ್ಪತ್ರೆಗಳು ನೌಕರರ ರಾಜ್ಯ ವಿಮಾ ಸಂಸ್ಥೆಯ ಯೋಜನೆಯಡಿ ಆರೋಗ್ಯ ಸೇವೆಗಳ ವಿಸ್ತರಣೆಗೆ ಮಹತ್ವದ ಹೆಜ್ಜೆಯಾಗಿವೆ. ಕಾರ್ಯಕ್ರಮದ ಸಂದರ್ಭದಲ್ಲಿ ಆಸ್ಪತ್ರೆ ನಿರ್ಮಾಣದಲ್ಲಿ ಪಾಲ್ಗೊಂಡ ಕಟ್ಟಡ ಕಾರ್ಮಿಕರನ್ನು ಗೌರವಿಸುವುದರ ಜೊತೆಗೆ ಇಎಸ್‌ಐ ಫಲಾನುಭವಿಗಳಿಗೆ ನಗದು ಸೌಲಭ್ಯಗಳನ್ನು ವಿತರಿಸಲಾಗುತ್ತದೆ. ದೊಡ್ಡಬಳ್ಳಾಪುರದಲ್ಲಿರುವ ಈ



ಆಸ್ಪತ್ರೆ 5 ಎಕರೆ ಪ್ರದೇಶದಲ್ಲಿ ಸುಮಾರು 101.14 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡಿದ್ದು, 1,42,037 ವಿಮೆ ಕಾರ್ಮಿಕರು ಮತ್ತು ಅವರ ಕುಟುಂಬಗಳಿಗೆ ಸೇವೆ ನೀಡಲಿದೆ. ಜೊತೆಗೆ ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ತುಮಕೂರು ಹಾಗೂ ಕೋಲಾರ ಜಿಲ್ಲೆಗಳ ಸುಮಾರು 5.50 ಲಕ್ಷ ಜನರಿಗೆ ಪ್ರಯೋಜನವಾಗಲಿದೆ. ಈ ಬಹು ವಿಶೇಷತೆಗಳ ಆಸ್ಪತ್ರೆಯಲ್ಲಿ ಸಾಮಾನ್ಯ ವೈದ್ಯಕೀಯ, ಶಸ್ತ್ರಚಿಕಿತ್ಸೆ, ಪ್ರಸೂತಿ ಮತ್ತು ಸ್ತ್ರೀರೋಗ ಚಿಕಿತ್ಸಾ ವಿಭಾಗ, ಮಕ್ಕಳ ವೈದ್ಯಕೀಯ, ಮೂಳೆ ಚಿಕಿತ್ಸಾ ವಿಭಾಗ, ತುರ್ತು ಆರೈಕೆ, ವಿಕಿರಣ ಚಿಕಿತ್ಸೆ, ಪ್ರಯೋಗಾಲಯ ಮತ್ತು ರಕ್ತ ಬ್ಯಾಂಕ್ ಸೇರಿದಂತೆ ಸಮಗ್ರ ಸೌಲಭ್ಯಗಳು ಲಭ್ಯವಾಗಲಿವೆ. ಜೊತೆಗೆ 32 ಸಿಬ್ಬಂದಿ ವಸತಿ ಗೃಹಗಳೂ ನಿರ್ಮಿಸಲಾಗಿದೆ.

ಇನ್ನೊಂದೆಡೆ, ಬಳ್ಳಾರಿಯಲ್ಲಿ ನಿರ್ಮಾಣಗೊಳ್ಳಲಿರುವ ಆಸ್ಪತ್ರೆ 5.21 ಎಕರೆ ಪ್ರದೇಶದಲ್ಲಿ ಸುಮಾರು 150 ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದ್ದು, ಪೂರ್ಣಗೊಂಡ ನಂತರ ಸುಮಾರು 64,000 ಕಾರ್ಮಿಕರು ಮತ್ತು ಅವರ ಕುಟುಂಬಗಳಿಗೆ ನೇರವಾಗಿ ಸೇವೆ ನೀಡಲಿದೆ. ಇದರ ಮೂಲಕ ಸುಮಾರು 2 ಲಕ್ಷ ಫಲಾನುಭವಿಗಳಿಗೆ ಆರೋಗ್ಯ ಸೇವೆಗಳು ಲಭ್ಯವಾಗಲಿವೆ. ಕರ್ನಾಟಕದಲ್ಲಿ ಈ ಯೋಜನೆ 1958ರಲ್ಲಿ ಆರಂಭವಾಗಿ ಈಗ ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಿದೆ. ಲಕ್ಷಾಂತರ ಕಾರ್ಮಿಕರು ಹಾಗೂ ಅವರ ಕುಟುಂಬಗಳು ಈ ಯೋಜನೆಯಡಿ ಆರೋಗ್ಯ ಮತ್ತು ನಗದು ಸೌಲಭ್ಯಗಳನ್ನು ಪಡೆಯುತ್ತಿದ್ದು, ಹೊಸ ಆಸ್ಪತ್ರೆಗಳು ಈ ಸೇವೆಯನ್ನು ಮತ್ತಷ್ಟು ಬಲಪಡಿಸಲಿವೆ.

03/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ‘ಅರ್ಹ ಕಾರ್ಮಿಕರಿಗೆ ಸೌಲಭ್ಯಗಳು ದೊರೆಯಲಿ’

ಗುಡಿಬಂಡೆ

ಕಾರ್ಮಿಕರ ಕಲ್ಯಾಣ ನಿಧಿಯಲ್ಲಿ ಕೋಟ್ಯಂತರ ರೂಪಾಯಿ ಇದ್ದರೂ ಅದು ಅರ್ಹ ಹಾಗೂ ನೊಂದಾಯಿತ ಕಾರ್ಮಿಕರಿಗೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ್ ಬಣ) ಜಿಲ್ಲಾಧ್ಯಕ್ಷ ಹೆಚ್.ಪಿ. ರಾಮನಾಥ್ ಹೇಳಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸುರಸದ್ಮಗಿರಿ ವಿದ್ಯುತ್ ವೈರ್‌ಮೆನ್ ಕಾರ್ಮಿಕರ ಸಂಘದ ವತಿಯಿಂದ ವಿಶ್ವ ಕಾರ್ಮಿಕರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಒಳರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಅಪಾರವಾಗಿದೆ ಎಂದು ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಸರ್ಕಾರ ಹಲವು ಸೌಲಭ್ಯಗಳನ್ನು ನೀಡುತ್ತಿದ್ದರೂ ಅವು ಸರಿಯಾದ ರೀತಿಯಲ್ಲಿ ತಲುಪುತ್ತಿಲ್ಲ. ಕೆಲವರು ನಿಜವಾದ ಕಾರ್ಮಿಕರಲ್ಲದಿದ್ದರೂ ಕಾರ್ಮಿಕ ಇಲಾಖೆಯಲ್ಲಿ ನೊಂದಾಯಿಸಿಕೊಂಡು ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ. ಇದರಿಂದ ಅರ್ಹ ಕಾರ್ಮಿಕರಿಗೆ ಅನ್ಯಾಯವಾಗುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ನಕಲಿ ಫಲಾನುಭವಿಗಳನ್ನು ಪತ್ತೆಹಚ್ಚಿ ಅರ್ಹರಿಗೆ ಸೌಲಭ್ಯಗಳು ಸಿಗುವಂತೆ ಮಾಡಲು ಸಂಬಂಧಿತ ಇಲಾಖೆಯ ಅಧಿಕಾರಿಗಳು ಮುಂದಾಗಬೇಕು ಎಂದು ಅವರು ಆಗ್ರಹಿಸಿದರು.

ಕಾರ್ಮಿಕ ಇಲಾಖೆಯ ಅಧಿಕಾರಿ ರಾಕೇಶ್ ಮಾತನಾಡಿ, ನೊಂದಾಯಿತ ಕಾರ್ಮಿಕರಿಗೆ ವಿದ್ಯಾರ್ಥಿವೇತನ, ಉಪಕರಣ ಕಿಟ್‌ಗಳ ವಿತರಣೆ, ಮಾಸಾಶನ ಸೇರಿದಂತೆ ಹಲವು ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು. ನಕಲಿ ಕಾರ್ಮಿಕ ಕಾರ್ಡ್‌ಗಳನ್ನು ರದ್ದುಪಡಿಸುವ ಕಾರ್ಯವೂ ನಡೆಯುತ್ತಿದೆ ಎಂದು ಹೇಳಿದರು.

ಕಾರ್ಮಿಕರು ತಮ್ಮ ಸ್ವಂತ ದುಡಿಮೆಯಿಂದ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿರುವುದು ಶ್ಲಾಘನೀಯ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ಈ ರೀತಿಯ ಸಾಮಾಜಿಕ ಕಾರ್ಯಗಳು ಇನ್ನಷ್ಟು ನಡೆಯಲಿ ಹಾಗೂ ಕಾರ್ಮಿಕ ಇಲಾಖೆಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕ ಆಸ್ಪತ್ರೆಯ ಒಳರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ, ನಂತರ ವೈದ್ಯರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸುರಸದ್ಮಗಿರಿ ವಿದ್ಯುತ್ ವೈರ್‌ಮೆನ್ ಕಾರ್ಮಿಕರ ಸಂಘದ ಆದಿನಾರಾಯಣ, ಗೌಡ, ಅಶ್ವತ್ಥಪ್ಪ, ವೆಂಕಟೇಶ್, ಯಾಮನಾರಾಯಣ ಸೇರಿದಂತೆ ಹಲವರು ಹಾಗೂ ಸಾರ್ವಜನಿಕ ಆಸ್ಪತ್ರೆಯ ವೈದ್ಯರು ಉಪಸ್ಥಿತರಿದ್ದರು.

## ರೈತರ ಮೇಲೆ ಹಲ್ಲೆಗೆ ಖಂಡನೆ: ಕ್ರಮಕ್ಕೆ ಮನವಿ ಸಲ್ಲಿಕೆ

ಶ್ರೀನಿವಾಸಪುರ



ಪಟ್ಟಣದ ತಹಶೀಲ್ದಾರ್ ಕಚೇರಿ ಮುಂಭಾಗದಲ್ಲಿ ಗುರುವಾರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ರೈತರ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ ತಹಶೀಲ್ದಾರ್ ಜಿ.ಎಸ್. ಸುದೀಂದ್ರ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ತಾಲೂಕು ಸಮಿತಿ ಅಧ್ಯಕ್ಷ ವಿ. ನಾರಾಯಣಸ್ವಾಮಿ ಮಾತನಾಡಿ, ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ 13 ಹಳ್ಳಿಗಳ ರೈತರು ತಮ್ಮ ಫಲವತ್ತಾದ ಭೂಮಿಯ ಕೆಐಎಬಿಡಿ ಭೂಸ್ವಾಧೀನ ವಿಚಾರವಾಗಿ ಕಳೆದ 45 ದಿನಗಳಿಂದ ಧರಣಿ ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆಲವು ಖಾಸಗಿ ಗೂಂಡಾಗಳು ಹಾಗೂ ಪೊಲೀಸ್ ಅಧಿಕಾರಿಗಳು ರೈತರ ಮೇಲೆ ಹಲ್ಲೆ ನಡೆಸಿರುವುದು ಖಂಡನೀಯ ಎಂದು ಅವರು ಆರೋಪಿಸಿದರು. ಹಲ್ಲೆ ನಡೆಸಿದವರ ವಿರುದ್ಧ ಹಾಗೂ ಸಂಬಂಧಿತ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ ಎಂದು ಹೇಳಿದರು.


ಕ್ರಮ ಕೈಗೊಳ್ಳದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಕಾರ್ಯದರ್ಶಿ ವೀರಭದ್ರಸ್ವಾಮಿ, ತಾಲೂಕು ಪ್ರಧಾನ ಕಾರ್ಯದರ್ಶಿ ಅಸ್ಲಾಂಪಾಷ, ಮುಖಂಡರಾದ ದೇವರಾಜ್, ಸಿ.ಎಂ. ಶ್ರೀಧರ್, ಯಲವಕುಂಟೆ ಬೈರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಬೆಲೆ ಏರಿಕೆಗೆ ಹೊಣೆ ಯಾರು?

ಬೆಂಗಳೂರು

"ಕೇಂದ್ರ ಸರ್ಕಾರ ಜನಸಾಮಾನ್ಯರ ನೋವನ್ನು ಅರ್ಥ ಮಾಡಿಕೊಳ್ಳಬೇಕಿತ್ತು. ಎಲ್ಲಾ ಪದಾರ್ಥಗಳ ಬೆಲೆ ಆಕಾಶಕ್ಕೇರಿದೆ. ಆದಾಯ ಪಾತಳಕ್ಕೆ ಕುಸಿದಿದೆ. ಬೆಲೆ ಹೆಚ್ಚಳಕ್ಕೆ ಹೊಣೆ ಯಾರು?" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದರು.



ಗಾಂಧಿನಗರದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಉತ್ತರಿಸಿದರು.

ಅಡುಗೆ ಅನಿಲ ಸಿಲಿಂಡರ್ ಬೆಲೆ ಹಾಗೂ ಇತರೆ ಅಗತ್ಯ ಸೇವೆಗಳ ಬೆಲೆ ಏರಿಕೆ ಕುರಿತ "ವಾಣಿಜ್ಯ ಸಿಲಿಂಡರ್ ಬೆಲೆ ಹೆಚ್ಚಳದ ಹೊರೆ ಜನಸಾಮಾನ್ಯರ ಮೇಲೆಯೇ ಹೋಗುತ್ತದೆ. ಇದರಿಂದಾಗಿ ಅನೇಕ ಹೊಟೇಲ್ ಗಳು ಬಂದ್ ಆಗಿವೆ. ಇದರ ಬಗ್ಗೆ ಕೇಂದ್ರ ಸರ್ಕಾರ ಗಮನವಿಡಬೇಕಿತ್ತು. ಸರ್ಕಾರ ಜನರ ಮೇಲಿನ ಹೊರೆ ಇಳಿಸಬೇಕು. ಬೆಲೆ ಏರಿಕೆಯಿಲ್ಲದೇ ಜನಸಾಮಾನ್ಯ ನಿಶ್ಚಿಂತೆಯಿಂದ ಬದುಕುವ ದಾರಿಯನ್ನು ಕೇಂದ್ರ ಸರ್ಕಾರ ಮಾಡಬೇಕಿದೆ" ಎಂದರು.

"ಯುದ್ಧ ನಡೆಯುತ್ತಿರುವ ಹೊತ್ತಿನಲ್ಲಿ ಅಂತರರಾಷ್ಟ್ರೀಯ ಸಂಬಂಧಗಳನ್ನು ಮಿತ್ರ ರಾಷ್ಟ್ರಗಳ ಜೊತೆ ಉಳಿಸಿಕೊಳ್ಳಬೇಕಿರುವುದು ಅತ್ಯವಶ್ಯ. ಅನೇಕ ದೇಶಗಳು ಭಾರತವನ್ನು ಅನೇಕ ರೀತಿಯಲ್ಲಿ ಬೆಂಬಲಿಸಿವೆ. ನಮ್ಮ ವಿದೇಶಾಂಗ ನೀತಿ ವಿಫಲವಾಗದಂತೆ ನೋಡಿಕೊಳ್ಳಬೇಕು"ಎಂದರು.

ಸಚಿವ ಸಂಪುಟ ಸಭೆಯಲ್ಲಿ ಅಲ್ಪಸಂಖ್ಯಾತರ ಪ್ರದೇಶ ಅಭಿವೃದ್ಧಿಗೆ 600 ಕೋಟಿ ಅನುದಾನ ಬಿಡುಗಡೆ ಬಗ್ಗೆ ಕೇಳಿದಾಗ, "ಅದನ್ನು ಮಾತ್ರ ಯಾಕೆ ದೊಡ್ಡದಾಗಿ ಬಿಂಬಿಸುತ್ತೀರಿ? ನಿನ್ನೆ ಸಚಿವ ಸಂಪುಟ ಸಭೆಯಲ್ಲಿ 18 ಸಾವಿರ ಕೋಟಿ ವೆಚ್ಚದಲ್ಲಿ ಬಿಡದಿ ಬಳಿ ಸ್ಯಾಟಲೈಟ್ ಟೌನ್ ಶಿಪ್ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. ಈ ವಿಚಾರ ಬಿಟ್ಟು ಅಲ್ಪಸಂಖ್ಯಾತರಿಗೆ ಕೊಟ್ಟಿರುವ ಅನುದಾನ ಬಗ್ಗೆ ಮಾತ್ರ ಮಾತನಾಡುವುದೇಕೆ?" ಎಂದು ಹೇಳಿದರು.

## ಬುದ್ಧನ ತತ್ವಗಳು ಜಗತ್ತಿಗೆ ಬೆಳಕಾಗಿದೆ: ಕುಲಪತಿ ಪ್ರೊ.ಬಿ.ಕೆ.ರವಿ

ಕೋಲಾರ



ಜಗತ್ತಿನ ಮಹಾನ್ ಮಾನವತಾ ವಾದಿಗಳು ಮತ್ತು ಅವರ ಜೀವನ, ಮಾರ್ಗದರ್ಶನ ಎಲ್ಲವೂ ಸಹ ನೀರಿನಷ್ಟೇ ಸುಲಭವಾಗಿದೆ, ಬುದ್ಧ ಎಂದರೆ ಕೇವಲ ಹೆಸರಲ್ಲ ಒಬ್ಬ ವ್ಯಕ್ತಿಯು ತನ್ನಲ್ಲಿರುವ ಎಲ್ಲಾ ದೌರ್ಬಲ್ಯಗಳನ್ನು ಕಳೆದುಕೊಂಡು ಮುಂದಿನ ಹಂತಕ್ಕೆ ಹೋಗುವುದೇ ಆಗಿದ್ದು, ಬುದ್ಧನ ತತ್ವಗಳು ಜಗತ್ತಿಗೆ ಬೆಳಕಾಗಿದೆ ಎಂದು ಬೆಂಗಳೂರು ಉತ್ತರ ವಿವಿ ಕುಲಪತಿ ಪ್ರೊ.ಬಿ.ಕೆ.ರವಿ ತಿಳಿಸಿದರು.

ಶುಕ್ರವಾರ ನಗರ ಹೊರವಲಯದ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಆಡಳಿತ ಕಚೇರಿಯಲ್ಲಿ ಬುದ್ಧ ಪೌರ್ಣಮಿ ಅಂಗವಾಗಿ ಬುದ್ಧ ನಮನ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡುತ್ತಿದ್ದರು.

ಒಂದು ಧರ್ಮ ಎಂದರೆ ಕೇವಲ ಗುರುಗಳು ಹೇಳುವುದನ್ನು ಒಪ್ಪಿಕೊಳ್ಳುವುದಲ್ಲ ಅಥವಾ ಮೌಢ್ಯಗಳನ್ನು ನಂಬುವುದಲ್ಲ ಭಗವಾನ್ ಬುದ್ಧರು ಹೇಳಿದಂತೆ ಓದುವುದು ಒಳ್ಳೆಯದು ಆದರೆ ಆಲೋಚನೆ ಮಾಡುವುದು ಉತ್ತಮ ಏನೇ ಮಾಡಬೇಕಾದರೂ ತಾಳ್ಮೆ ಬಹಳ ಮುಖ್ಯವಾಗಿರಬೇಕು ಎಂದರು.

ಹೆಣ್ಣು ಹೊನ್ನು ಮಣ್ಣು ಇಂತಹ ವ್ಯಾಮೋಹಗಳಿಗೆ ಒಳಗಾಗುತ್ತಿದ್ದು ಪ್ರಸ್ತುತ ಅಧಿಕಾರವೂ ವ್ಯಾಮೋಹವಾಗಿ ಸೇರ್ಪಡೆಯಾಗುತ್ತಿದೆ ಉಲ್ಲವರೆ ಅಧಿಕಾರವನ್ನು ಅನುಭವಿಸು ವಾಂತಗುತ್ತಿದ್ದಾರೆ ಒಟ್ಟಾರೆ ಬೌದ್ಧಧರ್ಮ ನಿಂತಿರುವುದು ಒಳ್ಳೆಯವನಾಗು, ಒಳ್ಳೆಯದನ್ನು ಮಾಡುವುದರಿಂದ ಮಾತ್ರ ಬೌದ್ಧಧರ್ಮ ನಿಂತಿದೆ ಎಂದು ತಿಳಿಸಿದರು.

ಇಂದು ಬುದ್ಧ ಹುಣ್ಣಿಮೆಯಂತಹ ಪವಿತ್ರ ದಿನದಂದು ನಾವೆಲ್ಲರೂ ಸೇರಿ ಒಂದು ಆತ್ಮ ವಿಮರ್ಶೆ ಮಾಡಿಕೊಳ್ಳೋಣ ನಾವೆಲ್ಲರೂ ಒಳ್ಳೆಯವರಗೋಣ ಅದಕ್ಕೆ ನಾವು ಯಾವುದೇ ತಪ್ಪಸ್ಸು ಮಾಡಬೇಕಾಗಿಲ್ಲ ದೇಹವನ್ನು ದಂಡಿಸಬೇಕಾಗಿಲ್ಲ ಆತ್ಮ ಶೋದಕರಿಗೆ ಬೆಳಕಿಗೆ ಬೆಳಕಗಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ವಿವಿಯ ಕುಲಸಚಿವರಾದ ಲೋಕನಾಥ್, ಸಿ.ಎನ್.ಶ್ರೀಧರ್, ವಿತ್ತಾಧಿಕಾರಿ ವಸಂತಕುಮಾರ್ ಸೇರಿದಂತೆ ವಿವಿಯ ಅಧಿಕಾರಿಗಳು,ಸಿಬ್ಬಂದಿ ಹಾಜರಿದ್ದರು.

## ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಜೆಎಸ್‌ಎಸ್ ಪಾಲಿಟೆಕ್ನಿಕ್‌ನಲ್ಲಿ ಪ್ರವೇಶ ಅವಕಾಶ

ಚಿಕ್ಕಬಳ್ಳಾಪುರ

ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಜೆಎಸ್‌ಎಸ್ ಪಾಲಿಟೆಕ್ನಿಕ್‌ನಲ್ಲಿ ಪ್ರವೇಶಕ್ಕೆ ಅವಕಾಶವಿದ್ದು, ರಾಜ್ಯದ ವಿವಿಧ ಭಾಗಗಳಿಂದ ವಿದ್ಯಾರ್ಥಿಗಳು ಈಗಾಗಲೇ ಸೇರ್ಪಡೆಗೊಂಡಿದ್ದಾರೆ.ಜಿಲ್ಲೆಯ ವಿಶೇಷ ಚೇತನ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್ ಪ್ರಭಾರ ಪ್ರಾಂಶುಪಾಲ ಶಿವಕುಮಾರಸ್ವಾಮಿ ತಿಳಿಸಿದರು.


ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶೇಷ ಚೇತನ ವಿದ್ಯಾರ್ಥಿಗಳಿಗಾಗಿ ಪಾಲಿಟೆಕ್ನಿಕ್‌ನಲ್ಲಿ ಹಲವು ವಿಶೇಷ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದರು. ಇಲ್ಲಿ ಎಂಟು ಕೋರ್ಸ್‌ಗಳಲ್ಲಿ ಪ್ರವೇಶಕ್ಕೆ ಅವಕಾಶವಿದ್ದು, ಮಾತು ಬಾರದವರು, ಶಾರೀರಿಕ ವಿಕಲತೆ ಹೊಂದಿರುವವರು ಹಾಗೂ ದೃಷ್ಟಿದೋಷವುಳ್ಳ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತಿದೆ ಎಂದು ಹೇಳಿದರು.

ಈ ತರಬೇತಿ ಮೂಲಕ ಅನೇಕ ವಿದ್ಯಾರ್ಥಿಗಳು ಸ್ವತಂತ್ರ ಜೀವನ ನಡೆಸುವ ಮಟ್ಟಿಗೆ ಬೆಳೆದಿದ್ದಾರೆ. ಈ ಸಂಸ್ಥೆ ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಮಾತ್ರವೇ ಮೀಸಲಾಗಿದ್ದು, ಸುತ್ತೂರು ಮಠದಿಂದ ರಾಜ್ಯದಾದ್ಯಂತ 350ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳು ನಡೆಯುತ್ತಿವೆ. ಮೈಸೂರಿನಲ್ಲಿರುವ ಈ ಪಾಲಿಟೆಕ್ನಿಕ್ ಕೂಡ ಅವುಗಳಲ್ಲಿ ಒಂದಾಗಿದೆ ಎಂದು ಅವರು ವಿವರಿಸಿದರು.ಕೇಂದ್ರ ಸರ್ಕಾರದಿಂದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವೂ ನೀಡಲಾಗುತ್ತಿದೆ. ಜೂನ್ 5 ಪ್ರವೇಶಕ್ಕೆ ಕೊನೆಯ ದಿನವಾಗಿದ್ದು, 10ನೇ ತರಗತಿ ಉತ್ತೀರ್ಣರಾದ ವಿಶೇಷ ಚೇತನ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಬಹುದು ಎಂದು ತಿಳಿಸಿದರು.

ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ವಸತಿ ಸೌಲಭ್ಯವೂ ಲಭ್ಯವಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0821–2548315 / 316, ಮೊಬೈಲ್: 9844644937 ಸಂಪರ್ಕಿಸಬಹುದು ಎಂದು ಹೇಳಿದರು.

## ‘ಬಿಸಿಲು, ಕಲುಷಿತ ನೀರಿಗೆ ಸಾವಿರಾರು ಮೀನುಗಳ ಸಾವು’

ಚಿಕ್ಕಬಳ್ಳಾಪುರ



ಜಿಲ್ಲೆಯಲ್ಲಿನ ತೀವ್ರ ಬಿಸಿಲು ಹಾಗೂ ಕೆರೆ–ಕಲ್ಯಾಣಿಗಳಲ್ಲಿ ಕಲುಷಿತಗೊಂಡ ನೀರಿನ ಪರಿಣಾಮ ಜಲಚರ ಪ್ರಾಣಿಗಳಿಗೆ, ವಿಶೇಷವಾಗಿ ಮೀನುಗಳಿಗೆ ಭಾರಿ ಹಾನಿ ಉಂಟಾಗಿ ಸಾವಿರಾರು ಮೀನುಗಳು ಸಾವನ್ನಪ್ಪಿರುವ ಘಟನೆಗಳು ವರದಿಯಾಗಿವೆ.

ನಗರಕ್ಕೆ ಹೊಂದಿಕೊಂಡಿರುವ ಕಂದವಾರ ಕೆರೆಗೆ ಸಮರ್ಪಕವಾಗಿ ಶುದ್ಧೀಕರಿಸದ ನೀರು ಹರಿದು ಬರುತ್ತಿರುವುದರಿಂದ ನೀರು ತೀವ್ರವಾಗಿ ಕಲುಷಿತಗೊಂಡಿದ್ದು, ಬೇಸಿಗೆಯ ಬಿಸಿಲಿನ ತಾಪಮಾನದಿಂದ ನೀರಿನ ಗುಣಮಟ್ಟ ಮತ್ತಷ್ಟು ಹದಗೆಟ್ಟಿದೆ. ಇದರಿಂದಾಗಿ ಸಹಸ್ರಾರು ಮೀನುಗಳು ಸಾಮೂಹಿಕವಾಗಿ ಸಾವನ್ನಪ್ಪಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ತಜ್ಞರ ಪ್ರಕಾರ, ಕೆರೆಗಳಲ್ಲಿನ ನೀರು ಪಾತಾಳಕ್ಕೆ ಇಳಿಯುವುದು, ಆಮ್ಲಜನಕದ ಕೊರತೆ ಹಾಗೂ ವಿಷಕಾರಿ ಅಂಶಗಳ ಮಿಶ್ರಣ ಈ ಪರಿಸ್ಥಿತಿಗೆ ಪ್ರಮುಖ ಕಾರಣಗಳಾಗಿವೆ. ಇದರಿಂದ ಜನಜಾನುವಾರುಗಳಿಗೂ ಅಪಾಯ ಉಂಟಾಗುವ ಸಾಧ್ಯತೆ ಇದೆ.

ಈ ಭಾಗದಲ್ಲಿ ಶಾಶ್ವತ ನದಿ ನಾಲೆಗಳು ಇಲ್ಲದ ಕಾರಣ ಬೇಸಿಗೆಯಲ್ಲಿ ಕೆರೆಗಳು ಬತ್ತಿಹೋಗುತ್ತಿವೆ. ಕೆಲವು ಕೆರೆಗಳಿಗೆ ಹರಿದುಬರುವ ಕೊಳಚೆ ನೀರಿನಿಂದ ಮೀನುಗಳು ಉಸಿರಾಡಲು ಸಾಧ್ಯವಾಗದೆ ಸಾಯುತ್ತಿರುವುದು ದುಃಖಕರ ಸಂಗತಿಯಾಗಿದೆ. ನೀರಿನಲ್ಲಿ ವಿಷಕಾರಿ ರಾಸಾಯನಿಕಗಳು ಸೇರುವುದರಿಂದ ಪರಿಸ್ಥಿತಿ ಮತ್ತಷ್ಟು ಗಂಭೀರವಾಗಿದೆ.

ನೀರಿನ ತಾಪಮಾನ ಏರಿಕೆಯಾಗುವುದು ಮತ್ತು ಕೆರೆಗಳಲ್ಲಿ ಹೂಳು ಹೆಚ್ಚಾಗುವುದರಿಂದ ಕರಗಿದ ಆಮ್ಲಜನಕದ ಪ್ರಮಾಣ ಕಡಿಮೆಯಾಗುತ್ತದೆ. ಕೆಲವು ಸಂದರ್ಭಗಳಲ್ಲಿ ಮೀನು ಮರಿಗಳನ್ನು ಅತಿಯಾಗಿ ಬಿಡುವುದರಿಂದಲೂ ಪರಿಸ್ಥಿತಿ ಹದಗೆಡುತ್ತದೆ ಎಂದು ತಿಳಿದುಬಂದಿದೆ.

ಕಂದವಾರ ಕೆರೆಗೆ ಹರಿದುಬರುವ ನೀರಿನ ಗುಣಮಟ್ಟದ ಬಗ್ಗೆ ಪರಿಸರವಾದಿಗಳು ಮತ್ತು ವಿವಿಧ ಸಂಘಟನೆಗಳು ಹಲವು ಬಾರಿ ಪ್ರಶ್ನೆ ಎತ್ತಿದರೂ ಸಮಸ್ಯೆ ಮುಂದುವರಿದಿದೆ. ಶುದ್ಧೀಕರಣವಿಲ್ಲದೆ ಹರಿದುಬರುವ ನೀರೇ ಮೀನುಗಳ ಸಾಮೂಹಿಕ ಸಾವಿಗೆ ಕಾರಣ ಎಂಬ ಆರೋಪಗಳು ಕೇಳಿಬರುತ್ತಿವೆ.

ನಗರದ ಭಾರತೀಯನಗರದ ಕಲ್ಯಾಣಿಯಲ್ಲಿಯೂ ಸಹ ಸಾವಿರಾರು ಮೀನುಗಳು ಸಾವನ್ನಪ್ಪಿ ತೇಲುತ್ತಿರುವುದರಿಂದ ಸುತ್ತಮುತ್ತಲಿನ ವಸತಿ ಪ್ರದೇಶಗಳಲ್ಲಿ ದುರ್ವಾಸನೆ ವ್ಯಾಪಿಸಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಆತಂಕ ವ್ಯಕ್ತವಾಗಿದೆ.

## ಕೋರ್ಟ್ ಮೆಟ್ಟಿಲೇರಿ ನಿರ್ದೇಶಕ ಸ್ಥಾನ ಗೆದ್ದ ಪ್ರಭಾವತಮ್ಮ



ಗುಡಿಬಂಡೆ

ಕಳೆದ ವರ್ಷ ನಡೆದ ಗುಡಿಬಂಡೆ ಪಿ.ಎಲ್.ಡಿ ಬ್ಯಾಂಕ್ ನಿರ್ದೇಶಕರ ಚುನಾವಣೆಯಲ್ಲಿ ಪರಾಭವಗೊಂಡಿದ್ದ ಅಭ್ಯರ್ಥಿ ಪ್ರಭಾವತಮ್ಮ, ಕೋರ್ಟ್ ಮೆಟ್ಟಿಲೇರಿದ್ದರು. ಇದೀಗ ಕೋರ್ಟ್ ಆದೇಶದಂತೆ ಮರು ಎಣಿಕೆ ನಡೆದಿದ್ದು, ಸೋತಿದ್ದ ಪ್ರಭಾವತಮ್ಮ ಇದೀಗ ನಿರ್ದೇಶಕಿಯಾಗಿ ಆಯ್ಕೆಯಾಗಿದ್ದಾರೆ.

2025ರಲ್ಲಿ ನಡೆದ ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಬೀಚಗಾನಹಳ್ಳಿ ಮಹಿಳಾ ಮೀಸಲು ಕ್ಷೇತ್ರದಿಂದ ಸರಸ್ವತಮ್ಮ ಎಂಬುವವರು 24 ಮತಗಳನ್ನು ಪಡೆದು ಜಯ ಗಳಿಸಿದ್ದರು. ಅವರ ಪ್ರತಿಸ್ಪರ್ಧಿ ಪ್ರಭಾವತಮ್ಮ 14 ಮತಗಳನ್ನು ಪಡೆದು ಸೋತಿದ್ದರು.


ಮತದಾನ ಮಾಡಲು ಅರ್ಹತೆ ಇಲ್ಲದವರಿಂದ ಮತ ಹಾಕಿಸಿಕೊಂಡು ಸರಸ್ವತಮ್ಮ ಜಯಗಳಿಸಿದ್ದಾರೆ ಎಂದು ಆರೋಪಿಸಿ ಪ್ರಭಾವತಮ್ಮ ಜಿಲ್ಲಾ ಉಪನಿಬಂಧಕರ ನ್ಯಾಯಾಲಯದ ಮೊರೆ ಹೋಗಿದ್ದರು. ದೂರಿನ ವಿಚಾರಣೆ ನಡೆಸಿದ ನ್ಯಾಯಾಲಯವು, ಅರ್ಹವಲ್ಲದ ಮತಗಳನ್ನು ಹೊರತುಪಡಿಸಿ ಕೇವಲ ಅರ್ಹ ಮತಗಳನ್ನು ಮಾತ್ರ ಪರಿಗಣಿಸಿ ಮರು ಮತ ಎಣಿಕೆ ನಡೆಸುವಂತೆ ಆದೇಶ ನೀಡಿತ್ತು. ಈ ಹಿನ್ನೆಲೆಯಲ್ಲಿ ಗುರುವಾರ ಪಿಎಲ್‌ಡಿ ಬ್ಯಾಂಕ್ ಸಭಾಂಗಣದಲ್ಲಿ ಚುನಾವಣಾ ಅಧಿಕಾರಿ ಪ್ರೇಮ್ ಕುಮಾರ್ ಅವರ ನೇತೃತ್ವದಲ್ಲಿ ಮರು ಮತ ಎಣಿಕೆ ಪ್ರಕ್ರಿಯೆ ನಡೆಯಿತು.

ಮರು ಮತ ಎಣಿಕೆಯಲ್ಲಿ ಪ್ರಭಾವತಮ್ಮ ರವರು 14 ಮತಗಳನ್ನು ಪಡೆದು ಜಯ ಸಾಧಿಸಿದ್ದಾರೆ ಎಂದು ಚುನಾವಣಾಧಿಕಾರಿ ಪ್ರೇಮ್ ಕುಮಾರ್ ಘೋಷಣೆ ಮಾಡಿ ಪ್ರಮಾಣ ಪತ್ರ ವಿತರಣೆ ಮಾಡಿದರು. ಇನ್ನೂ ಜಯಶೀಲರಾಗಿರುವ ಪ್ರಭಾವತಮ್ಮ ನವರನ್ನು ಕಾಂಗ್ರೆಸ್ ಮುಖಂಡರು ಅಭಿನಂದಿಸಿದರು.

ಈ ಸಮಯದಲ್ಲಿ ಪಿ.ಎಲ್.ಡಿ ಬ್ಯಾಂಕ್ ನಿರ್ದೇಶಕ ಲಕ್ಷ್ಮೀನಾರಾಯಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆದಿರೆಡ್ಡಿ. ಮುಖಂಡರಾದ ಪ್ರಕಾಶ್, ರಮೇಶ್, ನವೀನ್, ಕೃಷ್ಣೇಗೌಡ, ಸುಬ್ಬರಾಯಪ್ಪ, ನಂಜುಂಡಪ್ಪ ಸೇರಿದಂತೆ ಹಲವರು ಇದ್ದರು.

## ‘ಜನಸ್ನೇಹಿ ಸೇವೆಯಿಂದಲೇ ಜನಮನದಲ್ಲಿ ಉಳಿಯಲು ಸಾಧ್ಯ’

ಚಿಕ್ಕಬಳ್ಳಾಪುರ



ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಅವಧಿಯಲ್ಲಿ ಜನಸ್ನೇಹಿಯಾಗಿ ಕೆಲಸ ಮಾಡಿದಾಗ ಮಾತ್ರ ಅಧಿಕಾರಿಗಳು ಜನರ ಮನಸ್ಸಿನಲ್ಲಿ ಸದಾ ಉಳಿಯಲು ಸಾಧ್ಯವಾಗುತ್ತದೆ ಎಂದು ಚಿಂತಾಮಣಿ ವಿಭಾಗದ ಡಿವೈಎಸ್ಪಿ ಮುರುಳಿಧರ್ ಹೇಳಿದರು.

ಚಿಂತಾಮಣಿ ತಾಲೂಕಿನ ಜೆ.ಕೆ. ರೆಸಾರ್ಟ್‌ನಲ್ಲಿ ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಸಿ. ನಾರಾಯಣಸ್ವಾಮಿ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರನ್ನು ಸನ್ಮಾನಿಸಿ ಮಾತನಾಡಿದರು.

ಪೊಲೀಸ್ ಇಲಾಖೆ ಸದಾ ಜಾಗೃತವಾಗಿರಬೇಕಾದ ಕ್ಷೇತ್ರವಾಗಿದ್ದು, ನಿವೃತ್ತರಾಗುತ್ತಿರುವ ಸಿಬ್ಬಂದಿಯ ಅನುಭವವೂ ಇಲಾಖೆಗೆ ಅಮೂಲ್ಯವಾಗಿದೆ. ಅವರು ತಮ್ಮ ಅನುಭವವನ್ನು ಮುಂದಿನ ಪೀಳಿಗೆಗೆ ಹಂಚಿಕೊಳ್ಳಬೇಕು. ಪ್ರಾಮಾಣಿಕ ಅಧಿಕಾರಿಗಳ ಮಾರ್ಗದರ್ಶನದಲ್ಲಿ ದಕ್ಷತೆಯಿಂದ ಕೆಲಸ ಮಾಡುವ ಗುಣವನ್ನು ಬೆಳೆಸಿಕೊಳ್ಳಬೇಕು ಎಂದರು.

ನಿವೃತ್ತಿ ಜೀವನವನ್ನು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಆರೋಗ್ಯಕರವಾಗಿ ಸಾಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೆಂಚರ್ಲಹಳ್ಳಿ ವೃತ್ತದ ಪೊಲೀಸ್ ಇನ್ಸ್ಪೆಕ್ಟರ್ ನಾರಾಯಣಸ್ವಾಮಿ ಮಾತನಾಡಿ, ಜನರ ಸಮಸ್ಯೆಗಳಿಗೆ ಕಾನೂನುಬದ್ಧವಾಗಿ ಸ್ಪಂದಿಸಿದಾಗ ಸಮಾಜದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಸಾಧ್ಯವಾಗುತ್ತದೆ ಎಂದರು.

ಗ್ರಾಮಾಂತರ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ಶಿವರಾಜ್ ಮಾತನಾಡಿ, ಸಮಾಜದ ಸಮಸ್ಯೆಗಳನ್ನು ಅರಿತುಕೊಂಡು ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಕರ್ತವ್ಯ ನಿರ್ವಹಿಸಬೇಕು. ಸೇವಾ ಅವಧಿಯಲ್ಲಿ ಯಾವುದೇ ಕಳಂಕವಿಲ್ಲದೆ ನಿವೃತ್ತಿ ಹೊಂದಿರುವ ನಾರಾಯಣಸ್ವಾಮಿ ಅವರ ಸೇವೆ ಶ್ಲಾಘನೀಯ ಎಂದು ಹೇಳಿದರು.

ಶಿಡ್ಲಘಟ್ಟ ಸರ್ಕಲ್ ಇನ್ಸ್ಪೆಕ್ಟರ್ ಆನಂದ್ ಕುಮಾರ್ ಮಾತನಾಡಿ, ಪೊಲೀಸ್ ಇಲಾಖೆಯಲ್ಲಿ ಸೇವಾ ಮನೋಭಾವ ಮತ್ತು ಧೈರ್ಯದಿಂದ ಕಾರ್ಯನಿರ್ವಹಿಸಿದರೆ ಯಶಸ್ಸು ಸಾಧಿಸಬಹುದು ಎಂದು ತಿಳಿಸಿದರು.

ನಿವೃತ್ತ ಸಬ್ ಇನ್ಸ್ಪೆಕ್ಟರ್ ಸಿ. ನಾರಾಯಣಸ್ವಾಮಿ ಮಾತನಾಡಿ, ಸಾರ್ವಜನಿಕ ಸೇವೆ ಮಾಡಲು ಪೊಲೀಸ್ ಇಲಾಖೆ ದೊಡ್ಡ ಅವಕಾಶ ನೀಡಿದೆ. ಆ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದೇನೆ. ಇಲಾಖೆಯ ಮೇಲಾಧಿಕಾರಿಗಳು ಹಾಗೂ ಸಿಬ್ಬಂದಿಯ ಸಹಕಾರದಿಂದಲೇ ಈ ಸಾಧನೆ ಸಾಧ್ಯವಾಗಿದೆ ಎಂದು ಕೃತಜ್ಞತೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಗರ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ವಿ.ಜಿ. ಕುಮಾರ್, ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ನಾಗಮ್ಮ ಸೇರಿದಂತೆ ಹಲವಾರು ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

## ಜಾತ್ರೆ, ಧಾರ್ಮಿಕ ಆಚರಣೆಯಿಂದ ಸಂಸ್ಕೃತಿ, ಪರಂಪರೆಯ ಪುನರುತ್ಥಾನ: ಈಶ್ವರಖಂಡ್ರೆ

ಮಳವಳ್ಳಿ



ಜಾತ್ರೆ, ಉತ್ಸವ, ರಾಜಗೋಪುರ ಲೋಕಾರ್ಪಣೆಯಂತಹ ಧಾರ್ಮಿಕ ಆಚರಣೆಗಳಿಂದ ನಮ್ಮಲ್ಲಿ ಹೊಸ ಚೈತನ್ಯ ಮೂಡುವುದರ ಜೊತೆಗೆ ನಮ್ಮ ಸಂಸ್ಕೃತಿ, ಪರಂಪರೆಯ ಪುನರುತ್ಥಾನವಾಗುತ್ತದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಮಳವಳ್ಳಿ ತಾಲೂಕಿನ ಹಲಸಹಳ್ಳಿ ಗವಿಮಠದಲ್ಲಿಂದು ರಾಜಗೋಪುರ ಮತ್ತು ಬಸವದ್ವಾರ ಲೋಕಾರ್ಪಣೆಯ ಸಮಾರಂಭದಲ್ಲಿ ಮಾತನಾಡಿದ ಅವರು, ಇಂತಹ ಕಾರ್ಯಕ್ರಮಗಳು ಗ್ರಾಮದಲ್ಲಿ ನಡೆದಾಗ ಬಂಧು ಮಿತ್ರರು ಒಗ್ಗೂಡುತ್ತಾರೆ. ಸಂಬಂಧಗಳು ಗಟ್ಟಿಗೊಳ್ಳುತ್ತವೆ ಎಂದರು.

ನಡುಗನ್ನಡ ಮಹಾಕವಿ ಹಾಗೂ ಸಂಸ್ಕೃತ ಕನ್ನಡದಲ್ಲಿ ಪಾಂಡಿತ್ಯ ಹೊಂದಿದ್ದ ಶ್ರೀ ಷಡಕ್ಷರ ದೇವರು ಹಲವು ಕೃತಿಗಳನ್ನು ರಚಿಸಿ ಈ ನಾಡಿಗೆ ಬೆಳಕು ನೀಡಿದ್ದಾರೆ, ಬಸವೇಶ್ವರ ಸ್ವಾಮಿ ಇಲ್ಲಿ ಗುಹೆಯಲ್ಲಿ ಮೂಡಿ ಈ ಕ್ಷೇತ್ರ ಪವಿತ್ರವಾಗಿದೆ ಎಂದರು.

ಪರಿಸರ ಪ್ರೇಮಿಗಳಾಗಿದ್ದ ಪೂರ್ವಜರು:

ನಮ್ಮ ಪೂರ್ವಜರು ಮಹಾನ್ ಪರಿಸರ ಪ್ರೇಮಿಗಳಾಗಿದ್ದರು. ನಮಗೆ ಈ ಭೂಮಿಯಲ್ಲಿ ಬದುಕುವ ಹಕ್ಕು ಇರುವಂತೆಯೇ ಖಗ, ಮೃಗ, ಕೀಟ, ಸಸ್ಯಗಳಿಗೂ ಬದುಕುವ ಹಕ್ಕಿದೆ ಎಂದು ತಿಳಿದಿದ್ದರು. ಬೆಟ್ಟ, ಗುಡ್ಡಗಳನ್ನೂ ಪೂಜಿಸುತ್ತಿದ್ದರು. ವನಮಹೋತ್ಸವ ಆಚರಿಸುವ ಮೂಲಕ ಕಾಡಿಗೆ ಗೌರವ ನೀಡುತ್ತಿದ್ದರು. ಪ್ರಕೃತಿ ಪರಿಸರ ಉಳಿಸಿದ್ದಾರೆ ಎಂದರು.

ಆದರೆ ಇಂದು ಆಧುನಿಕ ಜೀವನಶೈಲಿ ನಮ್ಮ ನಿದ್ದೆ ಗೆಡಿಸಿದೆ. ನಮ್ಮ ಯುವಜನರು ನಮ್ಮ ಸಂಸ್ಕೃತಿ, ಪರಂಪರೆ ಮರೆಯುತ್ತಿದ್ದಾರೆ. ಮದ್ಯಪಾನ, ಧೂಮಪಾನ, ಮಾದಕ ದ್ರವ್ಯ ವ್ಯಸನಿಗಳಾಗಿ ತಮ್ಮ ಬದುಕನ್ನೇ ನಾಶ ಮಾಡಿಕೊಳ್ಳುತ್ತಿದ್ದಾರೆ.

ಇಂತಹ ಯುವಜನರಲ್ಲಿ ಇಂತಹ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಬೇಕು. ನಮ್ಮ ಯುವಜನರು ವ್ಯಸನ ಮುಕ್ತರಾಗಿ, ಶಾರೀರಿಕವಾಗಿ ಸದೃಢರಾಗಿ ಸರಿಯಾದ ಮಾರ್ಗದಲ್ಲಿ ಸಾಗಲು ಪೂಜ್ಯರು ದಾರಿ ತೋರಿಸಬೇಕು ಎಂದರು.

ವೀರಶೈವ ಲಿಂಗಾಯತ ಸಮಾಜಕ್ಕೆ ಭವ್ಯ ಇತಿಹಾಸ ಇದೆ. ನಾವು ಕೇವಲ ನಮ್ಮ ಪೂರ್ವಜರ ಹಿರಿಮೆಯ ಬಗ್ಗೆ ಹೆಮ್ಮೆಪಟ್ಟರೆ ಸಾಲದು, ವರ್ತಮಾನದ ಜೀವಂತಿಕೆಯನ್ನೂ ಉಳಿಸಬೇಕು. ಇದಕ್ಕಾಗಿ ಶ್ರಮಿಸಿ ನಮ್ಮ ಸಮಾಜದ ಗರಿಮೆ ಎತ್ತಿಹಿಡಿಯಬೇಕು ಎಂದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy